
20 ಆಗಸ್ಟ್ 2025 ಬುಧವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 162 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ


# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ



ಮುಂಬೈನಲ್ಲಿ ಸುರಿದ ಭಾರೀ ಮಳೆಯಿಂದ ಗಣೇಶ ಹಬ್ಬಕ್ಕಾಗಿ ಸಿದ್ಧಗೊಳಿಸಿದ ಗಣೇಶ ಮೂರ್ತಿಗಳು ಮಳೆ ನೀರಿನಲ್ಲಿ ಮುಳುಗಿರುವ ದೃಶ್ಯ

ಅದೇ ಭೂಮಿ, ಆಕಾಶ ; ಬದುಕಿನಲ್ಲೆಷ್ಟು ವ್ಯತ್ಯಾಸ ! » 2



ಮಲೆನಾಡು ಕರ್ನಾಟಕ ಘೋಷಿಸಿ ವಿಶೇಷ ಅನುದಾನ ನೀಡಲಿ » 3



ಧರ್ಮಸ್ಥಳ ಕ್ಷೇತ್ರದ ವಿರುದ್ಧ ಆಧಾರ ರಹಿತ ಆರೋಪ » 4


# ಸಂಪನ್ಮೂಲ ಒದಗಿಸಲು ಸಾಲದ ಮೊರೆ

## ರಾಜ್ಯ ಹಣಕಾಸು ವ್ಯವಹಾರಗಳ ಲೆಕ್ಕಪರಿಶೋಧಕರ ವರದಿ ಮಂಡಿಸಿದ ಸಿಎಂ | ಒಳ ಮೀಸಲಾತಿ ಜಾರಿಗೆ ಸಂಪುಟದಲ್ಲಿ ಸುದೀರ್ಘ ಚರ್ಚೆ

• ಪ್ರಜೋದಯ ವರದಿ

**ಬೆಂಗಳೂರು:** ಒಟ್ಟು ರಾಜಸ್ವ ವೆಚ್ಚದಲ್ಲಿ ಶೇ.15 ರಷ್ಟು ಗ್ಯಾರಂಟಿ ಯೋಜನೆ ಅನುಷ್ಠಾನಕ್ಕಾಗಿ ವಿನಿಯೋಗಿಸಿದ್ದು, ಸರ್ಕಾರ ಸಾಲದ ಮೊರೆ ಹೋಗಿರುವುದಾಗಿ ತಿಳಿಸಿದೆ. ಮಂಗಳವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಹಣಕಾಸು ವ್ಯವಹಾರಗಳ ಕುರಿತ ಲೆಕ್ಕಪರಿಶೋಧಕರ ವರದಿ ಮಂಡಿಸಿದರು.

2023-24ನೇ ಸಾಲಿನಲ್ಲಿ ಪಂಚ ಗ್ಯಾರಂಟಿಗಳಿಗಾಗಿ ಸಂಪನ್ಮೂಲ ಒದಗಿಸಲು ರಾಜ್ಯ ಸರ್ಕಾರ ಸಾಲ ಮಾಡಿದೆ. 63 ಸಾವಿರ ಕೋ. ರೂ. ನಿವ್ವಳ ಮಾರುಕಟ್ಟೆ ಸಾಲ ಮಾಡಿದೆ. ಒಟ್ಟು ರಾಜಸ್ವ ವೆಚ್ಚದಲ್ಲಿ ಶೇ.15ರಷ್ಟು ಪಂಚ ಗ್ಯಾರಂಟಿ ಪಾಲು ಹೊಂದಿದೆ. 2023-24ನೇ ಸಾಲಿನಲ್ಲಿ ಗೃಹಲಕ್ಷ್ಮಿಗೆ 16,964 ಕೋ. ರೂ., ಗೃಹ ಜ್ಯೋತಿಗೆ 8,900 ಕೋ.ರೂ., ಅನ್ನ ಭಾಗ್ಯಕ್ಕೆ 7,384 ಕೋ.ರೂ., ಶಕ್ತಿ ಯೋಜನೆಗೆ 3,200 ಕೋ.ರೂ. ಮತ್ತು ಯುವನಿಧಿಗೆ 88 ಕೋ.ರೂ. ಹೊರೆಯಾಗಿದೆ. ಪಂಚ ಗ್ಯಾರಂಟಿಗಳಿಂದ ಸರ್ಕಾರದ ವಿತ್ತೀಯ ಕೊರತೆ 46,623 ಕೋಟಿಯಿಂದ 65,522 ಕೋ. ರೂ.ಗೆ



ಹೆಚ್ಚಳವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ. ಗ್ಯಾರಂಟಿ ಯೋಜನೆಗಳು ಮತ್ತು ಅದರಿಂದ ಉಂಟಾದ ಕೊರತೆಗಳಿಗೆ ಹಣಕಾಸು ಒದಗಿಸಲು ರಾಜ್ಯ ಸರ್ಕಾರ 63 ಸಾವಿರ ಕೋಟಿ ರೂ. ನಿವ್ವಳ ಮಾರುಕಟ್ಟೆ ಸಾಲದ ಮೊರೆ ಹೋಗಿದೆ. ಇದು 2022-23ರ ಸಾಲಿನ ನಿವ್ವಳ ಸಾಲಕ್ಕಿಂತ (26 ಸಾವಿರ ಕೋಟಿ ರೂ.) 37 ಸಾವಿರ ಕೋಟಿ ರೂ. ಅಧಿಕವಾಗಿದೆ.

### ಅಕ್ರಮ ಗಣಿ ಪ್ರಕರಣ ಇತ್ಯರ್ಥಕ್ಕೆ ಕಾನೂನು

ಅಕ್ರಮ ಗಣಿಗಾರಿಕೆ ಪ್ರಕರಣಗಳ ತ್ವರಿತ ಇತ್ಯರ್ಥ ಮಾಡುವ ಉದ್ದೇಶದಿಂದ ವಸೂಲಿ ಆಯುಕ್ತರ ನೇಮಕಾತಿ ಹಾಗು ನ್ಯಾಯಾಲಯ ತೆರೆಯಲು ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಯಿತು. ಕಾನೂನು ಸಚಿವ ಹೆಚ್.ಕೆ. ಪಾಟೀಲ್ ನೇತೃತ್ವದಲ್ಲಿ ಸಚಿವ ಸಂಪುಟ ಉಪ ಸಮಿತಿ ರಚಿಸಲಾಗಿತ್ತು. ಅಕ್ರಮ ಗಣಿಗಾರಿಕೆ ಪ್ರಕರಣಗಳ ಇತ್ಯರ್ಥಕ್ಕೆ ಫಾಸ್ಟ್ ಟ್ರ್ಯಾಕ್ ಕೋರ್ಟ್ ತೆರೆಯಲು ಸಂಪುಟ ಅಸ್ತು ಎಂದಿದೆ.

### ಒಳ ಮೀಸಲಾತಿಗೆ ಹೊಸ ಸೂತ್ರ ಪ್ರಸ್ತಾಪ

ರಾಜ್ಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿರುವ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಜಾರಿ ವಿಚಾರ ಸಚಿವ ಸಂಪುಟ ಸಭೆಯಲ್ಲಿ ಮಂಗಳವಾರ ರಾತ್ರಿ ಗಂಭೀರ ಚರ್ಚೆ ನಡೆಯಿತು. ಪವರ್ ಪಾಯಿಂಟ್ ಪ್ರೆಜೆಂಟೇಷನ್ ಮೂಲಕ ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಮಣಿವಣ್ಣನ್ ಅವರು ಮಾಹಿತಿ ನೀಡಿದರು. ಇದೇ ವೇಳೆ ಹೊಸ ಸೂತ್ರದ ಬಗ್ಗೆ ಪ್ರಸ್ತಾಪ ಮಾಡಲಾಯಿತು.

ವೃತ್ತ ನ್ಯಾಯಮೂರ್ತಿ ಹೆಚ್.ಎನ್. ನಾಗಮೋಹನದಾಸ್ ಆಯೋಗ ಸಲ್ಲಿಸಿರುವ ವರದಿಯಲ್ಲಿರುವ ಜಾತಿವಾರು ವರ್ಗೀಕರಣವನ್ನು ಪರಿಷ್ಕರಿಸಿ, ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವುದು ಸೂಕ್ತ ಎಂದು ಸಮಾಜ ಕಲ್ಯಾಣ ಇಲಾಖೆಯು ಸಚಿವ ಸಂಪುಟಕ್ಕೆ ಪ್ರಸ್ತಾವ ಸಲ್ಲಿಸಿತು. 2011ರ ಜನಗಣತಿಯಂತೆ ಆದಿ ಆಂಧ್ರ, ಆದಿ ದ್ರಾವಿಡ, ಆದಿ ಕರ್ನಾಟಕ ಮತ್ತು ಪರಿಶಿಷ್ಟ ಜಾತಿ ಎಂದು ನಮೂದಿಸಿರುವ ಒಟ್ಟು ಜನಸಂಖ್ಯೆ, ಆಯೋಗದ ವರದಿಯಲ್ಲಿ ಹಂಚಿಕೆ ಮಾಡಲು ಶಿಫಾರಸು ಮಾಡಿರುವ ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಜಾತಿಗಳನ್ನು ಒಂದು ಗುಂಪಾಗಿ ವಿಂಗಡಿಸಿರು ಬಗ್ಗೆ ಹಾಗು ಆಯೋಗವು ತನ್ನ ವರದಿಯಲ್ಲಿ 101 ಪರಿಶಿಷ್ಟ ಜಾತಿಗಳನ್ನು ಐದು ಗುಂಪುಗಳಾಗಿ ವರ್ಗೀಕರಣ ಮಾಡಿ ಶೇ.17 ರಷ್ಟು ಮೀಸಲಾತಿ ಹಂಚಿಕೆ ಮಾಡಿರುವ ಬಗ್ಗೆ ವಿವರ ನೀಡಿತು. ಈ ವೇಳೆ ಆದಿ ಆಂಧ್ರ, ಆದಿ ದ್ರಾವಿಡ ಮತ್ತು ಆದಿ ಕರ್ನಾಟಕ ಜಾತಿಗಳಿಗೆ ಮೀಸಲಾತಿ ಹಂಚಿಕೆ ಬಗ್ಗೆ ಚರ್ಚೆ ಮಾಡಲಾಯಿತು.

### ಬಫರ್ ಝೋನ್ ಕಡಿತ : ಸಭಾತ್ಯಾಗ ಮಾಡಿದ ವಿರೋಧ ಪಕ್ಷದ ಸದಸ್ಯರು

ಬೆಂಗಳೂರು : ಕರ್ನಾಟಕ ಕೆರೆ ಸಂರಕ್ಷಣೆ ಮತ್ತು ಅಭಿವೃದ್ಧಿ ಪ್ರಾಧಿಕಾರ ತಿದ್ದುಪಡಿ ಮಸೂದೆ ಕುರಿತು ಚರ್ಚಿಸಲು ಸದನ ಸಮಿತಿ ರಚಿಸಬೇಕೆಂಬ ಬೇಡಿಕೆಗೆ ಮನ್ನಣೆ ಸಿಗದ ಕಾರಣ ವಿಧಾನಸಭೆಯಲ್ಲಿ ವಿರೋಧ ಪಕ್ಷದ ಸದಸ್ಯರು ಸಭಾತ್ಯಾಗ ಮಾಡಿದರು. ಅದರ ನಡುವೆಯೇ ಸರ್ಕಾರ ಮಸೂದೆಗೆ ಅಂಗೀಕಾರ ಪಡೆಯಿತು.
ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು ಅವರು ತಿದ್ದುಪಡಿ ಮಸೂದೆಯನ್ನು ಮಂಡಿಸಿದರು. ರಾಜ್ಯದಲ್ಲಿರುವ ಕೆರೆಗಳಿಗೆ ಏಕರೂಪದಲ್ಲಿ 30 ಮೀಟರ್ ಬಫರ್ ಝೋನ್ ಕಡಿತಗೊಳಿಸಲು ಅವಕಾಶ ಕಲ್ಪಿಸುವ ಈ ತಿದ್ದುಪಡಿಗೆ ಬಿಜೆಪಿಯ ಎಸ್.ಸುರೇಶ್ ಕುಮಾರ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು.

## ರಾಷ್ಟ್ರಪತಿ ಪ್ರಶ್ನಿಸುವುದರಲ್ಲಿ ತಪ್ಪೇನಿದೆ: ಸುಪ್ರೀಂ





• ಪ್ರಜೋದಯ ವರದಿ

ನವದೆಹಲಿ: ರಾಜ್ಯಗಳ ವಿಧಾನ ಸಭೆಗಳು ಅಂಗೀಕರಿಸಿದ ಮಸೂದೆಗಳಿಗೆ ಅಂಕಿತ ಹಾಕಲು ಕಾಲಮಿತಿ ನಿಗದಿಪಡಿಸುವುದಕ್ಕೆ ಸಂಬಂಧಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸ್ಪಷ್ಟನೆ ಕೇಳಿರುವುದರಲ್ಲಿ ತಪ್ಪೇನಿದೆ ಎಂದು ಸುಪ್ರೀಂ ಕೋರ್ಟ್ ಮಂಗಳವಾರ ಪ್ರಶ್ನಿಸಿತು.

ತಮಿಳುನಾಡು ಮತ್ತು ಕೇರಳ ಸರ್ಕಾರಗಳ ಪರ ವಕೀಲರು ರಾಷ್ಟ್ರಪತಿಯವರು ಸ್ಪಷ್ಟನೆ ಕೋರಿರುವುದನ್ನು ವಿರೋಧಿಸಿದ್ದು, ಅದು ವಿಚಾರಣೆಗೆ ಯೋಗ್ಯವೇ ಎಂದು ಪ್ರಶ್ನಿಸಿದರು. ಬಳಿಕ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ನೇತೃತ್ವದ ಐವರು ನ್ಯಾಯಮೂರ್ತಿಗಳನ್ನು ಒಳಗೊಂಡ ನ್ಯಾಯಪೀಠವು, ರಾಷ್ಟ್ರಪತಿ ಸ್ಪಷ್ಟನೆ ಕೇಳಿರುವುದರಲ್ಲಿ ತಪ್ಪೇನಿದೆ. ಈ ವಿಚಾರದ ಪ್ರತಿವಾದವನ್ನು ನಿಜಕ್ಕೂ ನೀವು ಗಂಭೀರವಾಗಿ ಪರಿಗಣಿಸಿದ್ದೀರಾ ಎಂದು ಕೇಳಿತು.

ಸಂವಿಧಾನದ 143(1)ನೇ ವಿಧಿಯಡಿ ದತ್ತವಾದ ಅಧಿಕಾರವನ್ನು ಬಳಸಿಕೊಂಡು, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸುಪ್ರೀಂ ಕೋರ್ಟ್‌ನಿಂದ ಸ್ಪಷ್ಟನೆ ಕೇಳಿದ್ದಾರೆ. ಕಾಲಮಿತಿಯೊಳಗೆ ಅಂಕಿತ ಹಾಕಬೇಕೆಂದು ಹೇಳುವುದರಿಂದ ಸರ್ಕಾರದ ಒಂದು ಅಂಗವೇ ಹೆಚ್ಚಿನ ಅಧಿಕಾರ ಹೊಂದಿದಂತಾಗಲಿದೆ. ಇದರಿಂದ ಸಾಂವಿಧಾನಿಕ ವ್ಯವಸ್ಥೆಗೆ ಧಕ್ಕೆ ಉಂಟಾಗಲಿದೆ ಎಂದು ಕೇಂದ್ರ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಅಭಿಪ್ರಾಯ ದಾಖಲಿಸಿದೆ. ಈ ವಿಷಯದಲ್ಲಿ ನಮ್ಮ ವ್ಯಾಪ್ತಿಯು ಸಲಹೆ ನೀಡುವುದಕ್ಕಷ್ಟೆ ಸೀಮಿತವಾಗಿದೆ ಎಂದೂ ಪೀಠವು ತಿಳಿಸಿತು.

# ಆ.23, 24ರಂದು ರೈಲುಗಳ ಸಂಚಾರ ರದ್ದು

## ಅರಸೀಕೆರೆ-ಬಾಣಾವರ, ಹಬ್ಬನಘಟ್ಟ ನಿಲ್ದಾಣಗಳಲ್ಲಿ ಸಿಗ್ನಲಿಂಗ್ ಕಾಮಗಾರಿ

• ಪ್ರಜೋದಯ ವರದಿ

**ಹಾಸನ:** ಅರಸೀಕೆರೆ-ಬಾಣಾವರ ಹಾಗು ಅರಸೀಕೆರೆ-ಹಬ್ಬನಘಟ್ಟ ನಿಲ್ದಾಣಗಳ ನಡುವೆ ಪ್ರಮುಖ ಸಿಗ್ನಲಿಂಗ್ ಮತ್ತು ಬ್ಲಾಕ್ ಇನ್‌ಸ್ಟ್ರುಮೆಂಟ್ ಬದಲಾವಣೆ ಕಾಮಗಾರಿ ನಡೆಯುವ ಹಿನ್ನಲೆ ಆ.23 ಮತ್ತು 24 ರಂದು ಕೆಲವು ರೈಲು ಸೇವೆಗಳನ್ನು ರದ್ದುಗೊಳಿಸಲಾಗಿದೆ. ಇನ್ನು ಕೆಲವು ರೈಲುಗಳ ಸಂಚಾರ ಭಾಗಶಃ ರದ್ದುಗೊಳಿಸಲಾಗಿದೆ. ಕೆಲ ರೈಲುಗಳ ಪ್ರಯಾಣದ ಸಮಯ ಮರು ನಿಗದಿಪಡಿಸಲಾಗಿದೆ.

### ಯಾವೆಲ್ಲ ರೈಲುಗಳು ರದ್ದು

ಆ.23ರಂದು ರೈಲು ಸಂಖ್ಯೆ 06270 ಎಂವಿಟಿ ಬೆಂಗಳೂರು-ಮೈಸೂರು ಡೈಲಿ ಪ್ಯಾಸೆಂಜರ್ ರೈಲು ರದ್ದುಗೊಳ್ಳಲಿದೆ. ಆ.24ರಂದು, ಮೈಸೂರು-ಎಂವಿಟಿ ಬೆಂಗಳೂರು ಡೈಲಿ ಪ್ಯಾಸೆಂಜರ್ (06269), ಶಿವಮೊಗ್ಗಾ ಟೌನ್-ಮೈಸೂರು ಡೈಲಿ ಎಕ್ಸ್‌ಪ್ರೆಸ್ (16226), ಮೈಸೂರು-ಶಿವಮೊಗ್ಗಾ ಟೌನ್ ಡೈಲಿ ಎಕ್ಸ್‌ಪ್ರೆಸ್ (16225), ಅರಸೀಕೆರೆ-ಮೈಸೂರು ಡೈಲಿ ಪ್ಯಾಸೆಂಜರ್ (56267), ಮೈಸೂರು-ಅರಸೀಕೆರೆ ಡೈಲಿ ಪ್ಯಾಸೆಂಜರ್ (56268), ಮೈಸೂರು-ಅರಸೀಕೆರೆ ಡೈಲಿ ಪ್ಯಾಸೆಂಜರ್ (56266) ಮತ್ತು ಅರಸೀಕೆರೆ-ಮೈಸೂರು ಡೈಲಿ ಪ್ಯಾಸೆಂಜರ್ (56265) ರೈಲುಗಳ ಸಂಚಾರ ಒಂದು ದಿನದ ಮಟ್ಟಿಗೆ ರದ್ದಾಗಲಿದೆ.

ಆ.24ರಂದು ರೈಲು ಸಂಖ್ಯೆ 56271 ಶಿವಮೊಗ್ಗಾ ಟೌನ್-ಚಿಕ್ಕಮಗಳೂರು ಡೈಲಿ ಪ್ಯಾಸೆಂಜರ್ ರೈಲು, ಶಿವಮೊಗ್ಗಾ ಟೌನ್ ಮತ್ತು ಬೀರೂರು ನಡುವೆ ಭಾಗಶಃ ರದ್ದುಗೊಳ್ಳಲಿದೆ. ಈ ರೈಲು ಬೀರೂರಿನಿಂದ ನಿಗದಿತ ಸಮಯದಲ್ಲಿ ಪ್ರಯಾಣ ಆರಂಭಿಸಲಿದೆ.

### ಸಮಯ ಬದಲಾವಣೆ

ಆಗಸ್ಟ್ 24 ರಂದು ಹೊರಡುವ ಈ ಕೆಳಗಿನ ರೈಲುಗಳ ಪ್ರಯಾಣ ಸಮಯದಲ್ಲಿ ಬದಲಾವಣೆ ಮಾಡಲಾಗಿದೆ. ರೈಲು ಸಂಖ್ಯೆ 16587 ಯಶವಂತಪುರ-ಬಿಕಾನೇರ್ ದ್ವಿ-ಸಾಪ್ತಾಹಿಕ ಎಕ್ಸ್-ಪ್ರೆಸ್ ರೈಲು ಯಶವಂತಪುರದಿಂದ 60 ನಿಮಿಷ ತಡವಾಗಿ ಹೊರಡಲಿದೆ ಮತ್ತು ಮಾರ್ಗಮಧ್ಯೆ 90 ನಿಮಿಷಗಳ ಕಾಲ ನಿಯಂತ್ರಿಸಲಾಗುತ್ತದೆ.

ರೈಲು ಸಂಖ್ಯೆ 18112 ಯಶವಂತಪುರ-ಟಾಟಾನಗರ ಸಾಪ್ತಾಹಿಕ ಎಕ್ಸ್‌ಪ್ರೆಸ್, 12649 ಯಶವಂತಪುರ-ಹಜರತ್ ನಿಜಾಮುದ್ದೀನ್ ಸಂಪರ್ಕ ಕ್ರಾಂತಿ ಎಕ್ಸ್‌ಪ್ರೆಸ್, ಮತ್ತು 12725 ಕೆಎಸ್‌ಆರ್ ಬೆಂಗಳೂರು-ಧಾರವಾಡ, ಸಿದ್ಧಗಂಗಾ ದೈನಿಕ ಎಕ್ಸ್‌ಪ್ರೆಸ್ ರೈಲುಗಳನ್ನು ಮಾರ್ಗಮಧ್ಯೆ 60 ರಿಂದ 75 ನಿಮಿಷಗಳ ಕಾಲ ನಿಯಂತ್ರಿಸಲಾಗುತ್ತದೆ ಮತ್ತು ರೈಲು ಸಂಖ್ಯೆ 17325 ಬೆಳಗಾವಿ-ಮೈಸೂರು ವಿಶ್ವಮಾನವ ದೈನಿಕ ಎಕ್ಸ್‌ಪ್ರೆಸ್ ಮಾರ್ಗಮಧ್ಯೆ 90 ನಿಮಿಷಗಳ ಕಾಲ ನಿಯಂತ್ರಣವಾಗಲಿದೆ ಎಂದು ನೈರುತ್ಯ ರೈಲ್ವೆ ವಲಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ತಗ್ಗಿದ ಮಳೆ ಅಬ್ಬರ: ಹೆದ್ದಾರಿಯಲ್ಲಿ ನಿಲ್ಲದ ಗುಡ್ಡ ಕುಸಿತ

## ಮಳೆ ಜೋರಾದರೆ ಮನೆಗಳು | ಚರ್ಚ್ ನೆಲಸಮವಾಗುವ ಭೀತಿ | ರಸ್ತೆಯ ಒಂದು ಬದಿ ಸಂಚಾರ ಸ್ಥಗಿತ

• ಪ್ರಜೋದಯ ವರದಿ

**ಹಾಸನ:** ಮಲೆನಾಡು ಭಾಗದಲ್ಲಿ ಮಳೆಯ ಅಬ್ಬರ ಕೊಂಚ ತಗ್ಗಿದ್ದರೂ ಗುಡ್ಡ ಕುಸಿತದಿಂದ ಸ್ಥಳೀಯರು ಮತ್ತು ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ಮಾಡುವ ಪ್ರಯಾಣಿಕರು, ವಾಹನ ಸವಾರರು ಜೀವಭಯದಲ್ಲೇ ಓಡಾಡುವಂತಾಗಿದೆ.

ಮಂಗಳವಾರ ಸಕಲೇಶಪುರ ಪಟ್ಟಣದ ಹೊರ ವಲಯದ ಬೈಪಾಸ್ ರಸ್ತೆಯಲ್ಲಿ ಗುಡ್ಡ ಕುಸಿತದಿಂದ ಮೇಲ್ಭಾಗದ ವಾಸದ ಮನೆಗಳ ಜನರು ಆತಂಕದಲ್ಲಿ ಜೀವನ ಸಾಗಿಸುವಂತಾಗಿದೆ. ಮಳೆ ಜೋರಾಗಿ ಮತ್ತಷ್ಟು ಮಣ್ಣು ಕುಸಿದರೆ ಮನೆಗಳು ನೆಲಸಮವಾಗುವ ಭೀತಿ ಎದುರಾಗಿದೆ.

ರಸ್ತೆ ವಿಸ್ತರಣೆಗಾಗಿ 100 ಅಡಿಗೂ ಎತ್ತರದ ಗುಡ್ಡವನ್ನು ಕಡಿದಾಗಿ ಬಗೆದಿರುವುದರಿಂದ ಕಳೆದ 3 ತಿಂಗಳಿನಿಂದ ಸುರಿಯುತ್ತಿರುವ ಮಳೆಗೆ ಮಣ್ಣಿನ



ತೇವಾಂಶ ಹೆಚ್ಚಾಗಿ ಮಣ್ಣು ನಿರಂತರವಾಗಿ ಕುಸಿಯುತ್ತಿದೆ. ದೊಡ್ಡ ಕಲ್ಲಿನ ಬಂಡೆಯ ಜೊತೆ ಮಣ್ಣು ಕುಸಿಯುತ್ತಿರುವುದರಿಂದ ರಸ್ತೆ ಸುರಕ್ಷತೆಗಾಗಿ ಕಟ್ಟಿದ್ದ ತಡೆಗೋಡೆಗೂ ಹಾನಿಯಾಗಿದ್ದು, ಅಪಾಯ ಹೆಚ್ಚಾಗುವ ಆತಂಕ ಎದುರಾಗಿದೆ.

ಹೆಗ್ಗದ್ದೆ ಬಳಿ ಕಳೆದ ಎರಡು ತಿಂಗಳಿನಿಂದ ನಿರಂತರವಾಗಿ ಮಣ್ಣು ಕುಸಿಯುತ್ತಲೇ ಇದೆ. ಭಾರೀ ಪ್ರಮಾಣದ ಮಣ್ಣು ಕುಸಿದು ರಸ್ತೆಯ ಒಂದು ಬದಿಯಲ್ಲಿ ವಾಹನಗಳ ಸಂಚಾರವನ್ನೇ ಬಂದ್ ಮಾಡಲಾಗಿದೆ. ಚತುಷ್ಪಥ ರಸ್ತೆಯ ಒಂದು ಬದಿಯನ್ನು ಮಣ್ಣಿನ ರಾಶಿ ಸಂಪೂರ್ಣ ಆವರಿಸಿಕೊಂಡಿರುವುದರಿಂದ ಶಿರಾಡಿಘಾಟ್ ರಸ್ತೆಯನ್ನು ವಾಹನ ದಟ್ಟಣೆ ಹೆಚ್ಚಾಗುತ್ತಿದೆ. ಕುಸಿದಿರುವ ಮಣ್ಣನ್ನು ತೆರವುಗೊಳಿಸುವುದೇ ದೊಡ್ಡ ಸವಾಲಿನ ಕೆಲಸವಾಗಿದೆ.

ಸ್ಥಳೀಯರು ಸಾಕಷ್ಟು ಬಾರಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಮನವಿ ಮಾಡಿದ್ದರೂ ಸ್ಪಂದನೆ ನೀಡಿಲ್ಲ, ರಸ್ತೆಯಲ್ಲಿ ಬಿದ್ದಿರುವ ಮಣ್ಣು ತೆರವು ಗೊಳಿಸಲು ನಿರ್ಲಕ್ಷ್ಯ ತೋರಿದ್ದಾರೆಂದು ಸ್ಥಳೀಯರು ಆರೋಪಿಸಿದ್ದಾರೆ.

### ಚರ್ಚ್‌ನಲ್ಲಿ ಪ್ರಾರ್ಥನೆ ಬಂದ್

ಸಕಲೇಶಪುರ ತಾಲ್ಲೂಕಿನ ಹೆಗ್ಗದ್ದೆ ಗ್ರಾಮದ ಸಮೀಪ ರಸ್ತೆಗೆ ಹೊಂದಿಕೊಂಡಂತೆ ಗುಡ್ಡದ ಮೇಲಿರುವ ಚರ್ಚ್ ಹಾಗು ಫಾದರ್ ವಾಸದ ಮನೆಗೆ ಕುಸಿಯುವ ಹಂತಕ್ಕೆ ತಲುಪಿದೆ. ಚರ್ಚ್ ಸಮೀಪವೇ ಭಾರೀ ಪ್ರಮಾಣದ ಮಣ್ಣು ಕುಸಿದಿರುವುದರಿಂದ ಮತ್ತಷ್ಟು ಮಳೆ ಹೆಚ್ಚಾದರೆ ವಾಸದ ಮನೆ, ಚರ್ಚ್ ಕುಸಿದು ನೆಲಸಮವಾಗುವ ಆತಂಕ ಎದುರಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಭಾನುವಾರ ಚರ್ಚ್‌ಗೆ ತೆರಳಿ ಪ್ರಾರ್ಥನೆ ಮಾಡದಂತೆ ತಹಶೀಲ್ದಾರ್ ಸೂಚನೆ ನೀಡಿದ್ದಾರೆ.

### ಹೇಮಾವತಿ ಜಲಾಶಯ ನೀರಿನ ಮಟ್ಟ

ನೀರಿನ ಸಂಗ್ರಹ ಸಾಮರ್ಥ್ಯ – 37.103 ಟಿಎಂಸಿ
ಸದ್ಯ ಜಲಾಶಯದಲ್ಲಿರುವ ನೀರು – 36.475 ಟಿಎಂಸಿ
ಗರಿಷ್ಠ ಮಟ್ಟ – 2922.00
ಸದ್ಯದ ನೀರಿನ ಮಟ್ಟ – 2921.35
ಒಳಹರಿವು – 30,254 ಕ್ಯೂಸೆಕ್
ಹೊರಹರಿವು – 36,350 ಕ್ಯೂಸೆಕ್

# ಶಾಲೆ ಗೋಡೆ ಕುಸಿತ: ರಜೆಯಿಂದ ತಪ್ಪಿದ ಅನಾಹುತ

• ಪ್ರಜೋದಯ ವರದಿ

**ಸಕಲೇಶಪುರ:** ಮಲೆನಾಡು ಭಾಗದಲ್ಲಿ ಸುರಿಯುತ್ತಿರುವ ಗಾಳಿ-ಮಳೆಗೆ ಶಾಲೆಯ ಗೋಡೆ ಹಾಗು ಛಾವಣಿ ಕುಸಿದು ಬಿದ್ದಿರುವ ಘಟನೆ ತಾಲ್ಲೂಕಿನ ಕಡಗರವಳ್ಳಿ ಗ್ರಾಮದಲ್ಲಿ ನಡೆದಿದೆ.

ಕಳೆದ ಎರಡು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ಕಡಗರವಳ್ಳಿ ಗ್ರಾಮದ ಹಿರಿಯ ಪ್ರಾಥಮಿಕ ಶಾಲೆಯ ಗೋಡೆ ಹಾಗು ಹೆಂಚುಗಳು ಕುಸಿದು ಬಿದ್ದಿವೆ. ಮಂಗಳವಾರ ಸಕಲೇಶಪುರ ತಾಲ್ಲೂಕಿನ ಎಲ್ಲಾ ಅಂಗನವಾಡಿ, ಪ್ರಾಥಮಿಕ, ಪ್ರೌಢಶಾಲೆಗಳಿಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ರಜೆ ನೀಡಿದ್ದರು. ಶಾಲೆಗೆ ವಿದ್ಯಾರ್ಥಿಗಳು ಹಾಜರಾಗದ ಕಾರಣ ಭಾರೀ ಅನಾಹುತವೊಂದು ತಪ್ಪಿದಂತಾಗಿದೆ.

ಶಾಲಾ ಕಟ್ಟಡ ಶಿಥಿಲಗೊಂಡಿದ್ದರೂ ತೆರವುಗೊಳಿಸಿ, ಹೊಸ ಕಟ್ಟಡ ನಿರ್ಮಾಣಕ್ಕೆ ಮುಂದಾಗದ ಅಧಿಕಾರಿ



ಗಳು ಹಾಗು ಶಿಕ್ಷಣ ಇಲಾಖೆ ವಿರುದ್ಧ ಪೋಷಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಶಾಲಾ ಕಟ್ಟಡಕ್ಕೆ ಹಾನಿಯಾಗಿರುವುದರಿಂದ, ಬಾಕಿ ಉಳಿದಿರುವ ಕಟ್ಟಡವೂ ಕುಸಿಯುವ ಹಂತಕ್ಕೆ ತಲುಪಿದೆ. ನಾಳೆಯಿಂದ ಮಕ್ಕಳನ್ನು ಎಲ್ಲಿಗೆ ಕಳುಹಿಸಬೇಕೆಂದು ಪೋಷಕರು ಪ್ರಶ್ನಿಸಿದ್ದಾರೆ.

ತಾಲ್ಲೂಕಿನಲ್ಲಿ ಶಿಥಿಲಗೊಂಡಿರುವ ಶಾಲಾ ಕಟ್ಟಡಗಳು ಸಾಕಷ್ಟಿವೆ. ದುರಸ್ತಿಗೊಳಿಸಲು ಹಾಗು ಹೊಸ ಕಟ್ಟಡ ನಿರ್ಮಾಣಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರೂ ಈವರೆಗೂ ಕೊಠಡಿಗಳ ನಿರ್ಮಾಣ ಕಾಮಗಾರಿ ಆರಂಭಿಸದಿರುವುದರಿಂದ ಮಕ್ಕಳು ನಿತ್ಯ ಆತಂಕದಲ್ಲೇ ಪಾಠ ಕೇಳುವ ಸ್ಥಿತಿ ಎದುರಾಗಿದೆ. ಮಳೆ ಬಂದಾಗ ಶಾಲಾ ಕಟ್ಟಡಗಳು ಸೋರುತ್ತಿರುವುದರಿಂದ ಒಂದೇ ಕೊಠಡಿಯಲ್ಲಿ ಎರಡ್ಮೂರು ತರಗತಿಯ ವಿದ್ಯಾರ್ಥಿಗಳನ್ನು ಕೂರಿಸಿ ಕಲಿಸಬೇಕಾದ ಸಂದಿಗ್ಧ ಪರಿಸ್ಥಿತಿ ಶಿಕ್ಷಕರ ಮೇಲಿದೆ.

ಮಲೆನಾಡು ಭಾಗದ ಬಹುತೇಕ ಹೆಂಚಿನ ಕಟ್ಟಡಗಳ ಶಾಲೆಗಳ ಪರಿಸ್ಥಿತಿ ಇದೇ ರೀತಿ ಇದೆ. ಕೂಡಲೇ ಎಚ್ಚೆತ್ತುಕೊಂಡು ಹೊಸ ಕೊಠಡಿಗಳ ನಿರ್ಮಾಣ, ಕಟ್ಟಡ, ಛಾವಣಿ ದುರಸ್ತಿಗೆ ಮುಂದಾಗದಿದ್ದರೆ ವಿದ್ಯಾರ್ಥಿಗಳ ಕಲಿಕೆಗೆ ತೊಂದರೆಯಾಗಲಿದೆ ಎಂದು ಪೋಷಕರು ಆತಂಕದಲ್ಲಿದ್ದಾರೆ.

## ಬೇಲೂರು ತಹಶೀಲ್ದಾರ್ ವಿರುದ್ಧ ತಿಮ್ಮಕ್ಕ ದೂರು

• ಪ್ರಜೋದಯ ವರದಿ



**ಹಾಸನ:** ತಾವು ಪೋಷಿಸಿದ್ದ 200ಕ್ಕೂ ಹೆಚ್ಚು ಗಿಡಗಳನ್ನು ಅಕ್ರಮವಾಗಿ ತೆರವು ಮಾಡಿದ್ದಾರೆಂದು ಆರೋಪಿಸಿ ಬೇಲೂರು ತಹಶೀಲ್ದಾರ್ ವಿರುದ್ಧ ಗೃಹ ಸಚಿವ ಜಿ.ಪರಮೇಶ್ವರ್ ಅವರಿಗೆ ಸಾಲು ಮರದ ತಿಮ್ಮಕ್ಕ ದೂರು ನೀಡಿದ್ದಾರೆ.

ಬೇಲೂರು ತಾಲ್ಲೂಕು ಕಚೇರಿ ಹಿಂಭಾಗದಲ್ಲಿ ಸಾಲು ಮರದ ತಿಮ್ಮಕ್ಕ ನೆಟ್ಟಿದ್ದ ಸುಮಾರು ಇನ್ನೂರಕ್ಕೂ ಹೆಚ್ಚು ಗಿಡಗಳನ್ನು ಅಕ್ರಮವಾಗಿ ತಹಶೀಲ್ದಾರ್ ಶ್ರೀಧರ್ ಕಂಕನವಾಡಿ ಅವರು ತೆರವುಗೊಳಿಸಿದ್ದಾರೆಂದು ಆರೋಪಿಸಿ, ಕ್ರಮ ತೆಗೆದುಕೊಳ್ಳುವಂತೆ ಒತ್ತಾಯಿಸಿದ್ದಾರೆ.

# ಜಾತಿವಾರು ಸಮೀಕ್ಷೆ: ಲಿಂಗಾಯತ ಜನಪ್ರತಿನಿಧಿಗಳ ಸಭೆ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯ ಸರ್ಕಾರ ಹೊಸದಾಗಿ ನಡೆಸಲಿರುವ ಜಾತಿವಾರು ಸಮೀಕ್ಷೆ ವೇಳೆ ವೀರಶೈವ -ಲಿಂಗಾಯತ ಸಮುದಾಯದ ನೈಜ ಸಂಖ್ಯೆಯನ್ನು ಖಚಿತಪಡಿಸುವ ಕುರಿತು ವೀರಶೈವ-ಲಿಂಗಾಯತ ಸಮುದಾಯದ ಕಾಂಗ್ರೆಸ್ ಸಚಿವರು, ಶಾಸಕರು ಚರ್ಚೆ ನಡೆಸಿದ್ದಾರೆ.

ಇದೇ 22ರಂದು ಪಕ್ಷಾತೀತವಾಗಿ ಸಮುದಾಯದ ನಾಯಕರ ಸಭೆ ಕರೆದು ಮುಂದಿನ ಕಾರ್ಯತಂತ್ರದ ಬಗ್ಗೆ ಚರ್ಚಿಸಲು ಸಭೆಯಲ್ಲಿ ನಿರ್ಧರಿಸಲಾಗಿದೆ. ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ನಿವಾಸದಲ್ಲಿ ನಡೆದ ಸಭೆಯಲ್ಲಿ ಸಚಿವರಾದ ಎಂ.ಬಿ. ಪಾಟೀಲ, ಲಕ್ಷ್ಮೀ ಹೆಬ್ಬಾಳ್ಕರ್, ಶಿವಾನಂದ ಪಾಟೀಲ, ಶರಣಬಸಪ್ಪ ದರ್ಶನಾಪೂರ, ಶರಣ ಪ್ರಕಾಶ್ ಪಾಟೀಲ, ಮುಖ್ಯಮಂತ್ರಿಯ ಆರ್ಥಿಕ ಸಲಹೆಗಾರ ಬಸವರಾಜ



ರಾಯರಡ್ಡಿ, ಮುಖ್ಯ ಸಚೇತಕ ಅಶೋಕ ಪಟ್ಟಣ, ಶಾಸಕರಾದ ಬಿ.ಆರ್. ಪಾಟೀಲ, ಲಕ್ಷ್ಮಣ ಸವದಿ ಸೇರಿ 34ಕ್ಕೂ ಹೆಚ್ಚು ಜನಪ್ರತಿನಿಧಿಗಳು, ವೀರಶೈವ-ಲಿಂಗಾಯತ ಮಹಾಸಭಾದ ರಾಜ್ಯ ಘಟಕದ ಅಧ್ಯಕ್ಷ ಶಂಕರ ಬಿದರಿ ಮತ್ತಿತರರು ಇದ್ದರು.

ಸಮುದಾಯದ ಎಲ್ಲರನ್ನೂ ಒಗ್ಗೂಡಿಸುವ ಮತ್ತು ಮುಂಬರುವ ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಯ ವೇಳೆ ವೀರಶೈವ ಮತ್ತು ಲಿಂಗಾಯತ ಸಮುದಾಯದ ಹೆಸರನ್ನು ನಮೂದಿಸುವ ಬಗ್ಗೆ ಉಂಟಾಗಿರುವ ಗೊಂದಲ ನಿವಾರಿಸುವ ಬಗ್ಗೆಯೂ ಚರ್ಚೆ ನಡೆಯಿತು ಎನ್ನಲಾಗಿದೆ. ಕೆಲವರು ಲಿಂಗಾಯತ ಎಂದೂ, ಮತ್ತೆ ಕೆಲವರು ವೀರಶೈವ ಎಂದು ಬರೆಸುತ್ತಾರೆ. ಮತ್ತೆ ಕೆಲವರು ತಮ್ಮ ಉಪ ಜಾತಿಯನ್ನಷ್ಟೇ ಬರೆಸುತ್ತಾರೆ. ಹೀಗಾಗಿ ಸಮುದಾಯದ ಒಟ್ಟಾರೆ ಸಂಖ್ಯೆ ಕುಸಿಯದಂತೆ ಮತ್ತು ಮೀಸಲಾತಿಗೆ ಧಕ್ಕೆ ಬಾರದ ರೀತಿಯಲ್ಲಿ ಮತ್ತು ಸಮಾಜದ ಏಕತೆಗೂ ಚ್ಯುತಿ ಆಗದಂತೆ ಎಲ್ಲ ಉಪ ಪಂಗಡಗಳನ್ನೂ ಸೇರಿಸಿಕೊಂಡು ಸಾಮುದಾಯಿಕ ಪ್ರಯತ್ನ ಮಾಡುವ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು. ಈ ಕುರಿತಂತೆ ಅಖಿಲ ಭಾರತ ವೀರಶೈವ ಮಹಾಸಭಾದ ವತಿಯಿಂದ ವಿವಿಧ ಉಪ ಜಾತಿಗಳ ಸಂಘಟನೆಗಳ ಮುಖಂಡರು ಮತ್ತು ವಿವಿಧ ಮಠಾಧಿಪತಿಗಳ ಜೊತೆ ಚರ್ಚಿಸಿ, ಮನವೊಲಿಸಬೇಕೆಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು ಎಂದು ಗೊತ್ತಾಗಿದೆ.

## ರೈಲಿಗೆ ಸಿಲುಕಿ ವಿದ್ಯಾರ್ಥಿ ಆತ್ಮಹತ್ಯೆ



• ಪ್ರಜೋದಯ ವರದಿ

**ಹಾಸನ:** ರೈಲಿಗೆ ತಲೆ ಕೊಟ್ಟು ಪಶು ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಡೇರಿ ವೃತ್ತದ ಬಳಿಯ ರೈಲ್ವೆ ಹಳಿ ಮೇಲೆ ಮಂಗಳವಾರ ನಡೆದಿದೆ.

ಹರಿಯಾಣ ಮೂಲದ ಓಷಿಯರ್ ಸಿಂಗ್ (19) ಆತ್ಮಹತ್ಯೆಗೆ ಶರಣಾದ ವಿದ್ಯಾರ್ಥಿ. ನಗರದ ಪಶು ವೈದ್ಯಕೀಯ ಕಾಲೇಜಿನಲ್ಲಿ ಮೊದಲ ವರ್ಷದ ಬಿವಿಎಸ್ಸಿ ಆ್ಯಂಡ್ ಎಹೆಚ್ ಓದುತ್ತಿದ್ದ. ಆತ್ಮಹತ್ಯೆಗೆ ಶರಣಾಗುವ ಮುನ್ನ ಸ್ನೇಹಿತನ ಜೊತೆ ಫೋನ್‌ನಲ್ಲಿ ಮಾತನಾಡಿದ್ದಾನೆ. ನಂತರ ರೈಲ್ವೆ ಹಳಿ ಮೇಲೆ ಮಲಗಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ರೈಲ್ವೆ ಪೊಲೀಸರು ಪರಿಶೀಲನೆ ನಡೆಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

## 7.56 ಕೋ. ರೂ. ಪ್ರಸ್ತಾವನೆ | ಹಣಕಾಸು ಇಲಾಖೆಗೆ ಸಲ್ಲಿಕೆಯಾಗಿರುವ ಕಡತ | ಹೆಚ್ಚು ಬೇಕಿದೆ ಮೂಲ ಸೌಕರ್ಯ

# ನಗರದಲ್ಲಿ ಹಾಕಿ ಟರ್ಫ್ ಕ್ರೀಡಾಂಗಣಕ್ಕೆ ಕೇಂದ್ರ ಸಚಿವರ ಸಮ್ಮತಿ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಕ್ರೀಡಾಪಟುಗಳ ಅನುಕೂಲಕ್ಕಾಗಿ ಸುಸಜ್ಜಿತ ಹಾಕಿ ಟರ್ಫ್ ಕ್ರೀಡಾಂಗಣ ನಿರ್ಮಾಣಕ್ಕಾಗಿ ಅನುದಾನ ನೀಡಲು ಕೇಂದ್ರ ಕ್ರೀಡಾ ಸಚಿವರು ಒಪ್ಪಿಗೆ ಸೂಚಿಸಿದ್ದು, ಹಣಕಾಸು ಇಲಾಖೆಯಿಂದಲೂ ಅನುಮೋದನೆ ದೊರೆಯುವ ನಿರೀಕ್ಷೆ ಹೆಚ್ಚಿದೆ.

ಶಾಸಕ ಹೆಚ್.ಪಿ.ಸ್ವರೂಪ್ ಅವರು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಮೂಲಕ ಕ್ರೀಡಾ ಹಾಗು ಯುವ ಸಬಲೀಕರಣ ವ್ಯವಹಾರಗಳ ಸಚಿವ ಡಾ.ಮನುಖ್ ಮಾಂಡವೀಯ ಅವರಿಗೆ ಪ್ರಸ್ತಾವನೆ ಸಲ್ಲಿಸಿದ್ದರು. ಕ್ರೀಡಾಂಗಣಕ್ಕಾಗಿ 30 ಕೋ.ರೂ. ಅನುದಾನದ ಅವಶ್ಯಕತೆಯನ್ನು ಒತ್ತಿ ಹೇಳಿದ್ದರು. ಸಂಸದ ಶ್ರೇಯಸ್ ಪಟೇಲ್ ಸಹ ಆ.4 ರಂದು ಕೇಂದ್ರ ಸಚಿವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ. ಜಿಲ್ಲೆಯಲ್ಲಿ ಕ್ರೀಡಾಂಗಣಕ್ಕೆ ಅಗತ್ಯ ಭೂಮಿ ಲಭ್ಯವಿದೆ. ಜಿಲ್ಲೆಯ ಹಲವು ಆಟಗಾರರು ರಾಷ್ಟ್ರ ಮಟ್ಟದ ಮತ್ತು ಏಷ್ಯಾಕಪ್ ಸೇರಿ ಅನೇಕ ಕ್ರೀಡಾಕೂಟಗಳಲ್ಲಿ




ಭಾಗವಹಿಸಿ ಕ್ರೀಡಾ ಸ್ಫೂರ್ತಿ ಮೆರೆದಿದ್ದಾರೆ. ಆದ್ದರಿಂದ ಶೀಘ್ರ ಹಾಕಿ ಟರ್ಫ್ ಕ್ರೀಡಾಂಗಣಕ್ಕೆ ಅನುಮೋದನೆ ನೀಡಬೇಕೆಂದು ಕೋರಿದ್ದರು.

ಜನಪ್ರತಿನಿಧಿಗಳ ಒತ್ತಾಯವನ್ನು ಪರಿಗಣಿಸಿದ ಕೇಂದ್ರ ಸಚಿವಾಲಯ ಡಿಪಿಆರ್ ಸಲ್ಲಿಕೆಗೆ ಸೂಚಿಸಿದ್ದರು. ಆ ಹಿನ್ನಲೆಯಲ್ಲಿ ಅಧಿಕಾರಿಗಳು ಸರ್ಕಾರಕ್ಕೆ ಸಮಗ್ರ ವರದಿ ಸಲ್ಲಿಸಿದ್ದರು.

### 7.56 ಕೋಟಿ ರೂ. ಕ್ರಿಯಾ ಯೋಜನೆ

ನಗರದ ಎಂ.ಜಿ. ರಸ್ತೆಯಲ್ಲಿರುವ ಜಿಲ್ಲಾ ಕ್ರೀಡಾಂಗಣದಲ್ಲಿ ಹಾಕಿ ಟರ್ಫ್ ಕ್ರೀಡಾಂಗಣಕ್ಕೆ ಅಗತ್ಯ ಜಾಗವಿದೆ. ಅದಕ್ಕಾಗಿ ಸುಸಜ್ಜಿತ ಅಂಕಣ, ಪೆವಿಲಿಯನ್ ಬಿಲ್ಡಿಂಗ್, ಡ್ರೆಸ್ಸಿಂಗ್ ರೂಂ ನಿರ್ಮಿಸಬೇಕಿದೆ ಎಂದು ಅಧಿಕಾರಿಗಳು 7.56 ಕೋ.ರೂ. ವೆಚ್ಚದ ಕ್ರಿಯಾ ಯೋಜನೆ ಸಲ್ಲಿಸಲಾಗಿದೆ. ಕೇಂದ್ರ ಕ್ರೀಡಾ ಸಚಿವರಿಂದ ಸಕಾರಾತ್ಮಕ ಸ್ಪಂದನೆ ವ್ಯಕ್ತವಾಗಿದ್ದು, ಹಣಕಾಸು ಇಲಾಖೆಯಿಂದ ಅನುಮೋದನೆ ಬಾಕಿ ಇದೆ. ಶೀಘ್ರದಲ್ಲೇ ಅನುದಾನ ಬಿಡುಗಡೆಯಾಗುವ ಸಾಧ್ಯತೆ ಇದ್ದು, ಜಿಲ್ಲೆಯ ಕ್ರೀಡಾಪಟುಗಳಿಗೆ ಹೆಚ್ಚಿನ ಅನುಕೂಲವಾಗಲಿದೆ.

> **ಹಾಕಿ ಟರ್ಫ್ ಕ್ರೀಡಾಂಗಣಕ್ಕೆ 7.56 ಕೋ.ರೂ. ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಕ್ರೀಡಾ ಸಚಿವರು ಒಪ್ಪಿಗೆ ಸೂಚಿಸಿದ್ದಾರೆ. ಇನ್ನು ಅನುದಾನ ಬಿಡುಗಡೆಯಾಗಿಲ್ಲ. ಸದ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಸ್ವಚ್ಛತೆ, ಕುಡಿಯುವ ನೀರು ಸೇರಿ ಅಗತ್ಯ ಸೌಕರ್ಯ ಕಲ್ಪಿಸಲಾಗಿದೆ.**
> **-ಸಿ.ಕೆ. ಹರೀಶ್, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ**

### ದೊರೆಯದ ಸಿಎಸ್‌ಆರ್ ಅನುದಾನ

ಜಿಲ್ಲಾ ಕ್ರೀಡಾಂಗಣ ಅಗತ್ಯ ಮೂಲ ಸೌಕರ್ಯಗಳಿಂದ ವಂಚಿತವಾಗಿದ್ದು, ಹಂತ-ಹಂತವಾಗಿ ಅಭಿವೃದ್ಧಿ ಕಾಮಗಾರಿ ಕೈಗೊಳ್ಳುವ ಭರವಸೆಯನ್ನು ಹಿಂದಿನ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರು ನೀಡಿದ್ದರು. ಸಿಎಸ್‌ಆರ್ ಅಥವಾ ದಾನಿಗಳಿಂದ ಕಬ್ಬಡ್ಡಿ ಅಂಕಣ ಸೇರಿ ಮತ್ತಿತರ ಕಾಮಗಾರಿ ಕೈಗೊಳ್ಳುವುದಾಗಿ ಹೇಳಿದ್ದರು. ಆ ನಿಟ್ಟಿನಲ್ಲಿ ಯಾವುದೇ ಕೆಲಸಗಳಾಗದೆ ಕ್ರೀಡಾಭಿಮಾನಿಗಳಿಗೆ ನಿರಾಸೆಯಾಗಿದೆ.

ಕ್ರೀಡಾಂಗಣದಲ್ಲಿ ಹಿರಿಯ ನಾಗರಿಕರಿಗೆ ಕುಡಿಯುವ ನೀರು, ವಿಶ್ರಾಂತಿ ಕಟ್ಟೆ ಮತ್ತು ಶೌಚಾಲಯ ವ್ಯವಸೆ ಕಲ್ಪಿಸಬೇಕಿದೆ. ಈಗ ಶಾಲಾ ಮಕ್ಕಳ ಕ್ರೀಡಾಕೂಟ ನಡೆಯುತ್ತಿರುವ ಹಿನ್ನಲೆಯಲ್ಲಿ ಕ್ರೀಡಾಂಗಣದಲ್ಲಿ ಬೆಳೆದಿದ್ದ ಗಿಡಗಂಟಿಗಳನ್ನು ತೆರವುಗೊಳಿಸಲಾಗಿದೆ. ಇಲ್ಲವಾದರೆ ಕ್ರೀಡಾಂಗಣ ಅನೈರ್ಮಲ್ಯದ ತಾಣವಾಗಿರುತ್ತದೆ. ಎಂ.ಜಿ. ರಸ್ತೆಯಲ್ಲಿನ ರಸ್ತೆಬದಿ ಅಂಗಡಿಗಳ ತ್ಯಾಜ್ಯವನ್ನು ಜಿಲ್ಲಾ ಕ್ರೀಡಾಂಗಣದ ಕಾಂಪೌಡ್‌ಗೆ ಬಳಿ ಸುರಿಯುತ್ತಿರುವುದರಿಂದ ಸ್ವಚ್ಛತೆಗೆ ಆದ್ಯತೆ ನೀಡಬೇಕಿದೆ.

## ಸೆ.1 ರಂದು ಅಲ್ಪಸಂಖ್ಯಾತ ಕುಂದು ಕೊರತೆ ಸಭೆ

• ಪ್ರಜೋದಯ ವರದಿ

**ಹಾಸನ :** ಜಿಲ್ಲಾಧಿಕಾರಿ ಅಧ್ಯಕ್ಷತೆಯಲ್ಲಿ ಸೆ.1 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಹೊಯ್ಸಳ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಅಲ್ಪಸಂಖ್ಯಾತ ಸಮುದಾಯದವರ ಕುಂದು ಕೊರತೆ ಸಭೆ ನಡೆಯಲಿದೆ.

ಈ ಸಂಬಂಧ ಅಲ್ಪಸಂಖ್ಯಾತರ ಸಮುದಾಯದ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಜನಾಂಗ, ಸಮುದಾಯದವರಿಗೆ ಸಂಬಂಧಿಸಿದಂತೆ ಕುಂದು ಕೊರತೆ, ಆಹವಾಲು, ಮನವಿಗಳು ಇದ್ದಲ್ಲಿ, ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಸಾಲಗಾಮೆ ರಸ್ತೆ, ಹಾಸನ ಇಲ್ಲಿಗೆ ಆ.25 ರವರೆಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ದೂರವಾಣಿ ಸಂಖ್ಯೆ: 08172-268373/08172-267373 ಸಂಪರ್ಕಿಸ ಬಹುದು. ಹಾಗೂ ಆಯಾ ತಾಲ್ಲೂಕು ಮಾಹಿತಿ ಕೇಂದ್ರಗಳನ್ನು ಸಂಪರ್ಕಿಸಬಹುದು.



# ಸಾರ್ಥಕತೆ

ಮೊದಲಿನ ಎರಡು ಹೆಣ್ಣಾಗಿ ಮೂರನೆಯದಾದರೂ ಗಂಡಾಗಲಿ ಎಂದು ಬಯಸಿದ್ದ ಅವರಿಗೆ ಮೂರನೆಯದೂ ಸಹ ಹೆಣ್ಣು ಮಗುವಾದಾಗ ಸ್ವಲ್ಪ ಅಸಮಾಧಾನವೆನಿಸಿತು. ಆದರೂ ನಂತರ ತಮಗೆ ತಾವೇ ಸಮಾಧಾನ ಪಡಿಸಿಕೊಂಡು ಎಲ್ಲ ಮಕ್ಕಳನ್ನು ಅಕ್ಕರೆಯಿಂದ ಪೋಷಿಸಿ ಬೆಳೆಸಿದರು. ಮೂರನೇಯವಳು ಸೌಮ್ಯ ಹೆಸರಿಗೆ ತಕ್ಕಂತೆ ಅತಿ ಸೌಮ್ಯ ಸ್ವಭಾವದವಳಾಗಿದ್ದರೂ ಅತಿ ಚುರುಕು ಬುದ್ಧಿಯವಳಾಗಿದ್ದಳು. ಯುಕ್ತ ವಯಸ್ಸಿಗೆ ಬಂದ ಅವಳನ್ನು ಸಾಕಷ್ಟು ಸ್ಥಿತಿವಂತನಾದ ಹುಡುಗನೊಂದಿಗೆ ಮದುವೆ ಮಾಡಿದರು. ಪ್ರೀತಿಸುವ ಗಂಡ ಮತ್ತು ಅವನ ಮನೆಯವರು ಎಲ್ಲವೂ ಚೆನ್ನಾಗಿಯೇ ಇತ್ತು.

ಮದುವೆಯಾದ ಸ್ವಲ್ಪ ದಿನಗಳ ನಂತರ ಇವಳು ಗರ್ಭವತಿಯಾದಾಗ ಇತ್ತ ತವರಿನವರು ಅತ್ತ ಗಂಡನ ಮನೆಯವರೂ ತುಂಬಾ ಸಂಭ್ರಮಿಸಿದರು. ಮೂವರು ಹೆಣ್ಣು ಮಕ್ಕಳ ನಂತರದಲ್ಲಿ ಹುಟ್ಟಿದ್ದ ಇವಳ ಗಂಡ. ಹಾಗಾಗಿ ಗಂಡನ ಮನೆಯಲ್ಲಿ ಸಹಜವಾಗಿಯೇ ಗಂಡು ಮಗುವಿನ ನಿರೀಕ್ಷೆ ತುಸು ಹೆಚ್ಚಾಗಿಯೇ ಇತ್ತು. ದಿನ ಕಳೆದು ಸುಖ ಪ್ರಸವವಾಗಿ, ಸುಂದರ ಹೆಣ್ಣು ಮಗುವಿನ ಜನನವಾಯಿತು.

ಮನೆಯವರಲ್ಲಿ ಮಗು ಜನಿಸಿದ ಸಂಭ್ರಮ ಅಷ್ಟಾಗಿ ಕಾಣಲಿಲ್ಲ. ಅವರೆಲ್ಲರೂ ಗಂಡು ಮಗುವೊದರ ನಿರೀಕ್ಷೆಯಲ್ಲಿದ್ದುದರಿಂದ ಈ ಮಗುವಿಗೆ ದೊರೆತ ಸ್ವಾಗತ ನೀರಸವಾಗಿತ್ತು. ನಿಧಾನವಾಗಿ ದಿನ ಕಳೆದಂತೆ ಸೌಮ್ಯಳನ್ನು ಆ ಗಂಡನ ಮನೆಯವರೆಲ್ಲರೂ ಕೀಳಾಗಿ ಕಾಣತೊಡಗಿದರು.

ಗಂಡನಿಗೂ ಗಂಡು ಮಗುವಿನ ನಿರೀಕ್ಷೆಯಿದ್ದುದರಿಂದ ಅವಳೆಡೆಗಿನ ಅವನ ಪ್ರೀತಿಯಲ್ಲಿ ಸಹ ಕಡಿಮೆಯಾಗತೊಡಗಿತು. ಮೊದಲೇ ಸೌಮ್ಯ ಸ್ವಭಾವದವಳಾಗಿದ್ದ ಇವಳು ಮತ್ತಷ್ಟು ಕುಸಿದಳು. ಆದರೂ ಅವಳು ಬುದ್ಧಿವಂತಳಾಗಿದ್ದುದರಿಂದ ತನ್ನಷ್ಟಕ್ಕೆ ತಾನು ಸಾವರಿಸಿಕೊಂಡು ಆ ಪುಟ್ಟ ಮಗುವನ್ನು ತನ್ನ ಜೀವಕ್ಕಿಂತ ಹೆಚ್ಚಾಗಿ ಪ್ರೀತಿಸಿ, ಬೆಳೆಸಿದಳು. ಬೆಳೆದ ದೊಡ್ಡವಳಾದ ಅವಳ ಮಗಳು ಆಟ ಪಾಠಗಳೆಲ್ಲವುದರಲ್ಲೂ ಮೊದಲಿಗಳಾಗಿಯೇ ಬೆಳೆದಳು. ಮನೆಯವರ ವಿರೋಧವಿದ್ದರೂ ಉನ್ನತ ವಿದ್ಯಾಭ್ಯಾಸಕ್ಕಾಗಿ ಅವಳನ್ನು ಪಟ್ಟಣಕ್ಕೆ ಕಳುಹಿಸಿದಳು. ಅವಳು ಅಲ್ಲಿಯೂ ಸಹ ಯಶಸ್ಸು ಸಾಧಿಸಿ ಐಎಎಸ್ ನಲ್ಲಿ ಉನ್ನತ ರಾಂಕ್ ಗಳಿಸಿದಳು.

ತನ್ನದೇ ಊರಿಗೆ ಜಿಲ್ಲಾಧಿಕಾರಿಯಾಗಿ ನೇಮಕಗೊಂಡು ಬಂದಾಗ ಸೌಮ್ಯಳಿಗಾದ ಸಂತಸಕ್ಕೆ ಪಾರವೇ ಇರಲಿಲ್ಲ.

ಮನೆಯವರೆಲ್ಲರೂ ಸಹ ತಮ್ಮ ಮನೆ ಮಗಳ ಈ ಸಾಧನೆ ಕಂಡು ಹರುಷ ಪಟ್ಟರು. ಅಂದು ತಾವು ಸಂಕುಚಿತ ಮನೋಭಾವದಿಂದ ವರ್ತಿಸಿದಕ್ಕೆ ತಾವೇ ನಾಚಿಕೆ ಪಟ್ಟುಕೊಂಡರು. ಮನಸ್ಸು ಮಾಡಿದರೆ ಏನನ್ನಾದರೂ ಸಾಧಿಸಬಹುದು ಎಂದು ತೋರಿಸಿಕೊಟ್ಟ ತನ್ನ ಮಗಳಿಂದ ಸೌಮ್ಯಳ ಬದುಕು ಸಾರ್ಥಕತೆ ಹೊಂದಿತು.

**– ಸಂಪಿಗೆ ವಾಸು,** ಬಳ್ಳಾರಿ

## 20-8-2025 ದಿನ ಭವಿಷ್ಯ

**ಮೇಷ:** ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹುದು ಎಂಬುದು ಇಂದು ನಿಮಗೆ ಅರ್ಥವಾಗಬಹುದು. ನಿಮ್ಮ ಪ್ರೀತಿಪಾತ್ರರ ಜೊತೆಗಿನ ನಿಮ್ಮ ಸಂಬಂಧದಲ್ಲಿ ಹುಳಿ ಹಿಂಡಬಹುದಾದ ಸಮಸ್ಯೆಗಳನ್ನು ಕೆದಕುವುದನ್ನು ತಪ್ಪಿಸುವುದು ಅತ್ಯುತ್ತಮ.

**ವೃಷಭ:** ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ಇಂದು, ಒಂದು ಪಾರ್ಟಿಯಲ್ಲಿ ನೀವು ಆರ್ಥಿಕ ಭಾಗವನ್ನು ಬಲಪಡಿಸಲು ಪ್ರಮುಖ ಸಲಹೆಯನ್ನು ನೀಡುವ ವ್ಯಕ್ತಿಯನ್ನು ಭೇಟಿ ಮಾಡಬಹುದು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ.

**ಮಿಥುನ:** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ. ಇಂದು ನಿಮ್ಮ ದುಂದುಗಾರಿಕೆಯ ಮೇಲೆ ನಿಮ್ಮ ಸಂಗಾತಿ ನಿಮಗೆ ಮಾತುಗಳು ಹೇಳಬಹುದು. ಅನಿರೀಕ್ಷಿತ ಪ್ರಣಯ ಪ್ರಸಂಗಗಳು ಇಂದು ಎದುರಾಗಬಹುದು.

**ಕರ್ಕಾಟಕ:** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಇಂದು ಹಣದ ನಷ್ಟವು ಸಂಭವಿಸಬಹುದು. ಆದ್ದರಿಂದ ವಹಿವಾಟುಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ನೀವು ಎಷ್ಟು ಜಾಗರೂಕರಾಗಿರುತ್ತೀರೋ ಅಷ್ಟೇ ನಿಮಗೆ ಉತ್ತಮವಾಗಿರುತ್ತದೆ. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ.

**ಸಿಂಹ:** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ.

ಕನ್ಯಾ: ನಿಮ್ಮ ಕೆಟ್ಟ ಚಟಗಳು ನಿಮ್ಮನ್ನು ನಾಶಗೊಳಿಸುತ್ತವೆ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ಸಂಬಂಧಿಗಳು ನಿಮಗೆ ಅನಿರೀಕ್ಷಿತ ಉಡುಗೊರೆ ತಂದರೂ ನೀವೂ ಅವರಿಗೆ ಸಹಾಯ ಮಾಡಬೇಕೆಂದು ನಿರೀಕ್ಷಿಸಬಹುದು.

ತುಲಾ: ನಿಮ್ಮ ಒರಟು ವರ್ತನೆ ನಿಮ್ಮ ಸ್ನೇಹಿತರಿಗೆ ಸ್ವಲ್ಪ ಸಮಸ್ಯೆ ಉಂಟುಮಾಡಬಹುದು. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು.

**ವೃಶ್ಚಿಕ:** ಸಣ್ಣ ಸಣ್ಣ ವಿಷಯಗಳು ನಿಮ್ಮ ಮನಸ್ಸು ಕೆಡಿಸಲು ಬಿಡಬೇಡಿ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯವರೆಗೂ ಹೋಗಬಹುದು. ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು. ಕುಟುಂಬದ ಸದಸ್ಯರು ನಿಮ್ಮ ನಿರೀಕ್ಷೆಗಳನ್ನು ಪೂರೈಸದಿರಬಹುದು. ನೀವು ಕೆಲಸದಲ್ಲಿ ಇಂದು ಒಂದು ಒಳ್ಳೆಯ ಸುದ್ದಿ ಪಡೆಯಬಹುದು.

**ಧನು:** ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ. ಇತರರ ಸಂತೋಷ ಮತ್ತು ಆತೃಪ್ತಿಯನ್ನು ಹಂಚಿಕೊಳ್ಳುವ ಮೂಲಕ ಇದನ್ನು ತೊಡೆದುಹಾಕಲು ಪಣತೊಡಿ. ನಿಮ್ಮ ಸಂಗಾತಿಯ ಆರೋಗ್ಯದ ನಿಮ್ಮನ್ನು ಚಿಂತೆಗೀಡುಮಾಡಬಹುದು.

**ಮಕರ:** ಕೆಲವು ಬಿಕ್ಕಟ್ಟುಗಳು ಮತ್ತು ಭಿನ್ನಾಭಿಪ್ರಾಯಗಳು ನಿಮಗೆ ಕಿರಿಕಿರಿ ಹಾಗೂ ಆತಂಕವನ್ನು ತರಬಹುದು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

**ಕುಂಭ:** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಜೀವನದ ಕೆಟ್ಟ ಕಾಲದಲ್ಲಿ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ ಆದ್ದರಿಂದ ಇಂದಿನಿಂದಲೇ ನಿಮ್ಮ ಹಣವನ್ನು ಸಂಗ್ರಹಿಸುವ ಬಗ್ಗೆ ಯೋಚಿಸಿ ಇಲ್ಲದಿದ್ದರೆ ನೀವು ತೊಂದರೆಗೊಳಗಾಗಬಹುದು.

**ಮೀನ:** ಧೂಮಪಾನ ತ್ಯಜಿಸುವುದು ನೀವು ದೈಹಿಕವಾಗಿ ಆರೋಗ್ಯವಾಗಿ ಉಳಿಯಲು ಸಹಾಯ ಮಾಡುತ್ತದೆ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟು ಮಾಡುತ್ತದೆ. ಆರೋಗ್ಯ ಚೆನ್ನಾಗಿಲ್ಲದ ಒಬ್ಬ ಸಂಬಂಧಿಯನ್ನು ಭೇಟಿ ಮಾಡಿ. ನೀವು ಕೆಲಸದಲ್ಲಿ ತುಂಬ ಒತ್ತಡ ಹೇರಿದಲ್ಲಿ ಕೋಪ ಹೆಚ್ಚಾಗುತ್ತದೆ.

# ಅದೇ ಭೂಮಿ, ಆಕಾಶ; ಬದುಕಿನಲ್ಲೆಷ್ಟು ವ್ಯತ್ಯಾಸ!

ಇತಿಹಾಸ ಪುನರಾವರ್ತನೆ ಆಗುತ್ತೆ. ಮೇಲೇರಿದ್ದು ಕೆಳಗೆ ಬರಲೇಬೇಕಲ್ಲವೇ? ಅದು ಪ್ರಕೃತಿ ನಿಯಮವಲ್ಲವೇ? ಸ್ಪೇನ್ ನ ರಾಜಧಾನಿ ಮ್ಯಾಡ್ರಿಡ್ ನಲ್ಲಿ ಇತ್ತೀಚಿಗೆ ನಮ್ಮ ಶೆಟ್ಟರ ಅಂಗಡಿಯನ್ನ ಹೋಲುವ ಎಲ್ಲವನ್ನೂ ಗೋಣಿಚೀಲದಲ್ಲಿ ತುಂಬಿಡುವ ಅಂಗಡಿಗಳಲ್ಲಿ ಮಾರಾಟ ಹೆಚ್ಚಾಗುತ್ತಿದೆ. ಜನ ನಿಧಾನವಾಗಿ ಮಾಲ್‌ಗಳಿಗೆ ಆದಿಯೋಸ್ (ಬಾಯ್ ) ಹೇಳುತ್ತಿದ್ದಾರೆ. ಸ್ಪೇನ್ ಸರಕಾರ ಪ್ಲಾಸ್ಟಿಕ್ ವಿರುದ್ಧ ಸೀರಿಯಸ್ ಆಗಿ ಸಮರ ಸಾರಿರುವುದರ ಫಲಿತಾಂಶವಿದು. ಜನ ತಮಗೆ ಬೇಕಾದ ಪದಾರ್ಥಗಳನ್ನು ಎಷ್ಟು ಬೇಕು ಅಷ್ಟು ತೂಕ ಮಾಡಿಕೊಳ್ಳುವ ಪರಿಪಾಠ ಬೆಳೆಯುತ್ತಿದೆ.

ಯುರೋಪಿನ ಎಲ್ಲಾ ನಗರ ಪ್ರದೇಶದಲ್ಲಿ ವಾರಕ್ಕೊಂದು ಬಾರಿ ಹಳೆ ಪದಾರ್ಥಗಳ ಮಾರಾಟಕ್ಕೆಂದು ಕೂಡ ಒಂದು ಸಂತೆ ಅಥವಾ ಮಾರುಕಟ್ಟೆ ಏರ್ಪಡಿಸುತ್ತಾರೆ. ಈ ಸಂತೆಯಲ್ಲಿ ಜನ ಸಾಮಾನ್ಯರು ತಮಗೆ ಬೇಡದ ವಸ್ತುಗಳನ್ನ ಮಾರಾಟ ಮಾಡುತ್ತಾರೆ. ಇವರು ಪೂರ್ಣಾವಧಿ ವ್ಯಾಪಾರಿಗಳಾಗಿರಬೇಕು ಎಂದೇನೂ ಇಲ್ಲ.

ನಾವು ಚಿಕ್ಕವರಾಗಿದ್ದಾಗ ಮನೆಗೆ ಬೇಕಾಗುವ ಆಹಾರ ಪದಾರ್ಥಗಳನ್ನು ಶೆಟ್ಟರ ಅಂಗಡಿಯಿಂದ ತರುತ್ತಿದ್ದೆವು. ಇಲ್ಲವೇ ಊರಿನಲ್ಲಿದ್ದ ಇತರ ಅಂಗಡಿಯಲ್ಲಿ ಖರೀದಿ ಮಾಡಿ ತರುತ್ತಿದ್ದೆವು ಅಲ್ಲವೇ? ಇಂತಹ ಅಂಗಡಿಗಳಲ್ಲಿ ಅಕ್ಕಿ, ಬೇಳೆ, ಬೆಲ್ಲ, ಇನ್ನಿತರೇ ದಿನಸಿ ಪದಾರ್ಥಗಳೆಲ್ಲವನ್ನ ಗೋಣಿಚೀಲದಲ್ಲಿ ಇಟ್ಟಿರುತ್ತಿದ್ದರು. ಎಲ್ಲವೂ ಗ್ರಾಹಕನ ಕಣ್ಣಿಗೆ ಕಾಣುತ್ತಿತ್ತು. ಆದರೆ ಯಾರೂ ಅದನ್ನ ಮುಟ್ಟುವ ಆಗಿರಲಿಲ್ಲ. ಎಷ್ಟು ಬೇಕು ಅಂತ ಕೇಳಿ ಶೆಟ್ಟರು ಅಥವಾ ಅವರ ಅಂಗಡಿಯಲ್ಲಿ ಕೆಲಸ ಮಾಡುವ ಸಹಾಯಕ ತೂಗಿ ಕೊಡುತ್ತಿದ್ದರು. ನ್ಯೂಸ್ ಪೇಪರ್‌ನಲ್ಲಿ ಕಟ್ಟಿ ಕೊಡುವುದು ಕೂಡ ವಾಡಿಕೆಯಾಗಿತ್ತು.

ಆಮೇಲೆ ಬಂದ ಮಲಯಾಳಿ ಕಾಕಾ ಅಂಗಡಿಯವರದ್ದು ಕೂಡ ಹೆಚ್ಚು ಕಡಿಮೆ ಇದೆ ವ್ಯವಸಾಯ. ಬದಲಾವಣೆಯ ಹೆಸರಲ್ಲಿ ಎಷ್ಟು ನೀರು ಹರಿದು ಹೋಯಿತು ನೀವೇ ನೋಡಿ! ನಾವು ಮಾಲ್‌ಗಳನ್ನ ತಂದೆವು. ಇವರುಗಳು ಗೊತ್ತಿಲ್ಲದ ಹಾಗೆ ಮಾಯವಾದರು ಇಲ್ಲವೇ ಅವರೂ ಕೂಡ ಡಿಪಾರ್ಟ್ಮೆಂಟಲ್ ಸ್ಟೋರ್ ಹೆಸರಲ್ಲಿ ಎಲ್ಲವನ್ನೂ ಪ್ಲಾಸ್ಟಿಕ್ ಕವರ್‌ನಲ್ಲಿ ಪ್ಯಾಕ್ ಮಾಡಿರುವ ಯಾವುದೂ ಬ್ರಾಂಡ್ ಹೆಸರಿರುವ ಅದೇ ಪದಾರ್ಥಗಳನ್ನ ಮಾರಲು ತೊಡಗಿದರು.

ಮೊದಲೆಲ್ಲ ಬರುವ ಗ್ರಾಹಕನ ಪೂರ್ಣ ಮಾಹಿತಿ ಶೆಟ್ಟರಿಗೆ ಗೊತ್ತಿರುತ್ತಿತ್ತು. ಆದರೆ ಅವರು ಎಂದೂ ಅದನ್ನ ಸ್ವಂತಕ್ಕೆ ಬಳಸಿ ಕೊಳ್ಳುತ್ತಿರಲಿಲ್ಲ. ಇದೀಗ ಅಂಗಡಿಯ ಮಾಲಿಕನಿಗೆ ಬರುವ ಗ್ರಾಹಕರ ಮುಖ ಪರಿಚಯ ಕೂಡ ಇರುವುದಿಲ್ಲ. ಆದರೆ ವಿಪರ್ಯಾಸ ನೋಡಿ ಕಲೆಕ್ಷನ್ ಹೆಸರಲ್ಲಿ ನಮ್ಮ ಜಾತಕ ಅವರ ಬಳಿ ಸೇರುತ್ತೆ. ಅದು ಮತ್ತೆಲ್ಲೂ ಕಂಡು ಕೇಳದವರಿಗೂ ಸಿಗುತ್ತದೆ. ಮೊದಲೆ ಐದು ಅಥವಾ ಹತ್ತು ರೂಪಾಯಿ ಇರದಿದ್ದರೆ ಅಥವಾ ಕೆಲವೊಮ್ಮೆ ಹಣವನ್ನ ಮರೆತು ಹೋಗಿದ್ದರೆ ಕೂಡ ಅಂಗಡಿಯವರು ಪರವಾಗಿಲ್ಲ ತೆಗೆದುಕೊಂಡು ಹೋಗಿ ಎಂದ ಉದಾಹರಣೆಗಳು ಅನೇಕ.

ಇವತ್ತಿನ ಬದಲಾದ ಕಾಲಘಟ್ಟದಲ್ಲಿ ವ್ಯಾಪಾರ ಪ್ರಾಮುಖ್ಯತೆ ಪಡೆದು ಮನುಷ್ಯನ ಸಂಬಂಧಗಳು ಹಿಂಬದಿಗೆ ಸರಿದಿವೆ. ಎರಡು ಅಥವಾ ಮೂರು ದಶಕಗಳ ಹಿಂದೆ ಉಭಯ ಕುಶಲೋಪರಿ ಇಲ್ಲದೆ ಯಾವುದೇ ಕೆಲಸ ಪ್ರಾರಂಭಿಸುತ್ತಿರಲಿಲ್ಲ. ಭಾರತದ ಬದಲಾಗಿದೆ, ಅಭಿವೃದ್ಧಿ ಹೆಸರಿನಲ್ಲಿ ನಾವು ಯಾಂತ್ರಿಕ ಬದುಕಿನತ್ತ ಸಾಗಿದ್ದೇವೆ.

ಇತಿಹಾಸ ಪುನರಾವರ್ತನೆ ಆಗುತ್ತೆ. ಮೇಲೇರಿದ್ದು ಕೆಳಗೆ ಬರಲೇ ಬೇಕಲ್ಲವೇ? ಅದು ಪ್ರಕೃತಿ ನಿಯಮ ವಲ್ಲವೇ? ಸ್ಪೇನ್ ನ ರಾಜಧಾನಿ ಮ್ಯಾಡ್ರಿಡ್‌ನಲ್ಲಿ ಇತ್ತೀಚಿಗೆ ನಮ್ಮ ಶೆಟ್ಟರ ಅಂಗಡಿಯನ್ನ ಹೋಲುವ ಎಲ್ಲವನ್ನೂ ಗೋಣಿಚೀಲದಲ್ಲಿ ತುಂಬಿಡುವ ಅಂಗಡಿಗಳಲ್ಲಿ ಮಾರಾಟ ಹೆಚ್ಚಾಗುತ್ತಿದೆ. ಜನ ನಿಧಾನವಾಗಿ ಮಾಲ್‌ಗಳಿಗೆ ಆದಿಯೋಸ್ (ಬಾಯ್ ) ಹೇಳುತ್ತಿದ್ದಾರೆ.

ಸ್ಪೇನ್ ಸರಕಾರ ಪ್ಲಾಸ್ಟಿಕ್ ವಿರುದ್ಧ ಸೀರಿಯಸ್ ಆಗಿ ಸಮರ ಸಾರಿರುವುದರ ಫಲಿತಾಂಶವಿದು. ಜನ ತಮಗೆ ಬೇಕಾದ ಪದಾರ್ಥಗಳನ್ನು ಎಷ್ಟು ಬೇಕು ಅಷ್ಟು ತೂಕ ಮಾಡಿಕೊಳ್ಳುವ ಪರಿಪಾಠ ಬೆಳೆಯುತ್ತಿದೆ. ಫ್ರೆಶ್ ಹಾಲು,



ಮೊಸರು ಜೊತೆಗೆ ಎಲ್ಲವನ್ನೂ ಸಾವಯವ ಕೊಳ್ಳಬೇಕು ಎನ್ನುವ ಕೂಗು ಕೂಡ ಹೆಚ್ಚಾಗುತ್ತಿದೆ. ಆಹಾರ ಪದಾರ್ಥಗಳ ವಿಷಯದಲ್ಲಿ ಈ ರೀತಿಯ ಬದಲಾವಣೆಯನ್ನು ವಿಶ್ವದ ಎಡೆ ಇಂದು ಕಾಣಬಹುದು. ಆದರೆ ಸ್ಪೇನ್ ದೇಶದಲ್ಲಿ ಜನರ ನಡುವಿನ ಬಾಂಧವ್ಯ ಮಾತ್ರ ಇಲ್ಲಿನಷ್ಟು ಹದಗೆಟ್ಟಿಲ್ಲ ಎಂದು ಧೈರ್ಯವಾಗಿ ಹೇಳಬಹುದು.

ಅದು ಬ್ಯಾಂಕಿರಲಿ ಅಥವಾ ತರಕಾರಿ ಅಂಗಡಿ, ಪದೇ ಪದೇ ಅದೇ ಅಂಗಡಿಗೆ ನಾವು ಭೇಟಿ ಕೊಡಲು ಶುರು ಮಾಡಿದರೆ, ಉಭಯ ಕುಶಲೋಪರಿ ಇಲ್ಲದೆ ವ್ಯಾಪಾರ ಶುರುವಾಗುವುದೇ ಇಲ್ಲ. ಅಷ್ಟರ ಮಟ್ಟಿಗೆ ಇಲ್ಲಿನ ಜನರಲ್ಲಿ ಭೂತ ದಯೆ ಉಳಿದುಕೊಂಡಿದೆ. ಸ್ಪೇನ್ ಎಂದಲ್ಲ. ಯೂರೋಪಿನ ದೇಶಗಳಲ್ಲಿ ಕೂಡ ಕೇವಲ 20/30 ವರ್ಷಗಳ ಹಿಂದೆ ಮಾಲ್ ಪ್ರಾರಂಭವಾದರೆ ಅದೇನೋ ದೊಡ್ಡದು ಎನ್ನುವ ಭಾವನೆಯಿತ್ತು. ಬಡಾವಣೆ ಅಭಿವೃದ್ಧಿ ಹೊಂದುತ್ತಿದೆ ಎನ್ನುವ ಖುಷಿ ಜನರಲ್ಲಿ ಕೂಡ ಇತ್ತು. ಕೇವಲ ಎರಡು ಮೂರು ದಶಕದಲ್ಲಿ ಅದೆಷ್ಟು ಬದಲಾವಣೆ!

ಜನರಿಗೆ ಸರಿ ತಪ್ಪುಗಳ ಪಾಠವನ್ನು ಆರ್ಥಿಕ ಕುಸಿತ ಮತ್ತು ಆ ನಂತರ ಬಂದ ಕರೋನ ಒಂದಷ್ಟು ಕಲಿಸಿದೆ. ಒಂದು ಪದಾರ್ಥದ ಬೆಲೆಯನ್ನು ಸುಖಾಸುಮ್ಮನೆ ಏರಿಸುವುದರಿಂದ ಹೀಗೆ ಏರಿಕೆಯಾದ ಪದಾರ್ಥವನ್ನ ಕೊಂಡು ನಾವೇನೂ ದೊಡ್ಡ ಮನುಷ್ಯರು ಎಂದು ಹಿಗ್ಗುವುದರಲ್ಲಿ ಪ್ರಯೋಜನವಿಲ್ಲ ಎನ್ನುವುದನ್ನ ಜನತೆ ಅರ್ಥ ಮಾಡಿಕೊಂಡಿದ್ದಾರೆ.

ಯೂರೋಪು ಇಂದಿಗೂ ತನ್ನತನವನ್ನ ಬಿಟ್ಟು ಕೊಡದ ಪುಟಾಣಿ ಹಳ್ಳಿಗಳ ಒಕ್ಕೂಟ ಎನ್ನಬಹುದು. ಹೀಗೆ ಹೇಳಲು ಪ್ರಮುಖ ಕಾರಣ ಇಂದಿಗೂ ಇಲ್ಲಿ ತಮ್ಮ ಹಳೆಯ ಯಾವುದೇ ಪದ್ಧತಿಗಳನ್ನು ಜನರು ಬಿಟ್ಟಿಲ್ಲ. ಬುಧವಾರ, ಶುಕ್ರವಾರ ಮತ್ತು ಭಾನುವಾರ ಸಂತೆ ನಡೆಯುತ್ತದೆ. ಹಲವು ಕಡೆ ದಿನಗಳ ಬದಲಾವಣೆ ಇರುತ್ತದೆ. ಆದರೆ ಸಂತೆಯಂತೂ ಇದ್ದೇ ಇರುತ್ತದೆ.

ಸಂತೆಯಲ್ಲಿ ತರಕಾರಿ ಹಣ್ಣು, ಬಟ್ಟೆ, ಲೆದರ್ ಬ್ಯಾಗ್, ಜಾಕೆಟ್, ಪಾದರಕ್ಷೆಯಿಂದ, ತಿನ್ನಲು ಖಾದ್ಯಗಳು ಕೂಡ ಸಿಗುತ್ತದೆ. ಬೆಳಿಗ್ಗೆ ಏಳರ ಆಸುಪಾಸಿನಲ್ಲಿ ಶುರುವಾಗುವ ಇಂತಹ ಸಂತೆಗಳು ಮಧ್ಯಾಹ್ನ ಮೂರಕ್ಕೆ ಮುಕ್ತಾಯವಾಗುತ್ತವೆ. ಸಾಯಂಕಾಲ ನಾಲ್ಕರ ವೇಳೆಗೆ ಸಂತೆ ನಡೆದಿತ್ತು ಎನ್ನುವುದರ ಕುರುಹು ಕೂಡ ಕಾಣದಷ್ಟು ಸ್ವಚ್ಛ ಮಾಡುತ್ತಾರೆ.

ಯೂರೋಪಿನ ಎಲ್ಲಾ ನಗರ ಪ್ರದೇಶದಲ್ಲಿ ವಾರಕ್ಕೊಂದು ಬಾರಿ ಹಳೆ ಪದಾರ್ಥಗಳ ಮಾರಾಟಕ್ಕೆಂದು ಕೂಡ ಒಂದು ಸಂತೆ ಅಥವಾ ಮಾರುಕಟ್ಟೆ ಏರ್ಪಡಿಸುತ್ತಾರೆ. ಈ ಸಂತೆಯಲ್ಲಿ ಜನ ಸಾಮಾನ್ಯರು ಅಂದರೆ ಅವರು ಪೂರ್ಣಾವಧಿ ವ್ಯಾಪಾರಿಗಳಾಗಿರಬೇಕು ಎಂದೇನೂ ಇಲ್ಲ. ತಮಗೆ ಬೇಡದ ವಸ್ತುಗಳನ್ನ ಮಾರಾಟ ಮಾಡುತ್ತಾರೆ.

ಅಂದರೆ ನಿಮ್ಮ ಬಳಿ ಇರುವ ಪಾದರಕ್ಷೆ ನಿಮಗೆ ಇಷ್ಟವಿಲ್ಲ ಅಥವಾ ನಿಮ್ಮ ಮನೆಯಲ್ಲಿ ಇರುವ ಹಳೆಯ ಟೇಬಲ್ ಅಥವಾ ಛೇರುಗಳನ್ನ ಮಾರಬೇಕಿದೆ. ಇಲ್ಲಿ ಅದನ್ನು ಮಾರಾಟ ಮಾಡಬಹುದು. ಹೀಗೆ ಇಲ್ಲಿ ಸಿಗದ ವಸ್ತುವಿಲ್ಲ ಎನ್ನಬಹುದು. ಇಲ್ಲಿನ ಜನ ಸಾಮಾನ್ಯರು ಅಥವಾ ಮಧ್ಯಮ ವರ್ಗದ ಜನರಲ್ಲಿ ಭಾರತೀಯ ಮಧ್ಯಮ ವರ್ಗದ ಜನರಲ್ಲಿ ಇರುವ ಒಣ ಜಂಬ ಅಥವಾ ಸುಳ್ಳು ಪ್ರತಿಷ್ಠೆ ಇಲ್ಲ. ತಮ್ಮ ಬಳಿ ಇಲ್ಲದ ವಿಷಯದ ಬಗ್ಗೆ ಇದೆಯೆಂದು ತೋರಿಸಿಕೊಳ್ಳುವ ಗುಣ ಕೂಡ ಕಡಿಮೆ.

ನಮ್ಮಲ್ಲಿ ಎರಡು ಮೂರು ದಶಕದ ಹಿಂದೆ ನೆಂಟರ ಮಕ್ಕಳ ಬಟ್ಟೆಯನ್ನು ಅವರಿಗೆ ಚಿಕ್ಕದಾಯಿತು ಎಂದು ನಾವು ಹಾಕುತ್ತಿವು. ಇಂದಿಗೆ ಈ ರೀತಿಯ ವಿಷಯವನ್ನು ಊಹಿಸಿಕೊಳ್ಳುವುದು ಕೂಡ ಅಸಾಧ್ಯ. ಈ ವಿಷಯದಲ್ಲಿ ಯೂರೋಪು ಇಂದಿಗೂ ತನ್ನ ಹಳೆಯತನವನ್ನು ಉಳಿಸಿಕೊಂಡಿದೆ. ಅತಿ ಕಡಿಮೆ ಬೆಲೆಯಲ್ಲಿ ಹೀಗೆ ಬಳಸಿದ ಬಟ್ಟೆ, ಶೂಸ್‌ನಿಂದ ದಿನ ನಿತ್ಯದ ಬದುಕಿಗೆ ಬೇಕಾಗುವ ಹಲವಾರು ವಸ್ತುಗಳನ್ನ ಇಲ್ಲಿ ಕೊಳ್ಳಬಹುದು.

ಮೊದಲೇ ಹೇಳಿದಂತೆ ಈ ಸಮಾಜದಲ್ಲಿ ಇದನ್ನ ಪ್ರತಿಷ್ಠೆಗೆ ಕುಂದು ಎನ್ನುವಂತೆ ನೋಡುವುದಿಲ್ಲ. ಬದಲಿಗೆ ಪದಾರ್ಥಗಳ ಪೂರ್ಣ ಬಳಕೆಯಾದಂತೆ ಆಯ್ತು ಎಂದು ನೋಡುತ್ತಾರೆ. ಊಟ ತಿಂಡಿಯ ವಿಷಯದಲ್ಲಿ ಸಹ ಈ ಮಾತು ಅನ್ವಯ, ಅಂದರೆ ಯಾರೋ ತಿಂದು ಬಿಟ್ಟ ಆಹಾರ ಇನ್ನೊಬ್ಬರು ತಿನ್ನುತ್ತಾರೆ ಎಂದಲ್ಲ. ಆದರೆ ನಾವು ಯಾವುದಾದರೂ ಹೋಟೆಲ್‌ಗೆ ಹೋಗಿ ನಾವು ಆದೇಶ ನೀಡಿದ್ದ ಆಹಾರ ಹೆಚ್ಚಾದರೆ, ಅದೆಷ್ಟೇ ಉಳಿದಿರಲಿ ಅದನ್ನ ಹೋಟೆಲ್‌ನವರು ಪ್ಯಾಕ್ ಮಾಡಿ ಗ್ರಾಹಕರ ಕೈಲಿಡುತ್ತಾರೆ.

ಬಿಸಾಡುವುದನ್ನು ಇಲ್ಲಿ ಅಷ್ಟೇನೂ ಗೌರವಯುತವಾಗಿ ಜನ ಕಾಣುವುದಿಲ್ಲ. ಕೇವಲ ಅರ್ಧ ರೋಟಿ, ಎರಡು ಚಮಚ ದಾಲ್ ಮಿಕ್ಕಿದ್ದರೂ ಕೂಡ ಅದನ್ನು ಪ್ಯಾಕ್ ಮಾಡಿಕೊಡುತ್ತಾರೆ. ಆಹಾರ ಪೋಲು ಮಾಡುವುದನ್ನು ಇಲ್ಲಿನ ಜನ ಮೆಚ್ಚುವುದಿಲ್ಲ. ಭಾರತದಲ್ಲಿ ಆಹಾರದ ಕೊರತೆಯಿಂದ ನಿತ್ಯವೂ ಸಾಕಷ್ಟು ಮರಣವಾಗುತ್ತದೆ. ಅದರ ಜೊತೆ ಜೊತೆಗೆ ನಿತ್ಯವೂ ಟನ್‌ಗಟ್ಟಲೆ ಆಹಾರ ಕೂಡ ಪೋಲಾಗುತ್ತದೆ.

ನಮ್ಮಲ್ಲಿ ಸಭೆ , ಸಮಾರಂಭದ ಹೆಸರಿನಲ್ಲಿ ಬಹಳಷ್ಟು ಆಹಾರ ಪದಾರ್ಥವನ್ನ ಪೋಲು ಮಾಡುತ್ತೇವೆ. ಮದುವೆಗೆ ಅಥವಾ ಇನ್ನಿತರ ಸಮಾರಂಭಕ್ಕೆ ನಾವು ಆಮಂತ್ರಣವನ್ನು ನೀಡುತ್ತೇವೆ. ಆದರೆ ಅವರಲ್ಲಿ ಎಷ್ಟು ಜನ ಬರುತ್ತಾರೆ? ಅಥವಾ ಇಲ್ಲ? ಎನ್ನುವ ನಿಖರತೆ ನಮಗಿರುವುದಿಲ್ಲ. ಸ್ಪ್ಯಾನಿಷರು ಈ ವಿಷಯದಲ್ಲಿ ನಮಗಿಂತ ಬಹಳ ಭಿನ್ನ.

ಮದುವೆಯಂತಹ ಸಮಾರಂಭಕ್ಕೆ ನೂರು ಜನರ ಮೇಲೆ ಕರೆಯುವುದಿಲ್ಲ. ಮದುವೆ ಇಂತಹ ದಿನ, ಇಂತಹ ಜಾಗದಲ್ಲಿ ಎನ್ನುವ ಮಾಹಿತಿಯ ಜೊತೆಗೆ ಹೊಸ ದಂಪತಿಗಳಿಗೆ ಯಾವ ವಸ್ತುಗಳ ಅವಶ್ಯಕತೆಯಿದೆ ಎನ್ನುವ ಪಟ್ಟಿಯನ್ನು ಕೂಡ ಹಾಕಿರುತ್ತಾರೆ. ಯಾರನ್ನು ಕರೆಯುತ್ತಾರೆ ಅವರಿಗೆ ಈ ವೆಬ್ ಸೈಟ್ ಲಿಂಕ್ ಕೂಡ ಕಳುಹಿಸುತ್ತಾರೆ. ಉದಾಹರಣೆಗೆ ನವ ದಂಪತಿಗಳಾಗುವವರಿಗೆ ವಾಷಿಂಗ್ ಮಷೀನ್ ಅವಶ್ಯಕತೆಯಿದೆ ಎಂದುಕೊಳ್ಳಿ.

ಅದರ ಬೆಲೆ 500 ಯುರೋ ಆದರೆ ನಿಮಗೆ 500 ಕೊಡಲು ಆಗುವುದಿಲ್ಲ, ನೀವು 100 ಯುರೋವನ್ನ ವಾಷಿಂಗ್ ಮಷೀನ್ ಖರೀದಿಗೆ ಎಂದು ನೀಡಬಹುದು. ಅದು ಮುಗಿದ ನಂತರ ಲಿಸ್ಟ್‌ನಿಂದ ಆ ವಸ್ತುವನ್ನ ತೆಗೆದು ಹಾಕುತ್ತಾರೆ. ನೀವು ಈ ರೀತಿಯ ಪಟ್ಟಿಯನ್ನು ನೋಡುವ ವೇಳೆ ಎಲ್ಲಾ ಬೇಡಿಕೆಗಳು ಮುಗಿದು ಹೋಗಿದ್ದರೆ ನೀವು ಗಿಫ್ಟ್ ಕೂಪನ್ ಖರೀದಿಸಿ ನೀಡಬಹುದು. ನಮ್ಮಂತೆ ಹಣ ನೀಡುವ ಸಂಪ್ರದಾಯ ಇಲ್ಲ.

ಇದರಿಂದ ಒಂದೇ ವಸ್ತುವನ್ನು ಹಲವರು ನೀಡುವುದು ತಪ್ಪುತ್ತದೆ. ಹಣವೂ ಸದುಪಯೋಗವಾಗುತ್ತದೆ. ಇದೊಂದು ಉತ್ತಮ ಪದ್ಧತಿ. ಭಾರತೀಯರು ಕೂಡ ಇದನ್ನ ಅಳವಡಿಸಿಕೊಂಡರೆ ಒಳ್ಳೆಯದು. ಹತ್ತಾರು ಫೋಟೋ ಫ್ರೇಮ್‌ಗಳು, ಗಡಿಯಾರ ಪುನರಾವರ್ತನೆಯಾಗುವುದು ತಪ್ಪುತ್ತದೆ.

ಇಲ್ಲಿ ಎಲ್ಲಾ ಪದಾರ್ಥಗಳ ಬೆಲೆ ಹೆಚ್ಚಿರುವುದರಿಂದ ಜನರಿಗೆ ವಸ್ತುವಿನ ಮೌಲ್ಯದ ಅರಿವಿದೆ. ಹೀಗಾಗಿ ಸಣ್ಣ ಪುಟ್ಟ ವಿಷಯಗಳನ್ನ ಸಹ ಜನತೆ ಬಹಳ ಕಕ್ಕುಲಾತಿಯಿಂದ ಕಾಣುತ್ತಾರೆ. ಇಲ್ಲಿ ಭಾರತದ ಮಧ್ಯಮವರ್ಗದ ಜನ ಅನುಭವಿಸುವ ಯಾವುದೇ ಸವಲತ್ತು ಅಥವಾ ಸೌಲಭ್ಯವನ್ನ ಹೊಂದಲು ಕಷ್ಟ ಸಾಧ್ಯ.

ಮನೆ ಕೆಲಸದವರನ್ನು ಹೊಂದುವುದು, ಬಟ್ಟೆಯನ್ನು ಇಸಿಗೆ ನೀಡುವುದು, ಮನೆಯ ಸುಣ್ಣ ಬಣ್ಣಕ್ಕೆ ಜನರನ್ನ ನೇಮಕ ಮಾಡುವುದು, ಮಕ್ಕಳನ್ನು ನೋಡಿಕೊಳ್ಳಲು ಆಯಾಳನ್ನು ಇಟ್ಟು ಕೊಳ್ಳುವುದು, ಕಾರಿಗೆ ಡ್ರೈವರ್‌ನ್ನು ನೇಮಿಸಿಕೊಳ್ಳುವುದು ಹೀಗೆ ಇವೆ ಇಲ್ಲಿ ಲಕ್ಸುರಿ ಪಟ್ಟಿಗೆ ಸೇರಿಕೊಳ್ಳುತ್ತವೆ.

ದಿನನಿತ್ಯದ ಮನೆ ಕಸ ಮುಸುರೆ, ಬಟ್ಟೆ, ಎಲ್ಲವು ಓಕೆ. ಆದರೆ ಮನೆಯನ್ನು ಎರಡು ವರ್ಷಕ್ಕೊಮ್ಮೆ ಪೈಂಟ್ ಮಾಡಲು ಕೂಡ ಜನ ಇಲ್ಲಿ ಬೇರೆಯವರನ್ನು ನೇಮಕ ಮಾಡಿಕೊಳ್ಳುವುದಿಲ್ಲ. ವಾರಾಂತ್ಯದಲ್ಲಿ ಮತ್ತು ಬಿಡುವಿನ ವೇಳೆಯಲ್ಲಿ ಅವರೇ ಈ ಕೆಲಸವನ್ನ ಕೂಡ ಮಾಡುತ್ತಾರೆ. ಮನೆಯಲ್ಲಿ ಆಗುವ ಸಣ್ಣ ಪುಟ್ಟ ರಿಪೇರಿ ಕೆಲಸವನ್ನು ಕೂಡ ಕಲಿತಿರುತ್ತಾರೆ.

ಆ ನಿಟ್ಟಿನಲ್ಲಿ ನೋಡುವುದಾದರೆ ಭಾರತೀಯ ಮಧ್ಯಮ ವರ್ಗದ ಜನ ಸುಖದ ಸುಪ್ಪತ್ತಿಗೆಯಲ್ಲಿ ತೇಲಾಡುತ್ತಿದ್ದಾರೆ ಎಂದು ಧಾರಾಳವಾಗಿ ಹೇಳಬಹುದು. ಇದೆಲ್ಲದರ ಜೊತೆಗೆ ವರ್ಷದ ಆರೆಂಟು ತಿಂಗಳು ಕಾಡುವ ಚಳಿ ಇವರನ್ನು ಇನ್ನಷ್ಟು ಮನುಷ್ಯರನ್ನಾಗಿ ಮಾಡಿದೆ. ಮೂಲದಲ್ಲಿ ನಾವೆ ಒಂದೇ ಎಂದಾದರೂ ಪರಿಸರ, ಸನ್ನಿವೇಶಗಳು ಮನುಷ್ಯ ಬದುಕುವ ರೀತಿಯನ್ನು ಬದಲಾಯಿಸುವ ರೀತಿ ಸೋಜಿಗ ಹುಟ್ಟಿಸುತ್ತದೆ.

**– ರಂಗಸ್ವಾಮಿ** ಎಂ

# ಸಾಂಕೇತಿಕವಾಗಿ ನಾಯಿಗಳು ಯಾರು?

ಬೀದಿ ನಾಯಿಗಳ ಬಗ್ಗೆ ಸುಪ್ರೀಂಕೋರ್ಟ್ ಆದೇಶದ ಬಗ್ಗೆ ಚರ್ಚೆಗಳು ಆಗುತ್ತಿರುವಾಗ ಕಾಡಿನ ನಾಯಿಯ ಪ್ರವೇಶ. ಕಾಡಿನ ನಾಯಿಯೊಂದು ಆಹಾರ ಹುಡುಕುತ್ತಾ ದಾರಿ ತಪ್ಪಿಸಿಕೊಂಡು ನಾಡಿಗೆ ಬಂದಿದೆ. ಮಳೆಗಾಲದ ಈ ಸಮಯದಲ್ಲಿ ಅದಕ್ಕೆ ಕಾಡಿನಲ್ಲಿ ಆಹಾರದ ಕೊರತೆ ಕಾಡಿತು. ಬಹುತೇಕ ಮಾಂಸಹಾರಿ ಪ್ರಾಣಿ ನಾಯಿ. ರಾತ್ರಿಯೆಲ್ಲಾ ಸಂಚರಿಸುತ್ತಾ ಯಾವುದೋ ಹಾದಿ ಹಿಡಿದು ಸಾಗುತ್ತಿರುವಾಗ ಆಕಸ್ಮಿಕವಾಗಿ ಕಾಡು ಕೊನೆಯಾಗಿ ಬೆಳಗಿನ ಹೊತ್ತಿಗೆ ತನಗರಿವಿಲ್ಲದೆ ಮತ್ತು ತಾನೆಂದೂ ನೋಡಿರದ ನಗರ ಪ್ರವೇಶಿಸಿತು. ಕಾಡ ನಾಯಿಯಾದರೂ ಇತ್ತೀಚಿನ ವರ್ಷಗಳಲ್ಲಿ ಆಹಾರ ಸರಿಯಾಗಿ ಸಿಗದೆ ಸ್ವಲ್ಪ ಬಡಕಲು ದೇಹದ ನಾಯಿ ಆಟದ ಮೈದಾನದಲ್ಲಿ ತನ್ನದೇ ನಾಯಿ ಪಂಗಡದ ವಿವಿಧ ಆಕಾರದ ದಷ್ಟಪುಷ್ಟ ನಾಯಿಗಳು ಸಂಚರಿಸುತ್ತಿರುವುದನ್ನು ನೋಡಿ ಖುಷಿಯಾಯಿತು. ತಾನು ಸರಿಯಾದ ದಾರಿಯಲ್ಲೇ ಇದ್ದೇನೆ ಎಂದು ಭಾವಿಸಿ ಅದರ ಹತ್ತಿರ ಹೋಗುತ್ತಿದ್ದಂತೆ ಅದರ ಮಾಲೀಕರು ಕಿರುಚುತ್ತಾ ಕೈಯಲ್ಲಿದ್ದ ಕೋಲಿನಿಂದ ಕಾಡ ನಾಯಿಯನ್ನು ಹೊಡೆಯಲು ಬಂದರು. ಅದೇ ಸಮಯದಲ್ಲಿ ಸಾಕಿದ ನಾಯಿಗೆ ಹಾಕಿದ್ದ ಕತ್ತಿನ ದಾರವನ್ನು ಹತ್ತಿರ ಎಳೆದುಕೊಂಡರು. ಗಾಬರಿಯಾದ ಕಾಡ ನಾಯಿ ತಪ್ಪಿಸಿಕೊಂಡು ದೂರ ಓಡಿತು. ಸ್ವಲ್ಪ ದೂರ ಹೋಗಿ ಮೈದಾನದ ಕೊನೆಯಲ್ಲಿ ನಿಂತು ನೋಡಿತು. ಸಾಕಿದ ನಾಯಿಗಳು ಮನುಷ್ಯನ ಬಲೆಯಲ್ಲಿ ಸಿಲುಕಿ ತನ್ನ ತನವನ್ನು ಕಳೆದುಕೊಂಡು ಅವನ ಇಚ್ಛೆಯಂತೆ ಬದುಕುತ್ತಿರುವುದು ಕಂಡು ಬೇಸರವಾಗಿ ಮುಂದೆ ಸಾಗಿತು.

ದೂರದಲ್ಲಿ ಮನೆಯ ಮುಂದೆ ಬೆಕ್ಕೊಂದು ಕಾಣಿಸಿತು. ಹಸಿವಿನಿಂದ ಬಳಲಿದ ಕಾಡ ನಾಯಿಗೆ ಆಹಾರ ಸಿಕ್ಕ ಸಂತೋಷದಲ್ಲಿ ಓಡಿ ಅದನ್ನು ಹಿಡಿಯಲು ಮುನ್ನುಗಿತ್ತು. ಇನ್ನೇನು ಬೆಕ್ಕನ್ನು ಹಿಡಿಯಬೇಕು ಎನ್ನುವಷ್ಟರಲ್ಲಿ ಅದರ ಮಾಲಕಿ ಕೂಗುತ್ತಾ ಓಡಿ ಬಂದು ಬೆಕ್ಕನ್ನು ಎದೆಗವಚಿ ಸಿಕ್ಕ ಕಲ್ಲಿನಿಂದ ಈ ನಾಯಿಯನ್ನು ಹೊಡೆದಳು. ಕಾಡಿನಲ್ಲಿ ಬೆಕ್ಕು ಮೊಲಗಳನ್ನು ಯಾವುದೇ ಆತಂಕವಿಲ್ಲದೇ ಭೇಟೆಯಾಡುತ್ತಿದ್ದ ಕಾಡ ನಾಯಿಗೆ ಈ ಬೆಕ್ಕನ್ನು ಮನುಷ್ಯರೊಬ್ಬರು ರಕ್ಷಿಸುತ್ತಿರುವುದು ನೋಡಿ ಆಶ್ಚರ್ಯವಾಗಿ ಕಲ್ಲಿನ ಹೊಡೆತದಿಂದ ತಪ್ಪಿಕೊಂಡು ಮತ್ತೆ ಓಡಿ ಹೋಯಿತು.

ಹಾಗೇ ಅಲೆಯುತ್ತಾ ಅಲೆಯುತ್ತಾ ಮಧ್ಯಾಹ್ನದ ವೇಳೆಗೆ ದೊಡ್ಡ ಬಂಗಲೆಯ ಬಳಿ ಬಂದಿತು. ಅಲ್ಲಿ ಐದಾರು ನಾಯಿಗಳನ್ನು ಗೂಡಿನಲ್ಲಿ ಕೂಡಿ ಹಾಕಲಾಗಿತ್ತು. ಆ ನಾಯಿಗಳು ಏನನ್ನೋ ತಿನ್ನುತ್ತಿದ್ದವು. ಈ ಕಾಡ ನಾಯಿ ಕುತೂಹಲದಿಂದ ಗೇಟಿನ ಬಳಿ ನಿಂತು ನೋಡುತ್ತದೆ. ತಾನೆಂದೂ ನೋಡಿರದ ಬಿಸ್ಕತ್ತುಗಳು, ಹಾಲು, ಅನ್ನ, ದೋಸೆ ಇನ್ನೂ ಅದಕ್ಕೆ ಗೊತ್ತಾಗದ ಏನನ್ನೋ ಚಿಕ್ಕ ಬಟ್ಟಲುಗಳಲ್ಲಿ ಇಟ್ಟಿರುತ್ತಾರೆ.ಅದನ್ನೇ ಆ ನಾಯಿಗಳು ನೆಕ್ಕುತ್ತಿರುತ್ತವೆ. ಮಾಂಸವನ್ನು ಮಾತ್ರ ತಿನ್ನುತ್ತಿದ್ದ ಈ ಕಾಡ ನಾಯಿಗೆ ಇದು ಮತ್ತಷ್ಟು ಆಶ್ಚರ್ಯವನ್ನುಂಟು ಮಾಡುತ್ತದೆ. ಆದರೂ ಕೆಳಗೆ ಚೆಲ್ಲಿದ ಕೆಲವು ಅಗುಳುಗಳನ್ನು ಮೂಸು ನೋಡಲು ಗೇಟಿನ ಒಳ ಹೋಗಲು ಪ್ರಯತ್ನಿಸುತ್ತದೆ. ಆಗ ಎಲ್ಲಿಂದಲೋ ಓಡಿಬಂದ ಸೆಕ್ಯುರಿಟಿ ಒಬ್ಬ ದೊಣ್ಣೆಯಿಂದ ಬೀಸಿ ಹೊಡೆಯುತ್ತಾನೆ. ತಬ್ಬಿಬ್ಬಾದ ಕಾಡ ನಾಯಿ ಮತ್ತೆ ತಪ್ಪಿಕೊಂಡು ಓಡುತ್ತದೆ. ದಾರಿಯಲ್ಲಿ ಕಂಡ ಕೆಲವು ಕೋಳಿಗಳನ್ನು ಹಿಡಿಯಲು ಪ್ರಯತ್ನಿಸಿ ಜನರಿಂದ ಕಲ್ಲುಗಳಲ್ಲಿ ಏಟು ತಿನ್ನುತ್ತದೆ. ಕೊನೆಗೆ...

ಹಸಿವಿನಿಂದ ನರಳಿ ನರಳಿ ಹಾಗೆಯೇ ರಾತ್ರಿಯಾಗುತ್ತದೆ. ಸುತ್ತಾಡಿ ಸುತ್ತಾಡಿ ಬಳಲಿ ಬೀದಿ ಬದಿಯ ಗುಡಿಸಲುಗಳ ಸ್ಲಂ ಜಾಗದಲ್ಲಿ ಒಂದು ಮರೆಯಲ್ಲಿ ಕುಳಿತು ವಿಶ್ರಾಂತಿ ಪಡೆಯುತ್ತಿರುತ್ತದೆ. ಒಂದಷ್ಟು ಸಮಯದ ನಂತರ ಪುಟ್ಟ ಮಗುವೊಂದು ಅಲ್ಲಿ ಒಂಟಿಯಾಗಿ ಆಡುತ್ತಾ ಇರುವುದು ಕಾಣಿಸುತ್ತದೆ.



ಹಸಿವಿನಿಂದ ಕಂಗಾಲಾಗಿದ್ದ ನಾಯಿ ಸುತ್ತಲೂ ಗಮನಿಸುತ್ತದೆ. ಯಾರೂ ಕಾಣುವುದಿಲ್ಲ, ಇದೇ ಸಮಯವೆಂದು ಛಂಗನೆ ಎಗರಿ ಮಗುವಿನ ಕತ್ತಿಗೆ ಬಾಯಿ ಹಾಕಿ ಕ್ಷಣಾರ್ಧದಲ್ಲಿ ಪಕ್ಕದಲ್ಲೇ ಇದ್ದ ಪೊದೆಗೆ ಎಳೆದೊಯ್ಯುತ್ತದೆ. ವಾಹನ ಸಂಚಾರದ ಅಬ್ಬರದಲ್ಲಿ ಮಗುವಿನ ಅಳುವ ಶಬ್ದ ಕೂಡ ಯಾರಿಗೂ ಕೇಳಿಸುವುದಿಲ್ಲ. ಕೆಲವರಿಗೆ ಕೇಳಿಸಿದರೂ ಈ ನಗರದ ಒತ್ತಡದ ಬದುಕಿನಲ್ಲಿ ಅದನ್ನು ಏನೋ ಸಹಜವೆಂಬಂತೆ ನಿರ್ಲಕ್ಷಿಸಿ ಮುಂದೆ ಸಾಗುತ್ತಾರೆ.

ಎರಡು ಮೂರು ದಿನದ ಹಸಿವನ್ನು ನೀಗಿಸಿಕೊಂಡು ಕಾಡ ನಾಯಿ ತೃಪ್ತಿಯಿಂದ ಮುಂದೆ ಸಾಗುತ್ತದೆ. ಆಗ ಅದಕ್ಕೆ ಅರಿವಾಗುತ್ತದೆ. ಕಾಡಿನ ನ್ಯಾಯವೇ ಬೇರೆ. ನಾಡಿನ ನ್ಯಾಯವೇ ಬೇರೆ. ನಗರದಲ್ಲಿ ಕುರಿ, ಕೋಳಿ, ನಾಯಿ, ಬೆಕ್ಕು, ಹಂದಿ, ಹಸುಗಳಿಗೆ ರಕ್ಷಣೆ ಇದೆ. ಆದರೆ ಬೀದಿ ಬದಿಯ ಮಕ್ಕಳಿಗೆ ಇಲ್ಲಿ ಯಾವುದೇ ಭದ್ರತೆ ಇಲ್ಲ. ಆದ್ದರಿಂದ ಇನ್ನು ಮೇಲೆ ನಾನು ಕಾಡಿಗೆ ಹಿಂತಿರುಗುವುದಿಲ್ಲ. ಇಲ್ಲಿಯೇ ರಾತ್ರಿ ಹೊತ್ತು ಬೀದಿ ಬದಿಯ ಮಕ್ಕಳೇ ನನ್ನ ಸುಲಭ ಮತ್ತು ರುಚಿಯಾದ ಆಹಾರ. ರಕ್ತದ ರುಚಿಕಂಡ ಕಾಡ ನಾಯಿಯೊಂದು ನಿಮ್ಮ ನಗರದಲ್ಲಿ ಸಂಚರಿಸುತ್ತಿದೆ ಎಚ್ಚರ. ನಿಮ್ಮ ಮಕ್ಕಳು ನಿಮ್ಮಿಂದ ಕಾಣೆಯಾಗುತ್ತಿದ್ದಾರೆ ಈಗಲಾದರೂ ಎಚ್ಚೆತ್ತುಕೊಳ್ಳಿ.

ಏಕೆಂದರೆ, ನಾಯಿ ಕಚ್ಚಿದ ಮುದ್ದು ಕಂದನೊಂದು ಅಳುತ್ತಾ ತನ್ನ ಕೈ ನೀಡುತ್ತಿದೆ.. ಎದ್ದು ನಿಲ್ಲಲು – ನಿಂತು ನಡೆಯಲು ನನಗೆ ಸಹಾಯ ಮಾಡೆಂದು ತನ್ನ ಮುಗ್ಧ ಕಣ್ಣುಗಳಲ್ಲೇ ಆಹ್ವಾನಿಸುತ್ತಿದೆ. ನಾನು ಕೈ ನೀಡಬೇಕೆಂದು ಕೈಚಾಚುತ್ತಾ ನನ್ನ ಕೈಗಳನ್ನೊಮ್ಮೆ ನೋಡಿಕೊಂಡೆ. ಕೈಗಳಿಗೆ ಅಲರ್ಜಿಯಾಗಿ ಗುಳ್ಳೆಗಳು ಎದ್ದಿವೆ, ಅಲ್ಲಲ್ಲಿ ಕೀವು ರಕ್ತದ ಗಾಯಗಳು ಕಾಣುತ್ತಿದೆ. ಅಂಗೈಗೆ ಮೆತ್ತಿರುವ ದ್ರವದಲ್ಲಿ ಭಯಂಕರ ವೈರಸ್‌ಗಳು ಹರಿದಾಡುತ್ತಿದೆ. ತಿಳಿದೂ ತಿಳಿದೂ ಹೇಗೆ ನೀಡಲಿ ಈ ಮಲಿನವಾದ ಕೈಗಳನ್ನು ಆ ಪುಟ್ಟ ಕಂದಮ್ಮನಿಗೆ?

ನನಗೆ ಅಂಟಿರುವ ಈ ಚರ್ಮ ರೋಗ ಮಗುವಿಗೆ ಹರಡಿದರೆ? ರೋಗ ನಿರೋಧಕ ಶಕ್ತಿ ಇನ್ನೂ ಬಲಿಯದ ಆ ಚಿನ್ನಾರಿಗೆ ರೋಗ ಅಂಟಿಸಿದ ಪಾಪಕ್ಕೆ ನಾನು ಗುರಿಯಾಗುವುದಿಲ್ಲವೇ? ಅಕಸ್ಮಾತ್ ಕೈ ನೀಡಿ ಎದ್ದು ನಿಲ್ಲಿಸಿದರೂ ನಡೆದಾಡಲು ಕರೆದೊಯ್ಯುವುದೆಲ್ಲಿಗೆ! ಕೆಸರು ತುಂಬಿದ ಕೊಚ್ಚೆ ದಾರಿಯ ಕಮಟು ವಾಸನೆಯ ಹಳ್ಳ ಬಿದ್ದ ಅಪಾಯಕಾರಿ ರಸ್ತೆಯಲ್ಲಿ ಅದನ್ನು ಹೇಗೆ ನಡೆಸಲಿ? ಯೋಚಿಸುತ್ತಾ ಸುತ್ತಮುತ್ತಲು ನೋಡಿದೆ. ಬಹಳ ಜನ ಕಾಣಿಸಿದರು. ಆದರೆ ಎಲ್ಲರ ಕೈಗಳಿಗೂ ರೋಗ ಬಂದು ರಕ್ತ ಕೀವುಗಳು ಜಿನುಗುತ್ತಿದೆ, ಇದೊಂದು ಸಾಂಕ್ರಾಮಿಕ ರೋಗ. ಅಲ್ಲಿ ನೋಡಿದರೆ ನಿಷ್ಕಲ್ಮಶ ನಗುವಿನ ಮಗು ನನ್ನತ್ತ ಕೈಚಾಚಿತ್ತಿದೆ ಭವಿಷ್ಯದ ಅಪಾರ ಕನಸುಗಳೊಂದಿಗೆ ಶುದ್ಧ ಆರೋಗ್ಯವಂತ ಕೈಗಳಿಗಾಗಿ ನಾನು ಇನ್ನೂ ಹುಡುಕುತ್ತಲೇ ಇದ್ದೇನೆ. ಸಿಗುವುದೆಂಬ ಭರವಸೆಯಿಂದಯಾರಾದರೂ ಆರೋಗ್ಯವಂತರು ಉಳಿದಿದ್ದರೆ ದಯವಿಟ್ಟು ಕೈಚಾಚಿ...

**– ವಿವೇಕಾನಂದ. ಎಚ್. ಕೆ.,** ಬೆಂಗಳೂರು



# ಗುರುವಾಯೂರು ಎಂಬ ಹೆಸರು ಬಂದ ಕಥೆ

ಗುರುವಾಯೂರು ದೇವಾಲಯವು ಭಾರತದ ಕೇರಳ ರಾಜ್ಯದ ತ್ರಿಶೂರ್ ಜಿಲ್ಲೆಯಲ್ಲಿರುವ ಒಂದು ಪ್ರಸಿದ್ಧ ಯಾತ್ರಾ ಸ್ಥಳವಾಗಿದೆ. ಇದು ಭಗವಾನ್ ಶ್ರೀಕೃಷ್ಣನಿಗೆ ಸಮರ್ಪಿತವಾದ ದೇವಾಲಯವಾಗಿದ್ದು, ಇದನ್ನು ಭೂಲೋಕ ವೈಕುಂಠ ಎಂದೂ ಕರೆಯಲಾಗುತ್ತದೆ. ಈ ದೇವಾಲಯದ ಉತ್ಪತ್ತಿಯ ಕತೆಯು ಪೌರಾಣಿಕವಾಗಿ ಅತ್ಯಂತ ರೋಮಾಂಚಕವಾದದ್ದು ಮತ್ತು ಭಕ್ತರಿಗೆ ಆಧ್ಯಾತ್ಮಿಕ ಪ್ರೇರಣೆಯ ಮೂಲವಾಗಿದೆ. ಈ ಲೇಖನದಲ್ಲಿ ಗುರುವಾಯೂರು ದೇವಾಲಯದ ಹುಟ್ಟಿನ ಕತೆಯನ್ನು ವಿವರವಾಗಿ ತಿಳಿಸಲಾಗಿದೆ.

ಪೌರಾಣಿಕ ಕಥೆಯ ಪ್ರಕಾರ, ದ್ವಾಪರ ಯುಗದ ಕೊನೆಯಲ್ಲಿ ಭಗವಾನ್ ಶ್ರೀಕೃಷ್ಣನು ತನ್ನ ಇಹಲೋಕದ ಅವತಾರವನ್ನು ತ್ಯಜಿಸುವ ಸಮಯ ಸಮೀಪಿಸಿತು. ಆ ಸಂದರ್ಭದಲ್ಲಿ ಶ್ರೀಕೃಷ್ಣನು ತನ್ನ ಆಪ್ತ ಶಿಷ್ಯನಾದ ಉದ್ಧವನನ್ನು ಕರೆದು ಒಂದು ಮಹತ್ವದ ಜವಾಬ್ದಾರಿಯನ್ನು ವಹಿಸಿಕೊಟ್ಟನು. ದ್ವಾರಕೆಯು ಸಮುದ್ರದಲ್ಲಿ ಮುಳುಗಲಿದೆ ಎಂದು ತಿಳಿದಿದ್ದ ಶ್ರೀಕೃಷ್ಣನು, ತನ್ನ ವಿಷ್ಣು ಸ್ವರೂಪದ ವಿಗ್ರಹವನ್ನು ಸುರಕ್ಷಿತವಾಗಿರಿಸಲು ಉದ್ಧವನಿಗೆ ಸೂಚಿಸಿದನು. ಈ ವಿಗ್ರಹವನ್ನು ಬೃಹಸ್ಪತಿಯಾದ ಗುರು ದೇವರಿಗೆ ಮತ್ತು ವಾಯು ದೇವರಿಗೆ ಒಪ್ಪಿಸಬೇಕೆಂದು ಶ್ರೀಕೃಷ್ಣನು ಆದೇಶಿಸಿದನು. ಈ ವಿಗ್ರಹವು ದ್ವಾರಕೆಯಲ್ಲಿ ಶ್ರೀಕೃಷ್ಣನಿಗೆ ಸಮರ್ಪಿತವಾದ ಪವಿತ್ರ ವಿಗ್ರಹವಾಗಿತ್ತು, ಇದನ್ನು ಭಕ್ತಿಯಿಂದ ಪೂಜಿಸಲಾಗುತ್ತಿತ್ತು.ಶ್ರೀಕೃಷ್ಣನ ಆದೇಶದಂತೆ ಉದ್ಧವನು ಆ ವಿಷ್ಣು ವಿಗ್ರಹವನ್ನು ಗುರು ಮತ್ತು ವಾಯು ದೇವರಿಗೆ ಒಪ್ಪಿಸಿದನು. ತದನಂತರ ಉದ್ಧವನು ತನ್ನ ತಪಸ್ಸಿನ ಜೀವನವನ್ನು ಮುಂದುವರಿಸಲು ತೆರಳಿದನು.

ಈ ಘಟನೆಯು ಗುರುವಾಯೂರು ದೇವಾಲಯದ ಉತ್ಪತ್ತಿಯ ಮೊದಲ ಹೆಜ್ಜೆಯಾಯಿತು. ಗುರು ದೇವರು (ಬೃಹಸ್ಪತಿ) ಮತ್ತು ವಾಯು ದೇವರು ಶ್ರೀಕೃಷ್ಣನ ವಿಗ್ರಹವನ್ನು ತೆಗೆದುಕೊಂಡು ದಕ್ಷಿಣ ಭಾರತದ ಕಡೆಗೆ ಪ್ರಯಾಣ ಆರಂಭಿಸಿದರು. ಈ ಪವಿತ್ರ ವಿಗ್ರಹವನ್ನು ಸೂಕ್ತ ಸ್ಥಳದಲ್ಲಿ ಪ್ರತಿಷ್ಠಾಪಿಸುವ ಜವಾಬ್ದಾರಿಯನ್ನು ಈ ಇಬ್ಬರು ದೇವತೆಗಳು ಹೊತ್ತುಕೊಂಡರು. ಅವರು ತಮ್ಮ ಪ್ರಯಾಣದಲ್ಲಿ ಕೇರಳದ ಒಂದು ನೈಸರ್ಗಿಕ ಸೌಂದರ್ಯದಿಂದ ಕೂಡಿದ ಸ್ಥಳಕ್ಕೆ ಬಂದರು. ಈ ಸ್ಥಳವು ಇಂದಿನ ಗುರುವಾಯೂರು ಎಂದು ಪ್ರಸಿದ್ಧವಾದ ಸ್ಥಳವಾಗಿತ್ತು. ಗುರುವಾಯೂರಿನ ಸುತ್ತಲಿನ ಪರಿಸರವು ಹಸಿರಿನಿಂದ ಕೂಡಿದ್ದು, ಶಾಂತವಾದ ವಾತಾವರಣವನ್ನು ಹೊಂದಿತ್ತು. ಈ ಸ್ಥಳದ ನೈಸರ್ಗಿಕ ಸೌಂದರ್ಯಕ್ಕೆ ಗುರು ಮತ್ತು ವಾಯು ದೇವರು ಮೂಕವಿಸ್ಮಿತರಾದರು. ಈ ಸ್ಥಳವು ಶ್ರೀವಿಷ್ಣುವಿನ ವಿಗ್ರಹವನ್ನು ಪ್ರತಿಷ್ಠಾಪಿಸಲು ಸೂಕ್ತವೆಂದು ಅವರಿಗೆ ಭಾಸವಾಯಿತು. ಗುರುವಾಯೂರಿನ ಈ ಸ್ಥಳದ ಬಗ್ಗೆ ತಿಳಿದಾಗ, ಗುರು ಮತ್ತು ವಾಯು ದೇವರಿಗೆ ಒಂದು ವಿಶೇಷ ವಿಷಯ ಗೊತ್ತಾಯಿತು. ಈ ಸ್ಥಳದಲ್ಲಿ ಭಗವಾನ್ ಶಿವನು ತನ್ನ ತಪಸ್ಸಿನ ಮೂಲಕ ಶ್ರೀವಿಷ್ಣುವನ್ನು ಪೂಜಿಸಿದ್ದನೆಂದು ಅವರಿಗೆ ತಿಳಿಯಿತು. ಈ ಆಧ್ಯಾತ್ಮಿಕ ಸಂಗಮದಿಂದ ಈ ಸ್ಥಳವು ಇನ್ನಷ್ಟು ಪವಿತ್ರವಾಯಿತು. ಶಿವ-ವಿಷ್ಣು ಭಕ್ತಿಯ ಈ ಸಂಗಮವು ಗುರುವಾಯೂರಿನ ವಿಶೇಷತೆಯನ್ನು ಇನ್ನಷ್ಟು ಹೆಚ್ಚಿಸಿತು. ಆದ್ದರಿಂದ, ಗುರು ಮತ್ತು ವಾಯು ದೇವರು ಈ ಸ್ಥಳದಲ್ಲಿಯೇ ಶ್ರೀವಿಷ್ಣುವಿನ ವಿಗ್ರಹವನ್ನು ಪ್ರತಿಷ್ಠಾಪಿಸಲು ತೀರ್ಮಾನಿಸಿದರು. ಗುರು ಮತ್ತು ವಾಯು ದೇವರು ಈ ಪವಿತ್ರ ವಿಗ್ರಹವನ್ನು ಪ್ರತಿಷ್ಠಾಪಿಸಲು ಸೂಕ್ತವಾದ ದೇವಾಲಯವನ್ನು ನಿರ್ಮಿಸಲು ವಿಶ್ವಕರ್ಮನನ್ನು ಕರೆಸಿದರು. ವಿಶ್ವಕರ್ಮನು ದೇವತೆಗಳ ಶಿಲ್ಪಿ ಎಂದು ಪ್ರಸಿದ್ಧನಾಗಿದ್ದು, ಆತನ ಕೌಶಲ್ಯವು ಅತ್ಯಂತ ಶ್ರೇಷ್ಠವಾಗಿತ್ತು. ಗುರು ಮತ್ತು ವಾಯು ದೇವರ ಆದೇಶದಂತೆ, ವಿಶ್ವಕರ್ಮನು ಕೆಲವೇ ಕ್ಷಣಗಳಲ್ಲಿ ಒಂದು ಸುಂದರವಾದ ದೇವಾಲಯವನ್ನು ನಿರ್ಮಿಸಿದನು. ಈ ದೇವಾಲಯವು ಕೇರಳದ ಸಾಂಪ್ರದಾಯಿಕ ವಾಸ್ತುಶಿಲ್ಪದ ಶೈಲಿಯನ್ನು ಪ್ರತಿಬಿಂಬಿಸಿತು, ಇದರಲ್ಲಿ ಸಂಕೀರ್ಣವಾದ ಕೆತ್ತನೆಗಳು ಮತ್ತು ಆಧ್ಯಾತ್ಮಿಕ ವಾತಾವರಣವು ಒಡಗೂಡಿತ್ತು. ವಿಶ್ವಕರ್ಮನಿಂದ ನಿರ್ಮಿತವಾದ ಈ ದೇವಾಲಯದಲ್ಲಿ ಗುರು ಮತ್ತು ವಾಯು ದೇವರು ಶ್ರೀವಿಷ್ಣುವಿನ ವಿಗ್ರಹವನ್ನು ಭಕ್ತಿಯಿಂದ ಪ್ರತಿಷ್ಠಾಪಿಸಿದರು. ಈ ವಿಗ್ರಹವು ಶ್ರೀಕೃಷ್ಣನ ಸ್ವರೂಪದಲ್ಲಿರುವ ವಿಷ್ಣುವಿನ ಚತುರ್ಭುಜ ರೂಪವಾಗಿತ್ತು, ಇದು ಶಂಖ, ಚಕ್ರ, ಗದೆ ಮತ್ತು ಪದ್ಮವನ್ನು ಧರಿಸಿತ್ತು. ದೇವಾಲಯವನ್ನು ಗುರು ದೇವರು (ಬೃಹಸ್ಪತಿ) ಮತ್ತು ವಾಯು ದೇವರಿಂದ ಪ್ರತಿಷ್ಠಾಪಿಸಲಾಯಿತು. ಆದ್ದರಿಂದ ಈ ಸ್ಥಳವು ಗುರುವಾಯೂರು ಎಂದು ಕರೆಯಲ್ಪಟ್ಟಿತು. ಗುರು ಎಂಬುದು ಬೃಹಸ್ಪತಿಯನ್ನು ಸೂಚಿಸಿದರೆ, ವಾಯು ಎಂಬುದು ಪವನ ದೇವರನ್ನು ಸೂಚಿಸುತ್ತದೆ. ಈ ರೀತಿಯಾಗಿ ಈ ದೇವಾಲಯವು ಗುರುವಾಯೂರು ಎಂದು ಪ್ರಸಿದ್ಧವಾಯಿತು. ಗುರುವಾಯೂರು ದೇವಾಲಯವು ಶ್ರೀಕೃಷ್ಣನ ಭಕ್ತರಿಗೆ ಅತ್ಯಂತ ಪವಿತ್ರವಾದ ಸ್ಥಳವಾಗಿದೆ. ಇಲ್ಲಿನ ಶ್ರೀಕೃಷ್ಣನ ವಿಗ್ರಹವು ದಿವ್ಯ ಶಕ್ತಿಯಿಂದ ಕೂಡಿದೆ ಎಂದು ಭಕ್ತರು ನಂಬುತ್ತಾರೆ. ಈ ದೇವಾಲಯಕ್ಕೆ ಭೇಟಿ ನೀಡುವ ಭಕ್ತರು ಶ್ರೀಕೃಷ್ಣನ ದರ್ಶನದಿಂದ ಆಧ್ಯಾತ್ಮಿಕ ಶಾಂತಿ ಮತ್ತು ಆನಂದವನ್ನು ಪಡೆಯುತ್ತಾರೆ. ಇದರ ಜೊತೆಗೆ, ಈ ದೇವಾಲಯವು ಕೇರಳದ ಸಾಂಸ್ಕೃತಿಕ ಮತ್ತು ಧಾರ್ಮಿಕ ಜೀವನದ ಒಂದು ಪ್ರಮುಖ ಕೇಂದ್ರವಾಗಿದೆ.

ಗುರುವಾಯೂರಿನಲ್ಲಿ ನಡೆಯುವ ಉತ್ಸವಗಳು, ವಿಶೇಷವಾಗಿ ಗುರುವಾಯೂರ್ ಏಕಾದಶಿ, ಭಕ್ತರನ್ನು ಆಕರ್ಷಿಸುತ್ತದೆ. ಈ ದೇವಾಲಯದಲ್ಲಿ ನಡೆಯುವ ತುಳಸೀ ಪೂಜೆ, ನಿತ್ಯದ ಪೂಜೆಗಳು ಮತ್ತು ಭಕ್ತಿಯಿಂದ ಕೂಡಿದ ವಾತಾವರಣವು ಇದನ್ನು ಒಂದು ದಿವ್ಯ ಸ್ಥಳವನ್ನಾಗಿ ಮಾಡಿದೆ. ಗುರುವಾಯೂರು ದೇವಾಲಯದ ನಿರ್ಮಾಣದ ಕತೆಯು ಶ್ರೀಕೃಷ್ಣನ ದಿವ್ಯ ಆದೇಶ, ಗುರು ಮತ್ತು ವಾಯು ದೇವರ ಭಕ್ತಿಯ ಸೇವೆ, ಮತ್ತು ವಿಶ್ವಕರ್ಮನ ಕೌಶಲ್ಯದ ಸಂಗಮವಾಗಿದೆ. ಈ ದೇವಾಲಯವು ಕೇವಲ ಒಂದು ಧಾರ್ಮಿಕ ಸ್ಥಳವಷ್ಟೇ ಅಲ್ಲ, ಭಕ್ತಿಯ, ಸಂಸ್ಕೃತಿಯ ಮತ್ತು ಆಧ್ಯಾತ್ಮಿಕತೆಯ ಒಂದು ಪ್ರತೀಕವಾಗಿದೆ. ಇಂದಿಗೂ ಗುರುವಾಯೂರು ಶ್ರೀಕೃಷ್ಣನ ಭಕ್ತರಿಗೆ ಒಂದು ದಿವ್ಯ ತಾಣವಾಗಿ ಮೆರೆಯುತ್ತಿದೆ ಮತ್ತು ಇದರ ಕತೆಯು ಪ್ರತಿಯೊಬ್ಬ ಭಕ್ತನಿಗೂ ಆಧ್ಯಾತ್ಮಿಕ ಪ್ರೇರಣೆಯನ್ನು ನೀಡುತ್ತದೆ.



# ಮಲೆನಾಡು ಕರ್ನಾಟಕ ಘೋಷಿಸಿ ವಿಶೇಷ ಅನುದಾನ ನೀಡಲಿ

## ಹೇಮಾವತಿ ನದಿಗೆ ಬಾಗಿನ ಅರ್ಪಿಸಿದ ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಆಗ್ರಹ

• ಪ್ರಜೋದಯ ವರದಿ

**ಸಕಲೇಶಪುರ:** ಹೈದರಾಬಾದ್ ಕರ್ನಾಟಕವನ್ನು ಕಲ್ಯಾಣ ಕರ್ನಾಟಕವನ್ನಾಗಿ ಘೋಷಿಸಿ ವಿಶೇಷ ಪ್ಯಾಕೇಜ್ ನೀಡಿದಂತೆ, ಮಳೆನಾಡು ಪ್ರದೇಶವನ್ನೂ ಮಲೆನಾಡು ಕರ್ನಾಟಕವೆಂದು ಘೋಷಿಸಿ ಸರ್ಕಾರ ತಕ್ಷಣವೇ ವಿಶೇಷ ಅನುದಾನ ನೀಡಬೇಕು ಎಂದು ಮಾಜಿ ಸಚಿವ ಎಚ್.ಕೆ. ಕುಮಾರಸ್ವಾಮಿ ಆಗ್ರಹಿಸಿದರು.



ಪಟ್ಟಣದ ಹೇಮಾವತಿ ನದಿಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಕಳೆದ ಮೂರು ತಿಂಗಳಲ್ಲಿ ಸುರಿದ ಭಾರೀ ಮಳೆಯಿಂದ ಮಲೆನಾಡು ಭಾಗದಲ್ಲಿ ಸುಮಾರು 300 ಟಿ ಎಂ ಸಿ ನೀರು ಹರಿದು ಹೋಗಿದೆ. ಈ ಅವಧಿಯಲ್ಲಿ ಸಕಲೇಶಪುರ ಸೇರಿದಂತೆ ಮಲೆನಾಡು ಪ್ರದೇಶವು ಅಪಾರ ನಷ್ಟವನ್ನು ಅನುಭವಿಸಿದೆ. ನೀರಿನ ಲಾಭವನ್ನು ಇತರೆ ಭಾಗದ ಜನರು ಪಡೆಯುತ್ತಿರುವರೆ? ನಷ್ಟವನ್ನು ಮಾತ್ರ ಮಲೆನಾಡು ಜನತೆ ಭರಿಸುತ್ತಿದ್ದಾರೆ ಎಂದು ವಿಷಾದ ವ್ಯಕ್ತಪಡಿಸಿದರು.

ಕಳೆದ 16 ವರ್ಷಗಳಿಂದಲೂ ಮಲೆನಾಡಿಗೆ ವಿಶೇಷ ಪ್ಯಾಕೇಜ್ ನೀಡಬೇಕೆಂದು ನಿರಂತರವಾಗಿ ಒತ್ತಾಯಿಸುತ್ತಿದ್ದೇನೆ. ಆದರೆ ಆಳುತ್ತಿರುವ ಸರ್ಕಾರಗಳು ಜಾಣ ಕುರುಡುತನ ತೋರಿಸುತ್ತಿವೆ. ಏಳು ಜಿಲ್ಲೆಗಳ ಮಳೆನಾಡು ಭಾಗವನ್ನು ಮಲೆನಾಡು ಕರ್ನಾಟಕವೆಂದು ಘೋಷಿಸಿ, ವಿಶೇಷ ಪ್ಯಾಕೇಜ್ ನೀಡುವುದು ಕಾಲದ ಅವಶ್ಯಕತೆ ಎಂದು ಅವರು ಹೇಳಿದರು.

ಅರಣ್ಯ ಕಾಯ್ದೆಯ ಪರಿಣಾಮವಾಗಿ ನೂರಾರು ವರ್ಷಗಳಿಂದ ಅರಣ್ಯ ಪ್ರದೇಶಗಳಲ್ಲಿ ವಾಸಿಸುತ್ತಿರುವ ರೈತರು, ಬೆಳಗಾರರು, ಬಡವರು ಸಂಕಷ್ಟ ಅನುಭವಿಸುತ್ತಿದ್ದಾರೆ. ಅವರ ಜೀವನಾಧಾರವಾದ ಭೂಮಿ ಅವರದ್ದೇ ಆಗಬೇಕು. ನ್ಯಾಯಾಲಯವೂ ಇದನ್ನು ಒಪ್ಪುವ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ ಜನರನ್ನು ಒಕ್ಕಲಿಸಲು ಮುಂದಾಗಬಾರದು. ಮಾನವೀಯ ದೃಷ್ಟಿಯಿಂದ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಇತ್ತೀಚಿನ ಮಳೆಯಿಂದಾಗಿ ಕಾಫಿ ಬೆಳಗಾರರು ಅಪಾರ ನಷ್ಟಕ್ಕೆ ಒಳಗಾಗಿದ್ದಾರೆ. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ದರ ಉತ್ತಮವಾಗಿದ್ದರೂ, ಅತಿವೃಷ್ಟಿ ಹಾಗೂ ಅನಾವೃಷ್ಟಿಯಿಂದ ಇಳುವರಿ ಕುಸಿತ ಕಂಡು ಬೆಳೆಗಾರರು ಸಂಕಷ್ಟ ಅನುಭವಿಸುತ್ತಿದ್ದಾರೆ. ಅವರ ನೆರವಿಗೆ ಸರಕಾರ ಬಂದು ವಿಶೇಷ ಪ್ಯಾಕೇಜ್ ನೀಡಬೇಕು ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪುರಸಭಾ ಅಧ್ಯಕ್ಷೆ ಜ್ಯೋತಿ ರಾಜ್‌ಕುಮಾರ್, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯೆ ಚಂಚಲ ಕುಮಾರಸ್ವಾಮಿ, ಮಾಜಿ ಅಧ್ಯಕ್ಷ ಆದರ್ಶ ಮುಖೇಶ್ ಶೆಟ್ಟಿ, ಉಪಾಧ್ಯಕ್ಷೆ ಸರಿತಾ ಬೆಬಿತ ಶೆಟ್ಟಿ, ಸದಸ್ಯರಾದ ಉಮೇಶ್, ಪ್ರಜ್ವಲ್, ತಂಗ ಇಸ್ರಾರ್ ಹಾಗೂ ಪಕ್ಷದ ಮುಖಂಡರಾದ ಜಾತಹಳ್ಳಿ ಪುಟ್ಟಸ್ವಾಮಿಗೌಡ, ಸಚಿನ್ ಪ್ರಸಾದ್, ಕರಗೂರು ರಮೇಶ್, ಸುರೇಶ್ ಆಳ್ವ, ವಳಲಹಳ್ಳಿ ಪ್ರಸಾದ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಹಾರನಹಳ್ಳಿಯಲ್ಲಿ ಪಶು ಆರೋಗ್ಯ ಶಿಬಿರ



• ಪ್ರಜೋದಯ ವರದಿ

**ಹಾಸನ:** ಕಾರೆಕೆರೆ ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ಬಿಎಸ್‌ಸಿ ವಿದ್ಯಾರ್ಥಿಗಳು ಹಾರನಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದ ಅಂಗವಾಗಿ ಉಚಿತ ಪಶು ಆರೋಗ್ಯ ಶಿಬಿರ ನೆರವೇರಿತು.

ಶಿಬಿರದಲ್ಲಿ ಸ್ನಾತಕೋತ್ತರ ಮತ್ತು ಅಂತಿಮ ವರ್ಷದ ಪಶುವೈದ್ಯಕೀಯ ವಿದ್ಯಾರ್ಥಿಗಳು ಪಾಲ್ಗೊಂಡು ಪಶು ಆರೋಗ್ಯ ಸೇವೆ ನೀಡಿದರು. ಕೃಷಿ ಮಹಾವಿದ್ಯಾಲಯ ಡೀನ್ ಡಾ. ಮುನಿಸ್ವಾಮಿ ಗೌಡ, ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರ ಸಂಯೋಜಕ ಡಾ. ಎಂ.ಹೆಚ್. ಶಂಕರ, ಸಹ ಸಂಯೋಜಕ ಡಾ. ಎಸ್.ಎ. ವೇಣು, ಡಾ. ಈ. ಸೌಮ್ಯ, ಡಾ. ನಾಗರಾಜ ಮತ್ತು ಡಾ. ಶಿವಕುಮಾರ ಅವರು ಭಾಗವಹಿಸಿದ್ದರು.

ಶಿಬಿರದಲ್ಲಿ ಪಶುಗಳಿಗೆ ಹುಳು ನಾಶಕ, ಸಾಮಾನ್ಯ ಆರೋಗ್ಯ ತಪಾಸಣೆ, ಮೇಕೆಗಳಲ್ಲಿ ಗಡ್ಡೆ ತೆಗೆದು ಹಾಕುವುದು ಹಾಗೂ ಗರ್ಭಿಣಿ ಹಸುಗಳ ಆರೋಗ್ಯ ಪರಿಶೀಲನೆ ಮಾಡಲಾಯಿತು. ತಪಾಸಣೆಯ ವೇಳೆ ಪಶುಗಳಲ್ಲಿ ಸಾಮಾನ್ಯವಾಗಿ ಕಾಣಿಸಿಕೊಳ್ಳುವ ಜೀರ್ಣಕ್ರಿಯಾ ಸಮಸ್ಯೆ, ಪೌಷ್ಟಿಕಾಂಶ ಕೊರತೆ ಮತ್ತು ಲಸಿಕೆಗಳ ಮಹತ್ವದ ಬಗ್ಗೆ ರೈತರಿಗೆ ಮಾಹಿತಿ ನೀಡಲಾಯಿತು.

ಸ್ವಚ್ಛತೆ, ಸಮಯಕ್ಕೆ ಸರಿಯಾದ ಚಿಕಿತ್ಸೆ ಮತ್ತು ಪಶು ಮನೆ ನಿರ್ವಹಣೆ ಪಶುಗಳ ಆರೋಗ್ಯಕ್ಕೆ ಅತ್ಯಂತ ಅಗತ್ಯವಾಗಿದೆ ಎಂದು ವೈದ್ಯರು ಹೇಳಿದರು.

# ಶಾಂತಿಗ್ರಾಮದಲ್ಲಿ ಇನ್‌ಸ್ಪೈರ್ ಅವಾರ್ಡ್



• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಶಾಂತಿಗ್ರಾಮ ಟೋಲ್ ಪ್ಲಾಜಾದಲ್ಲಿ ಇಂಟರ್‌ಸೈಸ್ ಟ್ರಸ್ಟ್‌ನ ಪೋರ್ಟ್ ಫೊಲಿಯೋ ಕಂಪನಿಯಾದ ದೇವಿಹಳ್ಳಿ ಹಾಸನ್ ಟೋಲ್‌ವೇ ಪ್ರೈವೇಟ್ ಲಿಮಿಟೆಡ್ ನಿಂದ ಇನ್‌ಸ್ಪೈರ್ ಅವಾರ್ಡ್ 2025 ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಮಾತನಾಡಿ, ಸರ್ಕಾರಿ ಶಾಲಾ ಮಕ್ಕಳನ್ನು ಪ್ರೋತ್ಸಾಹಿಸುವಲ್ಲಿ ಮತ್ತು ಶಿಕ್ಷಣ, ಸ್ಥಿರತೆಯ ಅಭಿವೃದ್ಧಿ, ಸಮುದಾಯ ಸೇವೆಗಳತ್ತ ಡಿಎಚ್‌ಟಿಪಿಎಲ್ ನೀಡುತ್ತಿರುವ ಬದ್ಧತೆ ಶ್ಲಾಘನೀಯವೆಂದು ಹೇಳಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳಿಸಿದ ಶಾಂತಿಗ್ರಾಮ ಸುತ್ತಲಿನ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು.

ಎನ್‌ಹೆಚ್‌ಎಐ ಉಪ ಮಹಾಪ್ರಬಂಧಕ ಸಯ್ಯದ್ ಅಮಾನುಲ್ಲಾ, ಶಾಂತಿಗ್ರಾಮ ಪೊಲೀಸ್ ಠಾಣೆ ಉಪನಿರೀಕ್ಷಕ ಅರುಣ್, ಕರ್ನಲ್ ಕೆ. ಎಸ್.ನಟೇಶ್, ಹೆದ್ದಾರಿ ಇಂಜಿನೀಯರ್ ಕೆ.ವಿ. ಸತೀಶ್‌ಕುಮಾರ್, ಸಿ. ಕೆ.ಸುನಿಲ್ ಮತ್ತಿತರರು ಇದ್ದರು.

# ಸರ್ವ ಸದಸ್ಯರ ಸಭೆಯಲ್ಲಿ ಪಾಲ್ಗೊಳ್ಳಲು ಮನವಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ಬಸವ ಭವನದಲ್ಲಿ ಆ.23 ರಂದು ಸರ್ವ ಸದಸ್ಯರ ಸಭೆಯನ್ನು ಆಯೋಜಸಲಾಗಿದ್ದು, ಎಲ್ಲಾ ಶೇರುದಾರರು ಹಾಗೂ ನಿರ್ದೇಶಕರು ಸಭೆಯಲ್ಲಿ ಪಾಲ್ಗೊಳ್ಳುವಂತೆ ಡಾ.ಶಿವಕುಮಾರಸ್ವಾಮಿ ಸಹಕಾರಿ ಸಂಘದ ಅಧ್ಯಕ್ಷ ಎಚ್. ಆರ್.ಸುರೇಶ್ ಕೋರಿದ್ದಾರೆ.




ಪತ್ರಿಕಾಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಅವರು, ಪ್ರತಿ ತಿಂಗಳು ನಮ್ಮ ಭವನದಲ್ಲಿ ಸಹಕಾರಿ ಸಂಘದ ಆಗು ಹೋಗುಗಳ ಕುರಿತು ನಿರ್ದೇಶಕರು ಮತ್ತು ಪದಾಧಿಕಾರಿಗಳೊಂದಿಗೆ ಸಭೆ ನಡೆಸುತ್ತೇವೆ. ಚರ್ಚಿಸಿ ದಾಖಲಾತಿ ಪರಿಶೀಲನೆ ಕೈಗೊಂಡ ನಂತರವೇ ಸಾಲ ನೀಡಲಾಗುತ್ತದೆ. ಇಲಾಖೆಯ ನಿರ್ದೇಶನದಂತೆ ನಿಯಮ ಅನುಸರಿಸಿ ಸಂಘದ ನಡೆ ಅನುಸರಿಸುತ್ತಿದ್ದೇವೆ ಎಂದರು.

ಆ.23 ರಂದು ಸಹಕಾರಿ ಸಂಘದ ಆಡಳಿತ ಮಂಡಳಿ, ನಿರ್ದೇಶಕರು, ಶೇರುದಾರರು ಹಾಗೂ ಅಧಿಕಾರಿಗಳು ಭಾಗವಹಿಸಬೇಕಿದೆ ಎಂದು ಮನವಿ ಮಾಡಿದರು. ತೇಜೂರು ಗ್ರಾಮದ ಸಿದ್ದೇಶ್ವರ ಮಠದ ಶ್ರೀ ಕಲ್ಯಾಣ ಸ್ವಾಮಿ, ಟಿ.ಮಾಯಗೌಡನಹಳ್ಳಿ ರಾಜಪುರಮಠದ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಸಾನಿಧ್ಯ ವಹಿಸಲಿದ್ದಾರೆ. ಲೆಕ್ಕ ಪರಿಶೋಧನಾ ಇಲಾಖೆ ಜಂಟಿ ನಿರ್ದೇಶಕ ಬಸವರಾಜ್, ಪಶುವೈದ್ಯಾಧಿಕಾರಿ ಡಾ. ತಿಪ್ಪೇಸ್ವಾಮಿ ಸೇರಿದಂತೆ ಹಲವರು ಉಪಸ್ಥಿತಿಯಲ್ಲಿ ಸರ್ವ ಸದಸ್ಯರ ಸಭೆ ನಡೆಯಲಿದೆ ಎಂದು ತಿಳಿಸಿದ್ದಾರೆ.

ಉಪಾಧ್ಯಕ್ಷ ಪ್ರಕಾಶ್, ಸಿಇಒ ಚೇತನ್, ನಿರ್ದೇಶಕ ಪ್ರಭುಶಂಕರ್ ಹಾಜರಿದ್ದರು.

# ಹಿಮ್ಸ್ ಆಸ್ಪತ್ರೆ ವಾರ್ಡ್‌ಗೆ ನುಗ್ಗಿದ ಬೀದಿ ನಾಯಿ

• ಪ್ರಜೋದಯ ವರದಿ

**ಹಾಸನ:** ನಗರದ ರಸ್ತೆಗಳಲ್ಲಿ ಮಾತ್ರವಲ್ಲದೇ ಹಿಮ್ಸ್ ಆಸ್ಪತ್ರೆಯಲ್ಲೂ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದೆ. ಬೀದಿ ನಾಯಿಯೊಂದು ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದ ಹಿಮ್ಸ್ ಆಸ್ಪತ್ರೆಯ ವಾರ್ಡ್‌ಗೆ ನುಗ್ಗಿ ಮನಬಂದಂತೆ ಓಡಾಡಿದೆ.



ಆಸ್ಪತ್ರೆಯ ಮೂರನೇ ಅಂತಸ್ತಿನಲ್ಲಿರುವ ವಾರ್ಡ್ ನಂ.340ರಲ್ಲಿ ರೋಗಿಗಳು ಚಿಕಿತ್ಸೆ ಪಡೆಯುತ್ತ ಮಲಗಿದ್ದ ವೇಳೆ ಕೊಠಡಿಯೊಳಗೆ ನುಗ್ಗಿದ ನಾಯಿ, ಕೊಠಡಿಯೊಳಗೆ ಓಡಾಡಿದ್ದರಿಂದ ರೋಗಿಗಳು, ಅವರ ಸಂಬಂಧಿಕರು ಆತಂಕಗೊಂಡಿದ್ದಾರೆ.

ರೋಗಿಗಳ ಕಡೆಯವರು ಆಸ್ಪತ್ರೆಯೊಳಗೆ ಬಂದರೆ ಉಡಾಫೆ ರೀತಿಯಲ್ಲಿ ವರ್ತಿಸುವ ಸೆಕ್ಯೂರಿಟಿ ಗಾರ್ಡ್‌ಗಳು, ಬೀದಿ ನಾಯಿಯೊಂದು 3ನೇ ಅಂತಸ್ತಿನವರೆಗೂ ಹತ್ತಿ, ವಾರ್ಡ್‌ನಲ್ಲೆಲ್ಲಾ ಓಡಾಡಿ ಆಚೆ ಬಂದರೂ ಸೆಕ್ಯೂರಿಟಿ ಗಾರ್ಡ್ ಗಳು ಕಣ್ಮುಚ್ಚಿ ಕುಳಿತಿದ್ದಾರೆಯೇ ಎಂದು ಜನರು ಪ್ರಶ್ನಿಸಿದ್ದಾರೆ. ಹಿಮ್ಸ್ ಅಧಿಕಾರಿಗಳ ನಿರ್ಲಕ್ಷ್ಯದಿಂದ ಆಸ್ಪತ್ರೆ ಆವರಣದಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದೆ. ಆಸ್ಪತ್ರೆ ಸುತ್ತಮುತ್ತ, ಪ್ರತಿ ಗೇಟ್ ಬಳಿ ಸೆಕ್ಯೂರಿಟಿ ಗಾರ್ಡ್‌ಗಳನ್ನು ನೇಮಕ ಮಾಡಿದ್ದರೂ ನಾಯಿ, ರೋಗಿಗಳಿರುವ ವಾರ್ಡ್‌ಗೆ ನುಗ್ಗಿರುವುದು ಸಹಜವಾಗಿಯೇ ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಹಿಮ್ಸ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಆವರಣ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಬಳಿಯೂ ಬೀದಿಗಳ ಓಡಾಟವಿದೆ. ರಾತ್ರಿ ವೇಳೆ ಆಸ್ಪತ್ರೆಯ ಸುತ್ತಮುತ್ತಲಿನ ರಸ್ತೆಯಲ್ಲಿ ಗುಂಪು ಗುಂಪಾಗಿ ಓಡಾಡುವುದರಿಂದ ಜನರು ಭಯಪಡುವ ಸ್ಥಿತಿ ನಿರ್ಮಾಣವಾಗಿದೆ.

ಮಕ್ಕಳು, ವೃದ್ಧರು ಹಲವು ಬಾರಿ ಬೀದಿ ನಾಯಿಗಳ ದಾಳಿಗೆ ಸಿಲುಕಿ ಗಂಭೀರವಾಗಿ ಗಾಯಗೊಂಡಿದ್ದರೂ ಪಾಲಿಕೆ ಅಧಿಕಾರಿಗಳು ಗಂಭೀರ ಕ್ರಮ ಕೈಗೊಳ್ಳದೇ ಇರುವುದರಿಂದ ಜನರು ಸಮಸ್ಯೆಗೆ ಸಿಲುಕುವಂತಾಗಿದೆ.

# ಗಣೇಶ ವಿಗ್ರಹ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ

• ಪ್ರಜೋದಯ ವರದಿ

**ಬೇಲೂರು:** ಮುಂದಿನ ಗೌರಿ-ಗಣೇಶ ಹಬ್ಬದಂದು ಗಣೇಶ ವಿಗ್ರಹವನ್ನು ಪ್ರತಿಷ್ಠಾಪನೆ ಸಂದರ್ಭದಲ್ಲಿ ಕಡ್ಡಾಯವಾಗಿ ಪೊಲೀಸ್ ಇಲಾಖೆಯ ಅನುಮತಿ ಪಡೆಯಬೇಕು. ಪೊಲೀಸ್ ಠಾಣೆಯಿಂದ ಈ ಸಂಬಂಧಿಸಿದ ಹತ್ತಾರು ಸೂಚನೆಗಳನ್ನು ಆಯೋಜಕರಿಗೆ ನೀಡಲಾಗಿದೆ. ಸೂಚನೆಗಳನ್ನು ಉಲ್ಲಂಘಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆಂದು ಪಟ್ಟಣದ ಆರಕ್ಷಕ ನಿರೀಕ್ಷಕ ರೇವಣ್ಣ ಅವರು ಎಚ್ಚರಿಕೆ ನೀಡಿದರು.



ಪಟ್ಟಣದ ಆರ್ವಿ ಕಲ್ಯಾಣ ಮಂಟಪದಲ್ಲಿ ಗೌರಿ-ಗಣೇಶ ಹಬ್ಬದ ಪ್ರಯುಕ್ತ ಪೊಲೀಸ್ ಇಲಾಖೆ ವತಿಯಿಂದ ಕರೆಯಲಾದ ಸಭೆಯಲ್ಲಿ ಮಾತನಾಡಿದ ಅವರು, ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸುಮಾರು 80 ಗಣೇಶ ವಿಗ್ರಹ ಸ್ಥಾಪನೆಯಾಗುವ ಬಗ್ಗೆ ವರದಿ ಬಂದಿದೆ. ಗ್ರಾಮ ಪಂಚಾಯಿತಿ, ಪುರಸಭೆ, ಚೆಸ್ಕಾಂ ಮತ್ತು ಅಗ್ನಿಶಾಮಕ ದಳ ಇಲಾಖೆಯ ಅನುಮತಿ ಪಡೆದ ಬಳಿಕ ಪೊಲೀಸ್ ಇಲಾಖೆಯಿಂದ ಅಧಿಕೃತವಾಗಿ ಸ್ಥಳ ಪರಿಶೀಲನೆ ನಡೆಸಿ ಅನುಮತಿ ನೀಡಲಾಗುತ್ತದೆಂದ ಅವರು ಆಯೋಜಕರು ಕಡ್ಡಾಯವಾಗಿ ಪ್ರತಿಷ್ಠಾನೆ ಸ್ಥಳದಲ್ಲಿ ಸಿಸಿ ಟಿವಿ, ಸ್ವಚ್ಛತೆಗೆ ಒತ್ತು, ಫ್ಲೆಕ್ಸ್ ಕಡಿವಾಣ 25ಕ್ಕೂ ಅಧಿಕ ಷರತ್ತುಗಳನ್ನು ಕಟ್ಟುನಿಟ್ಟಾಗಿ ವಿಧಿಸಲಾಗುತ್ತದೆ. ಆಯೋಜಕರು ಕಡ್ಡಾಯವಾಗಿ ಪಾಲಿಸಬೇಕೆಂದರು.

ವಿಶೇಷವಾಗಿ ಡಿಜೆ ಸೌಂಡ್ ಯಾವ ಕಾರಣಕ್ಕೂ ಅನುಮತಿ ನೀಡುವ ಪ್ರಶ್ನೆ ಇಲ್ಲ, ಈಗಾಗಲೇ ಸರ್ಕಾರದ ಮಟ್ಟದಲ್ಲಿ ಸದ್ಯ ಡಿಜೆ ಸೌಂಡ್ ನಿರ್ಬಂಧ ಬಗ್ಗೆ ಪ್ರಸ್ತಾಪಿಸಿದೆ. ಮುಸ್ಲಿಂ ಭಾಂದವರ ಹಬ್ಬದ ದಿನ ಗಣೇಶ ವಿಸರ್ಜನೆಗೆ ಅವಕಾಶ ನೀಡುದಿಲ್ಲ ಎಂದು ಖಡಕ್ ಸೂಚನೆ ನೀಡಿದರು. ಗಣೇಶ ವಿಗ್ರಹಕ್ಕೆ ಚಿನ್ನಾಭರಣ ಹಾಕಿದರೆ ನೀವೇ ಜವಾಬ್ದಾರಿ ತೆಗೆದುಕೊಳ್ಳಬೇಕಿದೆ. ಗಣಪತಿ ಹೆಸರು ಹೇಳಿಕೊಂಡು ಬಲವಂತವಾಗಿ ಚಂದಾ ವಸೂಲಿ ಮಾಡಬಾರದೆಂದು ಹೇಳಿದರು.

ಆರಕ್ಷಕ ಉಪ ನಿರೀಕ್ಷಕ ಶಿವಾನಂದ ಪಾಟೀಲ್ ಅವರು ಮಾತನಾಡಿ, ಪಟ್ಟಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬರುವ 8 ಕ್ಕೂ ಹೆಚ್ಚಿನ ಗಣಪತಿ ಪ್ರತಿಷ್ಠಾನೆಗೆ ಹಲವಾರು ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಸ್ವಯಂ ಸೇವಕರ ನೇಮಕ, ಅನ್ನ ಪ್ರಸಾದದ ಬಗ್ಗೆ ಆರೋಗ್ಯ ಇಲಾಖೆ ಅನುಮತಿ ಪಡೆಯಬೇಕು. ಇಲ್ಲವಾದರೆ ಆಯೋಜಕರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳಲು ಪೊಲೀಸ್ ಇಲಾಖೆ ಮೀನಾ ಮೇಷ ಎಣಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಎಎಸ್‌ಐ ಶೇಖರಪ್ಪ ಇತರರು ಹಾಜರಿದ್ದರು.

# ಅಭಿವೃದ್ಧಿ ಕುರಿತು ಚರ್ಚಿಸದ ಯೋಜನಾ ಪ್ರಾಧಿಕಾರ: ಆಕ್ಷೇಪ

• ಪ್ರಜೋದಯ ವರದಿ

**ಅರಕಲಗೂಡು:** ಪಟ್ಟಣದ ಸಮಗ್ರ ಅಭಿವೃದ್ಧಿಗೆ ಸ್ಥಳೀಯ ಯೋಜನಾ ಪ್ರಾಧಿಕಾರ ಸಿದ್ದಪಡಿಸಿರುವ ನಕ್ಷೆಯ ಸಾಧಕ ಬಾಧಕಗಳ ಕುರಿತು ಪಪಂ ಆಡಳಿತದೊಂದಿಗೆ ಯಾವುದೇ ಚರ್ಚೆಯನ್ನು ನಡೆಸಿಲ್ಲ ಎಂದು ಪಟ್ಟಣ ಪಂಚಾಯಿತಿ ಅಧ್ಯಕ್ಷ ಪ್ರದೀಪ್ ಕುಮಾರ್ ಆಕ್ಷೇಪ ವ್ಯಕ್ತಪಡಿಸಿದರು.




ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಸ್ಥಳೀಯ ಯೋಜನಾ ಪ್ರಾಧಿಕಾರ ರೂಪಿಸುವ ಯೋಜನೆ ಕುರಿತು ಶಾಸಕರು, ಸಂಸದರು ಮತ್ತು ಪಪಂ ಆಡಳಿತ ಮಂಡಳಿಯನ್ನು ಒಳಗೊಂಡಂತೆ ಸಭೆ ಆಯೋಜನೆ ಮಾಡಿ 2041ರ ಪ್ಲಾನ್ ಕುರಿತು ಸಲಹೆ ಸೂಚನೆಗಳನ್ನು ಪಡೆಯಬೇಕಿತ್ತು. ಅಲ್ಲದೆ ಪಪಂ ಎಲ್ಲಾ ಸದಸ್ಯರ ಒಮ್ಮತದ ಮೇರೆಗೆ ನಾಮ ನಿರ್ದೇ ಶನಗೊಂಡಿರುವ ಸದಸ್ಯ ಅನಿಕೇತನ್ ಅವರನ್ನು ಸಹ ವಿಶ್ವಾಸಕ್ಕೆ ತೆಗೆದು ಕೊಳ್ಳುತ್ತಿಲ್ಲ. ಈ ಕುರಿತು ಪಪಂ ವತಿಯಿಂದ ಶಾಸಕರ ಅಧ್ಯಕ್ಷತೆಯಲ್ಲಿ 2041ರ ಪ್ಲಾನ್ ಕುರಿತ ವಿಷಯಗಳನ್ನು ಜನ ಸಾಮಾನ್ಯರಿಗೆ ಮತ್ತು ಕೃಷಿ ಭೂಮಿ ಹೊಂದಿರುವ ರೈತರನ್ನೊಳಗೊಂಡಂತೆ ಸಭೆಯನ್ನು ಆಯೋಜನೆ ಮಾಡಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ನಮ್ಮ ಕಾಂಗ್ರೆಸ್ ಸರಕಾರ ಅಧಿಕಾರದಲ್ಲಿದೆ. ಈ ಹಿನ್ನೆಲೆ ಕಾಂಗ್ರೆಸ್ ಪಕ್ಷ ನಾಮನಿರ್ದೇಶ ಮಾಡಿರುವ ಅಧ್ಯಕ್ಷರು, ಸದಸ್ಯರನ್ನು ಸ್ಥಳೀಯ ಯೋಜನಾ ಪ್ರಾಧಿಕಾರಕ್ಕೆ ನೇಮಕ ಮಾಡಲಾಗಿದೆ. ಅಲ್ಲದೆ ಅಧಿಕಾರಿ, ಎಂಜಿನಿಯರ್ ಕಾರ್ಯ ನಿರ್ವಹಿಸುತ್ತಿದ್ದಾರೆ. ಪಟ್ಟಣದ ಜನ ತೆಯ ಹಿತ ದೃಷ್ಟಿಯಿಂದ ನ್ಯಾಯಯುತವಾದ ಸಮಜಾಯಿಸಿ ಉತ್ತರ ನೀಡುವ ಗುರುತರವಾದ ಜವಾಬ್ದಾರಿ ಯೋಜನಾ ಪ್ರಾಧಿಕಾರಕ್ಕೆ ಇದೆ ಎಂದು ತಿಳಿಸಿದರು.

**ಪ್ರಾಧಿಕಾರ ದುರುಪಯೋಗ:** ಸ್ಥಳೀಯ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಗುರುಮೂರ್ತಿ ಮತ್ತು ಅಧಿಕಾರಿ ಪುನೀತ್ ಅವರು ಯೋಜನಾ ಪ್ರಾಧಿಕಾರವನ್ನು ಸೀಮಿತಗೊಳಿಸಿಕೊಂಡು ಅಧಿಕಾರವನ್ನು ದುರುಪಯೋಗಪಡಿಸಿಕೊಳ್ಳುತ್ತಿದ್ದಾರೆ. ಈಗ ಸಿದ್ದಗೊಂಡಿರುವ ಪ್ಲಾನ್ ಬಗ್ಗೆಯೂ ಕೂಡ ಯಾವುದೇ ಸದಸ್ಯರುಗಳ ಗಮನಕ್ಕೆ ತರದೇ ಅಂತಿಮಗೊಳಿಸುವ ಹಂತಕ್ಕೆ ಹೋಗಿರುವುದು ಕಂಡು ಬಂದಿದೆ ಎಂದು ಯೋಜನಾ ಪ್ರಾಧಿಕಾರದ ನಾಮನಿರ್ದೇಶನ ಸದಸ್ಯರೂ ಆದ ಪ.ಪಂ. ಸದಸ್ಯ ಅನಿಕೇತನ್ ಆರೋಪಿಸಿದರು.

ಶಾಸಕರು, ಪಪಂ ಆಡಳಿತವನ್ನು ಕಡೆಗಣಿಸಿ ಪ್ರಾಧಿಕಾರಕ್ಕೆ ಸಂಬಂಧವಿಲ್ಲದ ಕಾಂಗ್ರೆಸ್ ಪರಾಜಿತ ಅಭ್ಯರ್ಥಿ ಶ್ರೀಧರ್‌ಗೌಡರ ಅಣತಿಯಂತೆ ಪ್ರಾಧಿಕಾರದ ಆಡಳಿತ ಮಂಡಳಿ ಕೆಲಸ ನಿರ್ವಹಿಸುತ್ತಿದೆ ಎಂದು ದೂರಿದರು.


ಮೂಲ ಸೌಕರ್ಯ ಕಲ್ಪಿಸಿಲ್ಲದ ಹೊಸ ಬಡಾವಣೆಗಳಿಗೆ ಸ್ಥಳೀಯ ಯೋಜನಾ ಪ್ರಾಧಿಕಾರ ಅನುಮತಿ ನೀಡುತ್ತಿದ್ದು, ಇಲ್ಲಿನ ಮೂಲ ಸೌಕರ್ಯಗಳ ಕೊರತೆ ಎದ್ದು ಕಾಣುತ್ತಿದೆ ಎಂದು ಅವರು ಆರೋಪಿಸಿದರು.

ಮಾಜಿ ಪಪಂ ಅಧ್ಯಕ್ಷ ಅಬ್ದುಲ್ ಬಾಸಿತ್ ಇದ್ದರು.

# ಯೋಗಿಹಳ್ಳಿ ಗ್ರಾಮಕ್ಕೆ ಮೂಲಸೌಕರ್ಯದ ಭರವಸೆ

• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಯೋಗಿಹಳ್ಳಿ ಗ್ರಾಮಕ್ಕೆ ಅಗತ್ಯ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾ ಗುವುದೆಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಗಿರೀಶ್ ಅವರು ಭರವಸೆ ನೀಡಿದರು.



ರೈತ ಸಂಘದ ತಾಲ್ಲೂಕು ಅಧ್ಯಕ್ಷ ದೇವರಾಜ್ ಅವರ ನೇತೃತ್ವದಲ್ಲಿ ಮಂಗಳವಾರ ಭೇಟಿಯಾಗಿ ಸಮಸ್ಯೆಗಳ ಕುರಿತು ಬೆಳಕು ಚೆಲ್ಲಲಾಯಿತು. ಈ ವೇಳೆ ಮಾತನಾಡಿದ ಗಿರೀಶ್ ಅವರು, ಕುಡಿಯುವ ನೀರು, ರಸ್ತೆ ಹಾಗೂ ವಿದ್ಯುತ್ ಸಮಸ್ಯೆಗೆ ಶೀಘ್ರ ಪರಿಹಾರ ಕ್ರಮ ಕೈಗೊಳ್ಳಲಾಗುವುದೆಂದರು.

ರೈತ ಸಂಘದ ತಾಲ್ಲೂಕು ಅಧ್ಯಕ್ಷ ದೇವರಾಜ್ ಅವರು ಮಾತನಾಡಿ, ಗ್ರಾಮಕ್ಕೆ ಸಂಪರ್ಕಿಸುವ ರಸ್ತೆ ಸಂಪೂರ್ಣ ಹದಗೆಟ್ಟಿರುವುದರಿಂದ ಶಾಲಾ ಮಕ್ಕಳು, ವೃದ್ಧರು ತೊಂದರೆ ಅನುಭವಿಸುತ್ತಿದ್ದಾರೆ. ನಿರಂತರ ಮಳೆ ಸುರಿಯುತ್ತಿರುವ ಹಿನ್ನಲೆಯಲ್ಲಿ ಕೆಸರುಗುಂಡಿಯಲ್ಲೇ ವಾಹನಗಳು ಓಡಾಡುತ್ತಿದ್ದು ಬೈಕ್ ಸವಾರರು ಬೀಳುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಬೀದಿ ದೀಪ ಗಳಲ್ಲಿ ಹಾಗು ಕುಡಿಯುವ ನೀರಿನ ವ್ಯವಸ್ಥೆಯೂ ಇಲ್ಲವೆಂದು ಸಮಸ್ಯೆ ಹೇಳಿಕೊಂಡರು.


ರೈತ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ್, ಜಿಲ್ಲಾ ಗೌರವಾಧ್ಯಕ್ಷ ವರದೇಗೌಡ, ಜಿಲ್ಲಾ ಉಪಾಧ್ಯಕ್ಷ ವಾಜಿದ್, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಶ್ರೀನಿವಾಸ್, ಪಾಪಮ್ಮ ಮತ್ತಿತರರು ಹಾಜರಿದ್ದರು.

# ಮನೆ ಬಾಗಿಲಿಗೆ ಪತ್ರಿಕೆ ತಲುಪಿಸುವ ವಿತರಕರ ಪಾತ್ರ ಮಹತ್ವದ್ದು

• ಪ್ರಜೋದಯ ವರದಿ

**ಬೇಲೂರು:** ಪತ್ರಿಕೆ ಹಂಚುವ ವಿತರಕರ ಸಂಕಷ್ಟಕ್ಕೆ ನೆರವಾಗುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದು ಜಿಲ್ಲಾ ಕೆಡಿಪಿ ಸದಸ್ಯೆ ಸೌಮ್ಯಾ ಆನಂದ್ ಹೇಳಿದರು.

ಪಟ್ಟಣದ ಸುಮುಖ ಕಲ್ಯಾಣ ಮಂಟಪದಲ್ಲಿ ಪತ್ರಿಕೆ ಹಂಚುವ ಯುವಕರಿಗೆ ಮಳೆಗಾಲದ ರೈನ್ ಕೋಟ್ ವಿತರಿಸಿ ಮಾತನಾಡಿದ ಅವರು, ನಮ್ಮ ಅಣ್ಣ ಬಿ ಎಂ ಸಂತೋಷ್ ಅವರ ಹುಟ್ಟುಹಬ್ಬದ ಅಂಗವಾಗಿ ಹಲವಾರು ಸಮಾಜಮುಖಿ ಕಾರ್ಯಕ್ರಮಗಳನ್ನು ಅವರ ಅಭಿಮಾನ ಬಳಗ ಹಮ್ಮಿಕೊಂಡಿದ್ದು ವಿಶೇಷವಾಗಿ ಪ್ರತಿನಿತ್ಯ ಪತ್ರಿಕೆ ಹಂಚುಚ ಮೂಲಕ ರಾಜ್ಯದ ವಿವಿಧ ಸುದ್ದಿಗಳನ್ನು ಮನೆ ಮನೆಗೆ ತಲುಪಿಸುವ ಪತ್ರಿಕೆ ವಿತರಕರ ಸೇವೆಯು ಸಮಾಜದಲ್ಲಿ ಅಪಾರವಾದ ಮಹತ್ವವನ್ನು ಹೊಂದಿದೆ.



ಮಳೆಗಾಲ, ಬೇಸಿಗೆ ಅಥವಾ ಚಳಿಗಾಲ ಯಾವ ಋತುವಾಗಿದ್ದರೂ ಬೆಳಿಗ್ಗೆ ನಮ್ಮ ಮನೆ ಬಾಗಿಲಿಗೆ ಪತ್ರಿಕೆ ತಲುಪಿಸುವುದು ಇವರ ನಿರಂತರ ಸೇವಾಭಾವ. ಇವರು ಪತ್ರಿಕೆ ವಿತರಿಸುವ ಹರಿಕಾರರು, ಸಮಾಜಕ್ಕೆ ಜಾಗೃತಿಯ ದಾರಿ ತೋರಿಸುವವರು. ಇವರ ಸೇವೆಯನ್ನು ನಾವು ಎಲ್ಲರೂ ಸ್ಮರಿಸಿ ಗೌರವಿಸಬೇಕು ಎಂದರು.

ಅವರು, ಯಾರೂ ಗಮನಿಸದಂತಹ ಕಷ್ಟಕರ ಕೆಲಸವನ್ನು ಈ ಯುವಕರು ನಗುತ್ತಾ ಮಾಡುತ್ತಾರೆ. ಬೆಳ್ಳಂಬೆಳಗ್ಗೆ ಎದ್ದು ಬೈಕಿನಲ್ಲಿ, ಸೈಕಲ್‌ನಲ್ಲಿ, ಕೆಲವರು ಕಾಲ್ನಡಿಗೆಯಲ್ಲಿಯೂ ಪತ್ರಿಕೆ ಹಂಚುತ್ತಾರೆ. ಇಂತಹ ಪರಿಶ್ರಮಕ್ಕೆ ಸಮಾಜವು ಬೆಂಬಲ ನೀಡುವುದು ಅಗತ್ಯ ಎಂದು ತಿಳಿಸಿದರು.

ನಂತರ ಮಾತನಾಡಿದ ಸಮಾಜ ಸೇವಕ ಹಾಗು ಕಾಂಗ್ರೆಸ್ ಮುಖಂಡ ಬಿಎಂ ಸಂತೋಷ್, ನಮ್ಮ ತಂದೆ-ತಾಯಿಯವರು ಮಾಡಿದ ಸಮಾಜ ಸೇವೆಗಳನ್ನು ನಾವು ಮುಂದುವರೆಸಿಕೊಂಡು ಹೋಗುತ್ತಿದ್ದು ನಮ್ಮ ಸ್ನೇಹಿತರ ಬಳಗ ಹಾಗೂ ನನ್ನ ಸಹೋದರ ಸುನೀಲ್ ಅವರ ನೇತೃತ್ವದಲ್ಲಿ ಹಲವಾರು ಸರ್ಕಾರಿ ಶಾಲೆಗಳ 500 ವಿದ್ಯಾರ್ಥಿಗಳಿಗೆ ಟ್ರ್ಯಾಕ್ಸ್ ಸೂಟ್‌ಗಳನ್ನು ವಿತರಿಸುತ್ತಿದ್ದು ಇದರ ಜೊತೆಯಲ್ಲಿ ಪತ್ರಿಕೆ ಹಂಚುವ ಯುವಕರಿಗೂ ಅವರ ವಿದ್ಯಾ ಭ್ಯಾಸ ಜೊತೆಯಲ್ಲಿ ಪತ್ರಿಕೆ ಹಂಚುವ ಕೆಲಸ ಮಾಡುತ್ತಿದ್ದು ಅದರ ಹಿಂದೆ ಇರುವ ಕಷ್ಟ ಶ್ರಮ ತ್ಯಾಗವನ್ನು ನಾವು ಅಪರೂಪಕ್ಕೆ ಮಾತ್ರ ಯೋಚಿಸುತ್ತೇವೆ. ಈ ರೈನ್ ಕೋಟ್ ವಿತರಿಸುವ ಕಾರ್ಯಕ್ರಮ ಅವರ ಪರಿಶ್ರಮವನ್ನು ಗುರುತಿಸಿದ ಪ್ರಯತ್ನ ಎಂದ ಅವರು ಅವರ ಮುಂದಿನ ವಿದ್ಯಾಭ್ಯಾಸ ಉಜ್ವಲವಾಗಿರಲಿ ಎಂದರು.

ವಿತರಕರ ಒಕ್ಕೂಟದ ತಾಲೂಕು ಅಧ್ಯಕ್ಷ ಆರಾಧ್ಯ, ಕಾರ್ಯದರ್ಶಿ ಬಿ. ಎನ್.ಗಣೇಶ್ ಮಾತನಾಡಿ, ಬೆಳಗಿನ ಜಾವ ಪತ್ರಿಕೆ ಹಂಚುವ ಯುವಕರನ್ನು ಗುರ್ತಿಸಿ ಅವರಿಗೆ ಇಂತಹ ಒಂದು ಸಹಾಯ ಮಾಡಿದ ಅವರಿಗೆ ಒಕ್ಕೂಟದ ವತಿಯಿಂದ ಧನ್ಯವಾದಗಳು. ಅದೇ ರೀತಿಯಾಗಿ ನಮ್ಮ ಹಲವಾರು ವಿದ್ಯಾರ್ಥಿಗಳು ಉತ್ತಮ ವಿದ್ಯಾಭ್ಯಾಸ ಮಾಡುತ್ತಿದ್ದು ಅವರಿಗೆ ನಿಮ್ಮೆಲ್ಲರ ಸಹಕಾರ ಅತಿಮುಖ್ಯ ಎಂದರು.

ಕಸಾಪ ಮಾಜಿ ಅಧ್ಯಕ್ಷ ಬಿ ಎಂ ಆನಂದ್, ಮಧು, ನರಸಿಂಹಸ್ವಾಮಿ, ಪತ್ರಕರ್ತ ಕೇಬಲ್ ವಿಜಯ್ ಕುಮಾರ, ರವಿಹೊಳ್ಳ ಸೇರಿದಂತೆ ಇತರರು ಹಾಜರಿದ್ದರು.

## ಬಿಡುವಿಲ್ಲದ ತುಂತುರು ಮಳೆಯಿಂದಾಗಿ ಕ್ರಿಮಿನಾಶಕ ಸಿಂಪಡಿಸಿದರೂ ಹತೋಟಿಗೆ ಬಾರದ ರೋಗ

# ಶುಂಠಿ ಬೆಳೆಗೆ ಎಲೆಚುಕ್ಕಿ ರೋಗ: ರೈತರಿಗೆ ಆಘಾತ

• ಪ್ರಜೋದಯ ವರದಿ

**ಆಲೂರು:** ಎರಡು ತಿಂಗಳಿನಿಂದ ಬಿಡುವಿಲ್ಲದೆ ಮಳೆಯಾಗುತ್ತಿರುವುದರಿಂದ ಶುಂಠಿ ಬೆಳೆಗೆ ಎಲೆಚುಕ್ಕಿ ರೋಗ ತಗುಲಿ ಎಷ್ಟೇ ಕ್ರಿಮಿನಾಶಕ ಸಿಂಪಡಿಸಿದರೂ ರೋಗ ನಿವಾರಣೆಯಾಗದೆ ರೈತರು ಆಘಾತಕ್ಕೊಳಗಾಗಿದ್ದಾರೆ.



ಹಲವು ದಿನಗಳಿಂದ ತುಂತುರು ಮಳೆಯಲ್ಲದೆ ಶೀತ ವಾತಾವರಣ ಇರುವುದರಿಂದ ಶುಂಟಿ ಬೆಳಗೆ ಎಲೆಚುಕ್ಕಿ ಮತ್ತು ಕೊಳೆರೋಗ ಎಡತಾಕಿದೆ. ಏನು ಮಾಡಿದರೂ ಪ್ರಯೋಜನವಾಗುವುದಿಲ್ಲ. ನೀರು ನಿಲ್ಲದ ಭೂಮಿಯಲ್ಲಿ ಬಿಸಿಲು ವಾತಾವರಣ ಬಂದರೆ ಅಲ್ಪಸ್ವಲ್ಪ ಉಳಿಯಬಹುದು.
**ಕೇಶವಪ್ರಸಾದ್**, ಹಿರಿಯ ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ.

ಬಹು ವರ್ಷಗಳಿಂದ ಆಲೂಗಡ್ಡೆ ಬೆಳೆಯಲಾಗುತ್ತಿತ್ತು. ಆಲೂಗಡ್ಡೆ ಬೆಳೆಗೆ ಅಂಗಮಾರಿ ರೋಗ ತೀವ್ರವಾದ ಹಿನ್ನೆಲೆಯಲ್ಲಿ ಆಲೂಗಡ್ಡೆ ಬೆಳೆಯಲು ಇತಿಶ್ರೀ ಹೇಳಲಾಯಿತು. ಇತ್ತೀಚೆಗೆ ಸುಮಾರು ಎರಡು ದಶಕಗಳ ಹಿಂದೆ ಕೇರಳ ರಾಜ್ಯದ ಕೆಲ ಬಂಡವಾಳ ಶಾಯಿಗಳು ಜಿಲ್ಲೆಗೆ ಬಂದು ರೈತರಿಂದ ಭೂಮಿಯನ್ನು ಬಾಡಿಗೆಗೆ ಪಡೆದು ಶುಂಠಿ ಬೆಳೆಯಲಾರಂಭಿಸಿದರು. ಅತ್ಯುತ್ತಮ ಬೆಳೆ ಹಾಗೂ ಲಾಭ ಕಂಡುಬಂದಿದ್ದರಿಂದ, ಸ್ಥಳೀಯ ರೈತರು ಶುಂಠಿ ಬೆಳೆಯಲು ಮುಂದಾದರು. ಕೆಲ ವರ್ಷಗಳ ಹಿಂದೆ ರೈತರು ಶುಂಠಿ ಬೆಳೆಯಲ್ಲಿ ಲಕ್ಷಾಂತರ ರೂ. ಸಂಪಾದಿಸಿ ಆರ್ಥಿಕವಾಗಿ ಸಬಲರಾದರು.

ವರ್ಷದಿಂದ ವರ್ಷಕ್ಕೆ ಶುಂಠಿ ಬೆಳೆಯುವ ರೈತರು ಅಧಿಕವಾದರು. ಇತ್ತೀಚೆಗೆ ಶುಂಠಿ ಬೀಜವನ್ನು ನಾಟಿ ಮಾಡುವ ಪ್ರಾರಂಭದಿಂದಲೇ ಕ್ರಿಮಿನಾಶಕವನ್ನು ಬಳಸಬೇಕಾಗಿದೆ. ಬೆಳೆ ಹುಟ್ಟಿ ಸುಮಾರು ಏಳೆಂಟು ತಿಂಗಳು ಆಗುವವರೆಗೂ ಕ್ರಿಮಿನಾಶಕ ಸಿಂಪಡಿಸಿ ಕಾಪಾಡಬೇಕು. ಶುಂಠಿ ಬೆಳೆ ತಂಪು ವಾತಾವರಣದಲ್ಲಿ ಬೆಳೆಯುತ್ತದೆಯಾದರೂ, ಆಗಾಗ ಬಿಸಿಲು ವಾತಾವರಣ ಇದ್ದರೆ ಚೆನ್ನಾಗಿ ಬೆಳೆಯುತ್ತದೆ. ಆದರೆ ಸುಮಾರು ಎರಡು ತಿಂಗಳಿನಿಂದ ಬಿಡುವಿಲ್ಲದೆ ತುಂತುರು ಮಳೆಯಾಗುತ್ತಿರುವುದರಿಂದ ರೋಗ ಎಡಬಿಡದೆ ಬೆಳೆಯನ್ನು ಸಂಪೂರ್ಣ ಆವರಿಸಿಕೊಂಡು ಗಿಡಗಳು ಹಳದಿ ಬಣ್ಣಕ್ಕೆ ತಿರುಗಿ ಶುಂಠಿ ಕೊಳೆಯುತ್ತಿದೆ.

ಪ್ರತಿ ವರ್ಷ ಅದೃಷ್ಟ ಪರೀಕ್ಷೆಗೊಳಗಾಗುವ ರೈತರು ಈ ವರ್ಷ ಉತ್ತಮ ಬೆಳೆ ಮತ್ತು ಬೆಲೆ ಸಿಗುತ್ತದೆ ಎಂಬ ಆಶಾಭಾವನೆಯಿಂದ ಬೆಳೆಯುತ್ತಾರೆ. ಆದರೆ ಉತ್ತಮ ಬೆಳೆ ಇದ್ದಾಗ ಬೆಲೆ ಕುಸಿಯುತ್ತದೆ. ಬೆಳೆ ಇಲ್ಲದ ವರ್ಷದಲ್ಲಿ ಬೆಲೆ ಉತ್ತಮವಾಗಿರುತ್ತದೆ. ಹೀಗೆ ಡೋಲಾಯಮಾನದಿಂದ ರೈತರು ತೀವ್ರ ಸಂಕಷ್ಟಕ್ಕೊಳಗಾಗಿದ್ದಾರೆ. ಕೆಲ ವರ್ಷಗಳಿಂದ ಶುಂಠಿ, ಮುಸುಕಿನ ಜೋಳ, ಭತ್ತ ಸೇರಿದಂತೆ ಯಾವುದೇ ಬೀಜವನ್ನು ಕೃಷಿ ಇಲಾಖೆ, ಖಾಸಗಿ ಅಂಗಡಿಗಳಿಂದ ಕೊಂಡು ಬಿತ್ತನೆ, ನಾಟಿ ಮಾಡುತ್ತಿದ್ದಾರೆ. ಪ್ರಾರಂಭದಲ್ಲಿ ಕ್ರಿಮಿನಾಶಕ ಸಿಂಪರಣೆ ಮಾಡುತ್ತಿರುವುದನ್ನು ಗಮನಿಸಿದರೆ, ಸರ್ಕಾರ ಮತ್ತು ಕ್ರಿಮಿನಾಕ, ಗೊಬ್ಬರ ಕಂಪನಿಗಳು ಒಬ್ಬರಿಗೊಬ್ಬರು ಪರಸ್ಪರ ಆರ್ಥಿಕ ಸಬಲತೆಗಾಗಿ, ಬಿತ್ತನೆ ಬೀಜಕ್ಕೆ ರೋಗ ಬರುವ ರಸಾಯನಿಕ ಬಳಸುತ್ತಿದ್ದಾರೆ ಎಂಬ ಅನುಮಾನ ರೈತರಲ್ಲಿ ಮೂಡುತ್ತಿದೆ.

ಒಂದೆಡೆ ಭೂಮಿಗೆ ಹಾಕುವ ರಸಾಯನಿಕ ಗೊಬ್ಬರ, ಕ್ರಿಮಿನಾಶಕದಿಂದ ಮಣ್ಣಿನಲ್ಲಿರಬೇಕಾದ ಪೋಷಕಾಂಶಗಳು ನಾಶವಾಗಿ ಭೂಮಿ ಬಂಜರಾಗಿದೆ. ಇದಕ್ಕೆ ಅತಿ ರಸಾಯನಿಕ ಬಳಸುತ್ತಿರುವುದರಿಂದ ಯಾವುದೆ ಬೆಳೆ ಬೆಳೆದರೂ ರೋಗಕ್ಕೆ ಬಲಿಯಾಗುತ್ತಿವೆ ಎಂದು ರೈತರು ಹತಾಶರಾಗಿದ್ದಾರೆ. ಒಟ್ಟಾರೆ ಭೂಮಿಗೆ ಹಾಕುವ ಬೀಜ ವಿಷಕಂಟಕವಾಗಿದೆ. ಕ್ರಿಮಿನಾಶಕ, ಗೊಬ್ಬರ ಹಾಕುತ್ತಿರುವುದರಿಂದ ವಾಣಿಜ್ಯ ಬೆಳೆಗಳು ಸಂಪೂರ್ಣ ನೆಲಕಚ್ಚುವ ಪರಿಸ್ಥಿತಿ ನಿರ್ಮಾಣವಾಗಿದೆ. ಎಂತಹ ಹೊಸ ಭೂಮಿಗೆ ಶುಂಠಿ ನಾಟಿ ಮಾಡಿದರೂ ಜೋಳ ಬಿತ್ತನೆ ಮಾಡಿದರೂ ರೋಗ ತಪ್ಪುತ್ತಿಲ್ಲ.
ಎಂ. ಎಸ್. ನವೀನ್, ಮರಸು.

ಎಡಬಿಡದೆ ಮಳೆಯಾಗುತ್ತಾ ಶೀತ ವಾತಾವರಣ ವಿಪರೀತವಾಗಿರುವುದರಿಂದ ಎಲ್ಲ ಬೆಳೆಗಳು ಮುದುಡಿ ಹೋಗಿವೆ. ಬಿಸಿಲು ವಾತಾವರಣ ಕೂಡಲೆ ಬಂದರೆ ಅಲ್ಪಸ್ವಲ್ಪ ಬೆಳೆ ಸಿಗಬಹುದು.
**ರಮೇಶಕುಮಾರ್**, ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ.

# ಬೆಳವಡಿ ಮಲ್ಲಮ್ಮ ಹೋರಾಟ ಎಲ್ಲರಿಗೂ ಸ್ಫೂರ್ತಿ



• ಪ್ರಜೋದಯ ವರದಿ

**ಹಾಸನ:** ವೀರವನಿತೆ ಬೆಳವಡಿ ಮಲ್ಲಮ್ಮ ಅವರ ಹೋರಾಟದ ಕಿಚ್ಚು, ಸ್ವಾಭಿಮಾನ ಪ್ರತಿಯೊಬ್ಬ ಮಹಿಳೆಗೆ ಆದರ್ಶವಾಗಬೇಕೆಂದು ಜಿಲ್ಲಾ ವೀರಶೈವ-ಲಿಂಗಾಯತ ಸಮಾಜದ ತಾಲ್ಲೂಕು ಮಹಿಳಾ ಘಟಕದ ಅಧ್ಯಕ್ಷೆ ಮಮತಾ ಪಾಟೀಲ್ ಅವರು ಹೇಳಿದರು.

ನಗರದ ತಣ್ಣೀರುಹಳ್ಳ ಮಠದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಹಾಗು ಮಹಿಳಾ ಘಟಕದಿಂದ ಹಮ್ಮಿಕೊಂಡಿದ್ದ ಶರಣೆ ಬೆಳವಡಿ ಮಲ್ಲಮ್ಮ ಅವರ ಜಯಂತಿಯಲ್ಲಿ ಮಾತನಾಡಿ, ಬೆಳವಡಿ ಮಲ್ಲಮ್ಮ ಅವರ ಜೀವನ ಚರಿತ್ರೆಯನ್ನು ಎಲ್ಲರೂ ಅರ್ಥೈಸಿಕೊಳ್ಳಬೇಕು. ಸ್ವಸ್ಥ ಸಮಾಜ ನಿರ್ಮಾಣಕ್ಕೆ ಅವರು ನೀಡಿದ ಕೊಡುಗೆ ಅಪಾರವೆಂದು ಹೇಳಿದರು.

ಪ್ರಧಾನ ಕಾರ್ಯದರ್ಶಿ ಧನಲಕ್ಷ್ಮಿ, ಹಳೆಕೋಟೆ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರಾದ ಜಯಶೀಲಮ್ಮ, ಜಿಲ್ಲಾ ಘಟಕದ ನಿರ್ದೇಶಕ ನಂದೀಶ್, ಲೋಕೇಶ್ ಮಾತನಾಡಿದರು. ಭಾರತ ಸೇವಾದಳ ವಲಯ ಸಂಘಟಕಿ ವಿ.ಎಸ್.ರಾಣಿ, ಸುಧಾ ಮತ್ತಿತರರು ಭಾಗವಹಿಸಿದ್ದರು.

# ಧರ್ಮಸ್ಥಳ ಕ್ಷೇತ್ರದ ವಿರುದ್ಧ ಆಧಾರ ರಹಿತ ಆರೋಪ

## ತಲೆಬುರುಡೆ ಪ್ರಹಸನ ಬಗ್ಗೆ ಧರ್ಮಾಧಿಕಾರಿ ಹೆಗ್ಗಡೆ ಮಾತು | ಸುಳ್ಳು ಸುದ್ದಿಯಿಂದ ನೋವಾಗಿದೆ

• ಪ್ರಜೋದಯ ವರದಿ

**ಬೆಂಗಳೂರು:** ಧರ್ಮಸ್ಥಳದಲ್ಲಿ ಎರಡು ದಶಕಗಳಲ್ಲಿ ಸರಣಿ ಕೊಲೆ, ವಿದ್ಯಾರ್ಥಿನಿ ಸೌಜನ್ಯ ಮೇಲೆ ಸಾಮೂಹಿಕ ಅತ್ಯಾಚಾರ ಹಾಗು ತಲೆಬುರುಡೆ ಕುರಿತ ಆರೋಪಗಳನ್ನು ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರು ತಳ್ಳಿ ಹಾಕಿದ್ದಾರೆ.

ಖಾಸಗಿ ಸುದ್ದಿ ಸಂಸ್ಥೆಯೊಂದಕ್ಕೆ ಸಂದರ್ಶನ ನೀಡಿರುವ ಅವರು, ಈ ಆರೋಪಗಳು ಆಧಾರ ರಹಿತವಾದವು. ಅದರಿಂದ ನನಗೆ ನೋವಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ವಿಷಯಗಳನ್ನು ಬಿಂಬಿಸುವ ರೀತಿ ನೈತಿಕವಾಗಿ ತಪ್ಪೆಂದರು.

ಎಸ್‌ಐಟಿ ತನಿಖೆ ಆಳಕ್ಕೆ ಹೋಗುತ್ತದೆಂಬ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿ, ನಾವು ಅದೇ ದಿನ ಎಸ್‌ಐಟಿಯನ್ನು ಸ್ವಾಗತಿಸಿದ್ದೇವೆ. ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿರುವುದು ಒಳ್ಳೆಯದು ಮತ್ತು ಸತ್ಯ ಒಮ್ಮೆ ಹೊರಬರಬೇಕು. ಆರೋಪ ಕೇಳಿ ಬಂದಾಗ ತನಿಖೆ ಮಾಡುವುದು ಒಳ್ಳೆಯದು. ಇಲ್ಲದಿದ್ದರೆ ಅವು ಹಾಗೆಯೇ ಉಳಿಯುತ್ತವೆ ಎಂದಿದ್ದಾರೆ.

ಈ ತನಿಖೆ ಬೇಗನೆ ಮುಕ್ತಾಯಗೊಳ್ಳಬೇಕು ಮತ್ತು ಸಮಸ್ಯೆಯನ್ನು ಪರಿಹರಿಸಬೇಕೆಂದು ಬಯಸುತ್ತೇವೆ. ನಾವು ಎಲ್ಲದಕ್ಕೂ ಮುಕ್ತರಾಗಿದ್ದೇವೆ. ಎಸ್‌ಐಟಿ ಸಂಪೂರ್ಣವಾಗಿ ತನಿಖೆ ನಡೆಸಿ ತಪ್ಪಿತಸ್ಥರನ್ನು ಶಿಕ್ಷಿಸಬೇಕೆಂದು ಒತ್ತಾಯಿಸಿದರು.





ಧರ್ಮಸ್ಥಳ ಮತ್ತು ಅದರ ಟ್ರಸ್ಟ್ ಗುರಿಯಾಗಿಸಿಕೊಂಡು 14 ವರ್ಷಗಳಿಂದ ಸಂಘಟಿತ ಅಭಿಯಾನ ನಡೆಸಲಾಗುತ್ತಿದೆ. ನಾವು ಮಾಡುತ್ತಿರುವ ಒಳ್ಳೆಯ ಕೆಲಸ ಸಹಿಸಿಕೊಳ್ಳಲಾಗದ ಕೆಲವು ಶಕ್ತಿಗಳು ಸುಳ್ಳು ಪ್ರಚಾರ ನಡೆಸುತ್ತಿವೆ. ಆದರೆ ನಾವು ವಿಚಲಿತರಾಗುವುದಿಲ್ಲವೆಂದರು.

ಧರ್ಮಸ್ಥಳದಲ್ಲಿ ಶವಗಳನ್ನು ಸಮಾಧಿ ಮಾಡಿರುವುದಾಗಿ ಮುಖವಾಡ ಧರಿಸಿದ ವ್ಯಕ್ತಿಯೊಬ್ಬ ಹೇಳಿಕೊಳ್ಳುವ ಇತ್ತೀಚಿನ ವಿಡಿಯೋಗಳನ್ನು ಉಲ್ಲೇಖಿಸಿದ ಅವರು, ಇದು ಅಸಾಧ್ಯ. ಧರ್ಮಸ್ಥಳದಲ್ಲಿ ಯಾರಾದರೂ ಸತ್ತರೆ ಅವರಿಗೆ ಮೋಕ್ಷ ಸಿಗುತ್ತದೆಂಬ ಜನಪ್ರಿಯ ನಂಬಿಕೆ ಇದೆ. ಸಾವು ಸಂಭವಿಸಿದಾಗಲೆಲ್ಲಾ ನಾವು ಗ್ರಾಮ ಪಂಚಾಯಿತಿಗೆ ತಿಳಿಸುತ್ತಿದ್ದೆವು. ಅವರು ಕಾನೂನು ಪ್ರಕಾರವೇ ಶವವನ್ನು ಹೂಳುತ್ತಾರೆಂದರು.

ಸೌಜನ್ಯ ಕೊಲೆ ಪ್ರಕರಣ ಸಂಬಂಧ ಪ್ರತಿಕ್ರಿಯಿಸಿ, ಆ ಘಟನೆ ನಡೆದಿದೆ ಎಂದು ನಮಗೆ ತಿಳಿದಾಗ ಆ ದಿನವೇ ಸರ್ಕಾರಕ್ಕೆ ಮಾಹಿತಿ ನೀಡಿದ್ದೇವೆ. ಆದರೆ ನಮ್ಮ ಕುಟುಂಬದ ವಿರುದ್ಧದ ಆರೋಪಗಳು ಆಧಾರ ರಹಿತ. ಕುಟುಂಬ ಸದಸ್ಯರು ಶಿಕ್ಷಣಕ್ಕಾಗಿ ವಿದೇಶದಲ್ಲಿದ್ದರು. ಅವರನ್ನೇ ಗುರಿಯಾಗಿಸಿ ಆರೋಪ ಮಾಡಿರುವುದು ಬೇಸರ ತರಿಸಿದೆ. ಸಿಬಿಐ ತನಿಖೆಗೂ ನಾವು ಎಲ್ಲಾ ರೀತಿಯ ಸಹಕಾರ ನೀಡಿದ್ದೇವೆಂದರು.

ಆಸ್ತಿ ದುರುಪಯೋಗದ ಆರೋಪಗಳನ್ನು ತಳ್ಳಿ ಹಾಕಿದ ಹೆಗ್ಗಡೆ ಅವರು, ನಮ್ಮ ಆಸ್ತಿ ಎಂಬುದೇ ಇಲ್ಲ. ಕುಟುಂಬವು ಬಹಳ ಕಡಿಮೆ ಆಸ್ತಿ ಹೊಂದಿದೆ. ಎಲ್ಲಾ ಆಸ್ತಿಗಳು ದಾಖಲೆಗಳೊಂದಿಗೆ ಟ್ರಸ್ಟ್‌ನ ಒಡೆತನದಲ್ಲಿವೆಯೆಂದರು.

ಆಸ್ತಿಗಳ ಸ್ವಾಧೀನಕ್ಕೆ ದಾಖಲೆ ಪುರಾವೆಗಳಿವೆ. ಧರ್ಮಾಧಿಕಾರಿ (ದೇವಾಲಯದ ಪಾಲಕ) ಪ್ರಕಾರ ಟ್ರಸ್ಟ್ ಅನ್ನು ಕುಟುಂಬ ಸದಸ್ಯರು ಪಾರದರ್ಶಕ ರೀತಿಯಲ್ಲಿ ನಿರ್ವಹಿಸುತ್ತಿದ್ದಾರೆ. ನಾವು ನಾಲ್ವರು ಸಹೋದರರು. ಒಬ್ಬ ಸಹೋದರ ಬೆಂಗಳೂರಿನಲ್ಲಿ ಶಿಕ್ಷಣ ಸಂಸ್ಥೆ ನೋಡಿ ಕೊಳ್ಳುತ್ತಾರೆ, ಇನ್ನೊಬ್ಬ ಸಾಮಾಜಿಕ ಕಾರ್ಯದ ಜೊತೆಗೆ ದೇವಾಲಯದಲ್ಲಿದ್ದಾರೆ. ನನಗೆ ಒಬ್ಬ ಸಹೋದರಿ ಇದ್ದಾಳೆ, ಅವರ ಪತಿ ಧಾರವಾಡದ ಎಸ್‌ಡಿಎಂ ವಿಶ್ವವಿದ್ಯಾಲಯದ ಕುಲಪತಿ. ಎಲ್ಲಾ ಶಿಕ್ಷಣ ಸಂಸ್ಥೆಗಳು ಟ್ರಸ್ಟ್ ಹೆಸರಿನಲ್ಲಿವೆಂದು ಹೇಳಿದರು.

ಜೈನ ಕುಟುಂಬ ಹಿಂದೂ ದೇವಾಲಯವನ್ನು ನಿರ್ವಹಿಸುತ್ತಿದೆ ಎಂಬ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಹೆಗ್ಗಡೆ, ಈ ಆರೋಪದಲ್ಲಿ ಸತ್ಯವಿದೆ ಎಂದು ನಾನು ಭಾವಿಸುವುದಿಲ್ಲ. ಎಲ್ಲಾ ಆಚರಣೆಗಳನ್ನು ಅನುಸರಿಸುವುದರಿಂದ ಜೈನರು ನಡೆಸುವ ಹಲವು ದೇವಾಲಯಗಳಿವೆ ಎಂದು ಅವರು ತಿಳಿಸಿದರು.

ಇನ್ನು ಧರ್ಮಸ್ಥಳದ ಮೇಲಿನ ನಂಬಿಕೆಗೆ ಯಾವುದೇ ಧಕ್ಕೆಯಾಗುವುದಿಲ್ಲ ಎಂದು ಪುನರುಚ್ಚರಿಸಿದ ಹೆಗ್ಗಡೆ, ನಾವು ಪೂಜೆ, ಆಚರಣೆಗಳನ್ನು ಎಂದಿನಂತೆ ನಡೆಸುತ್ತೇವೆ. ಭಕ್ತರು ಎಂದಿನಂತೆ ಮಂಜುನಾಥನ ದರ್ಶನಕ್ಕೆ ಬರುತ್ತಿದ್ದಾರೆಂದರು.

# ಸಮಸ್ಯೆ ಅರಿಯಲು ಪ್ರತಿ ತಾಲ್ಲೂಕು ಭೇಟಿ: ಡಿಸಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಿಗೆ ಭೇಟಿ ನೀಡಿ ಸಾರ್ವಜನಿಕರ ಸಮಸ್ಯೆ ಖುದ್ದಾಗಿ ಅರಿತು ಪರಿಹಾರ ಕ್ರಮ ಕೈಗೊಳ್ಳಲಾಗುವುದೆಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರು ಹೇಳಿದರು.

ಮಂಗಳವಾರ ಪಟ್ಟಣಕ್ಕೆ ಭೇಟಿ ನೀಡಿದ್ದ ಅವರು ಲಕ್ಷ್ಮಿ ನರಸಿಂಹ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಕಡೆ ಸಮಸ್ಯೆ ಇದ್ದೇ ಇರುತ್ತದೆ. ನಮ್ಮ ಅವಧಿಯಲ್ಲಿ ಸಾಧ್ಯವಾದಷ್ಟು ಪರಿಹಾರಕ್ಕೆ ಪ್ರಯತ್ನಿಸಲಾಗುವುದು. ಹೇಮಾವತಿ ನದಿಗೆ ಕಲುಷಿತ ನೀರು ಸೇರುತ್ತಿದೆ. ಮುಸ್ಲಿಂ ಬಡಾವಣೆಯ ಯಾಸೀನ್ ನಗರ ಮಳೆಗಾಲದಲ್ಲಿ ನದಿ ತುಂಬಿ ಮನೆಗಳು ಮುಳುಗುತ್ತವೆ ಎಂಬುದರ ಕುರಿತು ಮಾಹಿತಿ ಇದೆ. ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಮಕ್ಕಳ ತಜ್ಞರಿಲ್ಲ. ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಒಬ್ಬರೇ ಪ್ರಸೂತಿ ತಜ್ಞರಿದ್ದಾರೆ. ಆರೋಗ್ಯ ಹಿತದೃಷ್ಟಿಯಿಂದ ಹೆಚ್ಚುವರಿ ವೈದ್ಯರ ನೇಮಕಕ್ಕೆ ಕ್ರಮ ಕೈಗೊಳ್ಳಲಾಗುವುದೆಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಟಿ.ಲಕ್ಷ್ಮಣ್, ಬಾಗೀವಾಳು ಮಂಜುನಾಥ್ ಹಾಗು ಸಾಮಾಜಿಕ ಕಾರ್ಯಕರ್ತ ಮುತ್ತುರಾಜ್ ಅವರು ಮಾತನಾಡಿ, ರಸ್ತೆಗೆ ಅಡ್ಡಲಾಗಿ ಗಣಪತಿ ಪೆಂಡಾಲ್ ಹಾಕಲಾಗಿದೆ. ಅದರಿಂದ ಸಾರ್ವಜನಿಕ ಸಂಚಾರಕ್ಕೆ ತೊಂದರೆ ಯಾಗುತ್ತಿದೆ. ಈ ಬಗ್ಗೆ ಪ್ರತಿ ವರ್ಷ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲವೆಂದು ಜಿಲ್ಲಾಧಿಕಾರಿ ಗಮನಕ್ಕೆ ತಂದರು.

ಸೂಕ್ತ ದಾಖಲೆಗಳೊಂದಿಗೆ ವಿವರ ಒದಗಿಸುವಂತೆ ತಹಶೀಲ್ದಾರ್ ಮತ್ತು ಪುರಸಭಾ ಮುಖ್ಯಾಧಿಕಾರಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಹಂಗರಹಳ್ಳಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ಪೂರ್ವ ಪ್ರಾಥಮಿಕ ಶಾಲೆಯನ್ನು ಗ್ರಾಮದ ಮುಖಂಡರು ದತ್ತು ಪಡೆದು ಸವಲತ್ತು ಒದಗಿಸಿಕೊಟ್ಟಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ತಹಶೀಲ್ದಾರ್ ವೈ.ಎಂ. ರೇಣುಕುಮಾರ್, ಪುರಸಭಾ ಮುಖ್ಯಾಧಿಕಾರಿ ಶಿವಶಂಕರ್ ಮತ್ತಿತರರಿದ್ದರು.



## ಶ್ರೀಗಂಧ ಮರ ಕಳವು

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ದೇವಸ್ಥಾನ ಆವರಣದಲ್ಲಿದ್ದ 5 ಶ್ರೀಗಂಧದ ಮರಗಳನ್ನು ಕತ್ತರಿಸಿ ಕಳವು ಮಾಡಿರುವ ಘಟನೆ ತಾಲ್ಲೂಕಿನ ಬರಗೂರು ಗೇಟ್ ಸಮೀಪದ ಮಹಾಲಕ್ಷ್ಮೀ ದೇಗುಲದಲ್ಲಿ ನಡೆದಿದೆ.

ದೇವಸ್ಥಾನದ ಜ್ಞಾನ ಮಂದಿರ ಸುತ್ತ ಬೆಳೆದಿದ್ದ ಸುಮಾರು 8 ರಿಂದ 10 ವರ್ಷದ ಗಂಧದ ಮರಗಳನ್ನು ಬೆಳೆಸಲಾಗಿತ್ತು. ದೇವಾಲಯ ಟ್ರಸ್ಟಿ ಅಟ್ಟಾವರ ರಾಮದಾಸ್ ಅವರ ಮರಣದ ನಂತರ ಪುತ್ರಿ ಅಂಜಲಿ ಅಟ್ಟಾವರ ಸಂತೋಷ್ ಅವರು ನಿರ್ವಹಣೆ ಮಾಡುತ್ತಿದ್ದರು. ರಾಮದಾಸ್ ಅವರ ಕಾರು ಚಾಲಕ ಧರಣೇಶ ಅವರೇ ಆಗಾಗ ಬಂದು ಶ್ರೀಗಂಧ ಮರಗಳನ್ನು ನೋಡಿಕೊಂಡು ಹೋಗುತ್ತಿದ್ದರು. ಆ.16ರ ರಾತ್ರಿ ಬಂದಿರುವ ಕಳ್ಳರು ಗಿಡಗಳನ್ನು ಅರ್ಧ ಕತ್ತರಿಸಿದ್ದಾರೆ. ಒಟ್ಟು 1.50 ಲಕ್ಷ ರೂ. ಮೌಲ್ಯದ ಶ್ರೀಗಂಧ ಕಳುವಾಗಿದೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಚಿನ್ನಾಭರಣ ಕಳವು

• ಪ್ರಜೋದಯ ವರದಿ



**ಹಾಸನ:** ನಗರದ ಕೆಎಸ್‌ಆರ್‌ಟಿಸಿ ಬಸ್‌ನಲ್ಲಿ ಚಿನ್ನಾಭರಣವಿದ್ದ ಮಹಿಳೆ ಯೊಬ್ಬರ ಸೂಟ್‌ಕೇಸ್‌ನೊಂದಿಗೆ ಅಪರಿಚಿತ ನಾಪತ್ತೆಯಾಗಿರುವ ಘಟನೆ ಇತ್ತೀಚೆಗೆ ನಡೆದಿದೆ.

ತುಮಕೂರಿನ ಲೋಕೇಶ್ ಎಂಬುವವರು ಮಂಗಳೂರಿಗೆ ತೆರಳುತ್ತಿದ್ದರು. ಆ.17ರ ರಾತ್ರಿ 10.30ರ ಸಮಯದಲ್ಲಿ ಹಾಸನ ಬಸ್ ನಿಲ್ದಾಣದಲ್ಲಿ ಬಸ್ ಇಳಿಯುತ್ತಿದ್ದಾಗ ಮರೆತು ಸೂಟಕೇಸ್ ಅನ್ನು ಸೀಟ್ ಮೇಲೆಯೇ ಬಿಟ್ಟು ಕೆಳಗಿಳಿದಿದ್ದರು. ಹಿಂದಿನಿಂದ ಬರುತ್ತಿದ್ದ ವ್ಯಕ್ತಿ ಯೊಬ್ಬ ಸೂಟ್‌ಕೇಸ್ ತರುತ್ತಿರುವುದಾಗಿ ಹೇಳಿದ್ದರಿಂದ ಬಾಗಿಲಲ್ಲೇ ನಿಂತಿದ್ದರು. ಆದರೆ ಆತ ಬ್ಯಾಗ್ ಕೊಡದೆ ನಾಪತ್ತೆಯಾಗಿದ್ದಾನೆ. 1.35 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳುವಾಗಿದ್ದು ಹುಡುಕೊಡಬೇಕೆಂದು ಬಡಾವಣೆ ಠಾಣೆಗೆ ದೂರು ಸಲ್ಲಿಸಿದ್ದಾರೆ.

# ಗಾಳಿ-ಮಳೆಗೆ 18 ಮನೆಗಳಿಗೆ ಹಾನಿ

## ಅಧಿಕಾರಿಗಳೊಂದಿಗೆ ತಹಶೀಲ್ದಾರ್ ಸೌಮ್ಯ ಪರಿಶೀಲನೆ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನಲ್ಲಿ ಎಡೆಬಿಡದೆ ಸುರಿದ ಗಾಳಿ-ಮಳೆಗೆ 18ಕ್ಕೂ ಹೆಚ್ಚು ವಾಸದ ಮನೆಗಳಿಗೆ ಹಾನಿ ಸಂಭವಿಸಿದ್ದು, ತಹಶೀಲ್ದಾರ್ ಸೌಮ್ಯ ಅವರು ಅಧಿಕಾರಿಗಳೊಂದಿಗೆ ಮಂಗಳವಾರ ಹಾನಿ ಉಂಟಾದ ಜನವಸತಿ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪಟ್ಟಣ ಸೇರಿ ತಾಲ್ಲೂಕಿನಾದ್ಯಂತ ಕಳೆದ ಎರಡು ದಿನಗಳಿಂದ ಭರ್ಜರಿ ಮಳೆ ಸುರಿದಿದ್ದು, ಮಂಗಳವಾರ ಬೆಳಿಗ್ಗೆಯಿಂದ ಮಳೆ ಬಿಡುವು ನೀಡಿದೆ. ಭಾನುವಾರ ಮತ್ತು ಸೋಮವಾರ ಸುರಿದ ಮಳೆಯಿಂದ ವಾಸದ ಮನೆಗಳಿಗೆ ಹಾನಿ ಉಂಟಾಗಿದೆ. ತಾಲ್ಲೂಕಿನ ಹಲ್ಲಂಗಾಲ ಗ್ರಾಮದ ತಿಮ್ಮೇಗೌಡ, ಮಳಲಿಕೆರೆ ರಾಜಮ್ಮ, ವಿಜಾಪುರ ಫಾರೆಸ್ಟ್ ಗ್ರಾಮದ ರಂಗಮ್ಮ, ಸೋಮಶೇಖರ್, ಹೆಣ್ಣೂರು ಕೊಂಗಳಲೆ ಗ್ರಾಮದ ಲಕ್ಷ್ಮಮ್ಮ, ಗಂಗೂರು ಗ್ರಾಮದ ಪುಟ್ಟಮ್ಮ, ವಿ.ಜಿ.ಕೊಪ್ಪಲು ಗ್ರಾಮದ ರಮೇಶ್, ಮುದಗನೂರು ಗ್ರಾಮದ ಪಾಪೇಗೌಡ, ದಾರಿಕೊಂಗಳಲೆ ಗ್ರಾಮದ ರಾಜೇಗೌಡ, ಅರಕಲಗೂಡು ಪಟ್ಟಣದ ರಾಜೇಶ್ವರಿ ಎಂಬುವವರಿಗೆ ಸೇರಿದ ವಾಸದ ಮನೆಗಳಿಗೆ ಹಾನಿ ಸಂಭವಿಸಿದೆ.

ಮಳೆಯಿಂದ ಹಾನಿಗೊಳಗಾದ ವಾಸದ ಮನೆಗಳ ಮಾಹಿತಿಯನ್ನು ಸ್ಥಳ ಪರಿಶೀಲನೆ ಮಾಡಿ ಪಡೆದುಕೊಳ್ಳಲಾಗಿದೆ. ಪರಿಹಾರ ಕುರಿತು ಜಿಲ್ಲಾಧಿಕಾರಿ ಕ್ರಮ ಕೈಗೊಳ್ಳಲಿದ್ದಾರೆ. ಅತೀಯಾದ ಮಳೆ ಹಿನ್ನೆಲೆ ಹಳೆಯ ವಾಸದ ಮನೆಗಳು, ಕೊಟ್ಟಿಗೆಗೆ ಹಾನಿ ಉಂಟಾಗಿದೆ. ಜನರು ತುಂಬಾ ದುಸ್ಥಿತಿಯಲ್ಲಿರುವ ಮನೆಗಳಲ್ಲಿ ಇರುವುದು ಸೂಕ್ತವಲ್ಲ. ಈ ಬಗ್ಗೆ ಎಚ್ಚರಿಕೆ ವಹಿಸಬೇಕೆಂದು ಭೇಟಿ ನೀಡಿದ ವೇಳೆ ತಿಳುವಳಿಕೆ ನೀಡಲಾಗಿದೆ ಎಂದು ತಹಶೀಲ್ದಾರ್ ಸೌಮ್ಯ ತಿಳಿಸಿದರು.



# ಮಣ್ಣಿನ ಗಣಪತಿ ಪೂಜಿಸಿ ಪರಿಸರ ಕಾಪಾಡೋಣ

• ಪ್ರಜೋದಯ ವರದಿ

**ಆಲೂರು:** ಪರಿಸರವನ್ನು ಕಾಪಾಡಿಕೊಳ್ಳುವ ಮೂಲಕ ಗೌರಿ-ಗಣೇಶ ಹಬ್ಬವನ್ನು ಎಲ್ಲರೂ ಒಗ್ಗಟ್ಟಾಗಿ ವಿಜೃಂಭಣೆಯಿಂದ ಆಚರಿಸಲು ಸಹಕರಿಸಬೇಕೆಂದು ತಹಶೀಲ್ದಾರ್ ಹೆಚ್. ಮಲ್ಲಿಕಾರ್ಜುನ ಅವರು ಮನವಿ ಮಾಡಿದರು.

ಪಟ್ಟಣದ ಮಿನಿ ವಿಧಾನಸೌಧ ಸಭಾಂಗಣದಲ್ಲಿ ಗೌರಿ-ಗಣೇಶ ಹಬ್ಬದ ಸಲುವಾಗಿ ಪ್ಲಾಸ್ಟರ್ ಆಫ್ ಪ್ಯಾರೀಸ್(ಪಿಒಪಿ) ಹಾಗೂ ರಾಸಾಯನಿಕ ಮುಕ್ತ ಗುಣಗಳುಳ್ಳ ವಸ್ತುಗಳನ್ನು ಬಳಸಿ ತಯಾರಿಸಿರುವ ಗಣೇಶ ವಿಗ್ರಹಗಳ ಉತ್ಪಾದನೆ, ಸಂಗ್ರಹಣೆ, ಮಾರಾಟ ಮತ್ತು ವಿಸರ್ಜನೆಯನ್ನು ನಿಷೇಧಿಸಿರುವ ಕುರಿತು ಏರ್ಪಡಿಸಲಾಗಿದ್ದ ಜಾಗೃತಿ ಸಭೆ ಅಧ್ಯಕ್ಷತೆ ವಹಿಸಿ ಮಾತ ನಾಡಿದರು. ಪುರಾತನ ಕಾಲದಿಂದಲೂ ಗೌರಿ-ಗಣೇಶ ಮೂರ್ತಿಯನ್ನು ಜೇಡಿ ಮಣ್ಣಿನಿಂದ ತಯಾರಿಸಿ ಪೂಜಿಸಿ, ಆರಾಧಿಸಿ, ನದಿ, ಬಾವಿ, ಕೆರೆ, ಕಟ್ಟೆಗಳಾದ ಜಲ ಮೂಲಗಳಿಂದ ಪರಿಸರದಲ್ಲಿ ಲೀನವಾಗುವಂತೆ ವಿಸರ್ಜಿಸುವ ಮೂಲಕ ಹಬ್ಬವನ್ನು ಅದ್ದೂರಿಯಾಗಿ ಆಚರಣ ಮಾಡಲಾಗುತ್ತಿದೆ ಎಂದರು.

ಇತ್ತೀಚಿನ ವರ್ಷಗಳಲ್ಲಿ ಪಿಒಪಿಯಿಂದ ತಯಾರಿಸುವ ಮತ್ತು ರಾಸಾಯನಿಕ ಮುಕ್ತ ಬಣ್ಣವನ್ನು ಬಳಸುವುದರಿಂದ ಪರಿಸರ ಮತ್ತು ನೀರು ಕಲ್ಮಶವಾಗಿ ಮನುಷ್ಯರು, ಪ್ರಾಣಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಈ ಕುರಿತು ಗೌರಿ-ಗಣೇಶ ಮೂರ್ತಿಗಳನ್ನು ತಯಾರಿಸುವ, ಮಾರಾಟ ಮಾಡುವ ಮತ್ತು ಪ್ರತಿಷ್ಠಾಪಿಸುವ ಸಮಿತಿಗಳ ಗಮನಕ್ಕೆ ತಂದು, ಪಿಒಪಿ ಮತ್ತು ರಾಸಾಯನಿಕ ಬಣ್ಣದಿಂದ ತಯಾರು ಮಾಡಿರುವ ಮೂರ್ತಿಗಳನ್ನು ಹೊರತು ಪಡಿಸಿ, ಮಣ್ಣಿನಿಂದ ತಯಾರು ಮಾಡುವ ಮೂರ್ತಿಗಳನ್ನು ಪ್ರತಿಷ್ಠಾಪಿಸಿ ಪೂಜಿಸಿ ವಿಜೃಂಭಣೆ ಯಿಂದ ಹಬ್ಬವನ್ನು ಆಚರಣೆ ಮಾಡೋಣವೆಂದರು.

ಮೂರ್ತಿಗಳನ್ನು ವಿಸರ್ಜನೆ ಮಾಡುವ ಸಂದರ್ಭದಲ್ಲಿ ಸಾಧ್ಯವಾದಷ್ಟು ಜಲಮಾಲಿನ್ಯ, ಶಬ್ದಮಾಲಿನ್ಯ ವಾಗದಂತೆ ಸಹಕರಿಸಬೇಕು. ಜನ, ಜಾನುವಾರುಗಳು ಬಳಸುವ ನೀರಿನಲ್ಲಿ ವಿಸರ್ಜಿಸಬಾರದು. ಮೂರ್ತಿಗಳನ್ನು ಪ್ರತಿಷ್ಠಾಪಿಸುವ ಮುನ್ನ ಸ್ಥಳೀಯ ಪಂಚಾಯಿತಿ ಮತ್ತು ಪೊಲೀಸ್ ಅನುಮತಿ ಕೊಡುವ ಸಂದರ್ಭದಲ್ಲಿ ನಿಯಮಗಳ ಪಟ್ಟಿಯನ್ನು ಲಗತ್ತಿಸಬೇಕು. ರಾತ್ರಿ 10 ರಿಂದ ಬೆಳಿಗ್ಗೆ 6 ರವರೆಗೆ ಧ್ವನಿವರ್ಧಕ ಬಳಸಬಾರದು. ನಿಯಮ ಮೀರಿದರೆ ಶಿಕ್ಷಾರ್ಹ ಅಪರಾಧವಾಗಿದ್ದು, ಗರಿಷ್ಠ 1 ಲಕ್ಷ ರೂ. ದಂಡದೊಂದಿಗೆ ಗರಿಷ್ಠ 5 ವರ್ಷ ಕಾರಾಗೃಹ ಶಿಕ್ಷೆ ಅನುಭವಿಸಬೇಕಾಗುತ್ತದೆಂದು ಎಚ್ಚರಿಸಿದರು.

ತಾಲ್ಲೂಕು, ಪ್ರತಿ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ ಕೇಂದ್ರಗಳಲ್ಲಿ ಅಗತ್ಯವಿರುವ ಸ್ಥಳದಲ್ಲಿ ಬೃಹತ್ ಫ್ಲೆಕ್ಸ್ ಹಾಕುವ ಮೂಲಕ ಸಾರ್ವಜನಿಕರಲ್ಲಿ ಪರಿಸರದ ಬಗ್ಗೆ ಜಾಗೃತಿ ಮೂಡಿಸಬೇಕು. ಗಣೇಶ ಮೂರ್ತಿ ತಯಾರು ಮಾಡುವವರನ್ನು ಸಂಪರ್ಕಿಸಿ ನಿಯಮಗಳನ್ನು ಪಾಲಿಸು ವಂತೆ ಸೂಚನೆ ನೀಡಬೇಕು ಎಂದರು.

ಸಭೆಯಲ್ಲಿ ರಾಜ ಸ್ವ-ನಿರೀಕ್ಷಕ ಗೋವಿಂದರಾಜು, ತಾಲ್ಲೂಕು ಪಂಚಾಯಿತಿ ವ್ಯವಸ್ಥಾಪಕ ರಾಜೇಶ್, ಸಹಾಯಕ ಸಬ್ ಇನ್ಸ್‌ಪೆಕ್ಟರ್ ಚಂದ್ರಶೇಖರ್, ಲಲಿತಮ್ಮ, ಸಾಗರ್ ಇತರರು ಉಪಸ್ಥಿತರಿದ್ದರು



# ಯುವಜನತೆ ಜಾಗರೂಕರಾಗಿ ಹೆಜ್ಜೆ ಇಡಬೇಕು

• ಪ್ರಜೋದಯ ವರದಿ

**ಹಾಸನ:** ಎಲ್ಲಾ ಯುವಕ-ಯುವತಿಯರು ಸರಿಯಾದ ದಾರಿಯಲ್ಲಿ ಸಾಗಿ ವಿವಾಹವಾಗು ವವರೆಗೂ ಬ್ರಹ್ಮಚಾರ್ಯ ಪಾಲನೆ ಮಾಡಿದರೆ ಈ ಮಾರಣಾಂತಿಕ ಎಚ್.ಐ.ವಿ. ಸೋಂಕಿನ ಹರಡುವಿಕೆಯನ್ನು ನಿಲ್ಲಿಸಬಹುದೆಂದು ಗಂಧದಕೋಠಿ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಅವರು ಹೇಳಿದರು.

ನಗರದ ಆರ್.ಸಿ.ರಸ್ತೆಯ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಈಚೆಗೆ ರಾಜೀವ್ ನರ್ಸಿಂಗ್ ಕಾಲೇಜು, ಜಿಲ್ಲಾ ಆರೋಗ್ಯ ಇಲಾಖೆಯ ಏಡ್ಸ್ ನಿಯಂತ್ರಣ ಹಾಗೂ ತಡೆಗಟ್ಟುವ ಘಟಕ ಹಾಗೂ ಮಹಿಳಾ ಕಾಲೇಜಿನ ರೆಡ್ ರಿಬ್ಬನ್ ಕ್ಲಬ್ ವತಿಯಿಂದ ಆಯೋಜಿಸಲಾಗಿದ್ದ ಏಡ್ಸ್ ಜಾಗೃತಿ ಮತ್ತು ತಡೆಗಟ್ಟುವಿಕೆ ವಿಷಯದ ಕುರಿತ ವಿಶೇಷ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಯುವಜನತೆಯು ಆದಷ್ಟು ಜಾಗರೂಕರಾಗಿ ಹೆಜ್ಜೆ ಇಡಬೇಕು. ಇತರರಿಂದ ರಕ್ತವನ್ನು ಪಡೆಯುವುದಕ್ಕಿಂತ ಮುಂಚಿತವಾಗಿ ರಕ್ತದ ಪರೀಕ್ಷೆ ಮಾಡಿಸುವುದು ಸೂಕ್ತವೆಂದರು.

ಏಡ್ಸ್ ಕಾಯಿಲೆ ಮಾನವರಲ್ಲಿರುವ ರೋಗ ನಿರೋಧಕ ಶಕ್ತಿ ಯನ್ನು ಕುಗ್ಗಿಸುತ್ತದೆ. ವೈರಸ್‌ನ ತೀವ್ರತೆ ಅತಿರೇಕಕ್ಕೆ ತಲುಪಿದರೆ ಸೋಂಕಿತ ವ್ಯಕ್ತಿಯು ಸಾವನ್ನಪ್ಪುವ ಸಾಧ್ಯತೆ ಹೆಚ್ಚಿರುತ್ತದೆ. ಅಸುರಕ್ಷಿತ ಲೈಂಗಿಕ ಕ್ರಿಯೆ, ಸೋಂಕಿತ ವ್ಯಕ್ತಿಯಿಂದ ರಕ್ತವನ್ನು ಪಡೆದುಕೊಳ್ಳುವುದು, ಸೋಂಕಿತ ಸೂಜಿ-ಸಿರಂಜುಗಳ ಬಳಕೆ, ಹೆಚ್‌ಐಗೆ ತುತ್ತಾಗಿರುವ ತಾಯಿ ಮಗುವಿಗೆ ಸ್ತನಪಾನ ಮಾಡಿಸಿದಾಗ ಈ ಸೋಂಕು ಹರಡುತ್ತದೆ. ನಾವು ಸಾಗುವ ಮಾರ್ಗ ಉತ್ತಮವಾಗಿದ್ದರೆ ಇಂತಹ ಸೋಂಕುಗಳ ಮೂಲವನ್ನೇ ನಾಶಪಡಿಸಬಹುದು. ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ನಿಟ್ಟಿನಲ್ಲಿ ದಿಟ್ಟ ಹೆಜ್ಜೆಯನ್ನಿಟ್ಟು ಸಾಗಬೇಕು. ಏಡ್ಸ್ ಎಂದರೆ ಭಯಬೇಡ ಜಾಗೃತವಹಿಸಿ ಎಂದು ತಿಳಿಸಿದರು.

ರಾಜೀವ್ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಏಡ್ಸ್ ಜಾಗೃತಿ ಕುರಿತಾದ ಜಾಗೃತಿ ನಾಟಕ ಪ್ರದರ್ಶನ ಮಾಡಿದರು. ಆರೋಗ್ಯ ಇಲಾಖೆಯ ಆಪ್ತ ಸಮಾಲೋಚಕಿ ಮಂಜುಳ, ಐ.ಕ್ಯೂ.ಎ.ಸಿ. ಸಂಚಾಲಕ ಮೋಹನ್ ಕುಮಾರ್ ಇತರರು ಹಾಜರಿದ್ದರು.




# ಬದುಕಿನಲ್ಲಿ ಸಹೋದರತೆ, ಸಹಬಾಳ್ವೆ ಅಗತ್ಯ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸಹೋದರತೆ ಸಂಬಂಧಕ್ಕೆ ಎಂದಿಗೂ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಕುಸುಮ ಬಾಲಕೃಷ್ಣ ಅವರು ಹೇಳಿದರು.

ಪಟ್ಟಣದ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಇನ್ನರ್ ವೀಲ್ ಹಾಗೂ ಕಲಾ ಪರಿವಾರದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ಷಾ ಬಂಧನ ಕಾರ್ಯಕ್ರಮದಲ್ಲಿ ಮಾತನಾಡಿ, ಜೀವನ ಎಂಬ ಚಕ್ರ ಉರುಳಿದಂತೆಲ್ಲ ಸಂಬಂಧಗಳ ಸಂಕೋಲೆ ಬೆಳೆಯುತ್ತಾ ಸಾಗುತ್ತದೆ. ಇಲ್ಲಿ ಹುಟ್ಟು-ಸಾವು ಖಚಿತವಾಗಿದ್ದು, ಈ ಭೂಮಿಯ ಮೇಲೆ ಯಾರೂ ಸಹ ಶಾಶ್ವತವಾಗಿ ಬದು ಕುಳಿಯಲು ಸಾಧ್ಯವಿಲ್ಲ. ಆದ್ದರಿಂದ ಇರುವವರೆಗೂ ಸಹಬಾಳ್ವೆಯಿಂದ ಬದುಕೋಣ ಎಂದು ತಿಳಿಸಿದರು.

ರಕ್ತ ಹಂಚಿಕೊಂಡು ಹುಟ್ಟಿದರಷ್ಟೇ ಮಾತ್ರ ಅಣ್ಣ-ತಮ್ಮಂದಿರು ಅಥವಾ ಸಹೋದರರಲ್ಲ. ಹೆಜ್ಜೆ ಇರಿಸಿದಂತೆಲ್ಲ ಜೊತೆಯಾಗಿ ಸಿಗುವ ಪ್ರತಿಯೊಬ್ಬರೂ ಒಡಹುಟ್ಟಿದವರಷ್ಟೇ ಸಮ. ಒಳ್ಳೆಯ ಮನಸ್ಸು, ಮಾತು ಹಾಗೂ ನಡೆ ಯುವ ಮಾರ್ಗ ಸರಿ ಇದ್ದರೆ ಸಮಾಜವು ಪ್ರಗತಿ ಕಾಣಲಿದೆ. ಎಲ್ಲರೂ ಒಗ್ಗೂಡಿ ನಡೆಯೋಣ. ಇಲ್ಲಿ ಯಾರೂ ದೊಡ್ಡವರಲ್ಲ, ಎಲ್ಲರೂ ಒಂದೇ ಸಮಾನ ಭಾವದಿಂದ ಬಾಳಿ ಬದುಕಬೇಕು ಎಂದರು.

ಇನ್ನರ್ ವೀಲ್ ಹಾಗೂ ಕಲಾ ಪರಿವಾರದ ಅಧ್ಯಕ್ಷರು ಹಾಗೂ ಸದಸ್ಯರು ಪತ್ರಕರ್ತರಿಗೆ ರಕ್ಷಾ ಬಂಧನ(ರಾಕಿ) ಕಟ್ಟಿ ಸಿಹಿ ನೀಡಿ ಆರತಿ ಬೆಳಗಿದರು.

ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಸಿದ್ದರಾಜ್, ಪ್ರಧಾನ ಕಾರ್ಯದರ್ಶಿ ಎ.ನಟೇಶ್, ಜಿಲ್ಲಾ ನಿರ್ದೇಶಕ ಪುಟ್ಟರಾಜು, ಮಾಜಿ ಅಧ್ಯಕ್ಷರಾದ ಎ.ಎಲ್. ನಾಗೇಶ್, ಬಿ.ಟಿ.ವೆಂಕಟಸ್ವಾಮಿ, ನಿರ್ದೇಶಕರಾದ ನಾಗೇಂದ್ರ, ಆರ್. ಶ್ರೀನಿವಾಸ್ ಉಳ್ಳಾವಳ್ಳಿ, ಲೋಹಿತ್, ಸದಸ್ಯರಾದ ಜೈಕುಮಾರ್, ಮಂಜುನಾಥ್, ಗೋವಿಂದ ಇದ್ದರು.



# ಅರಸೀಕೆರೆಯಲ್ಲಿ ಬಿಡಾಡಿ ದನಗಳಿಂದ ಸವಾರರಿಗೆ ಕಿರಿಕಿರಿ

## ನಗರಸಭೆಗೆ ತಲೆನೋವು | ಪರಿಹಾರಕ್ಕೆ ಸಾರ್ವಜನಿಕರ ಆಗ್ರಹ

• ಪ್ರಜೋದಯ ವರದಿ

**ಅರಸೀಕೆರೆ:** ರಸ್ತೆಯಲ್ಲಿ ಸಂಚರಿಸುವ ವಾಹನ ಸವಾರರಿಗೆ ಕಿರಿಕಿರಿ ನೀಡುವ ಬಿಡಾಡಿ ದನಗಳು ತಮ್ಮ ಪ್ರಾಣಕ್ಕೂ ಸಹ ಸಂಚಕಾರ ತಂದುಕೊಳ್ಳುತ್ತಿರುವ ಸರದಿ ನಗರದಲ್ಲಿ ಮುಂದುವರಿಯುತ್ತಿದ್ದು ಅದಕ್ಕೆ ಪರಿಹಾರ ಏನು ಎಂಬ ಪ್ರಶ್ನೆ ಸಾರ್ವಜನಿಕರಿಗೆ ಕಾಡಿದರೆ ಇತ್ತ ನಗರಸಭೆ ಆಡಳಿತಕ್ಕೂ ತಲೆನೋವಿನ ಸಂಗತಿಯಾಗಿದೆ.

ನಗರದ ಮೂಲಕ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 206 ಟಿಎಚ್ ರಸ್ತೆ ಪಿ.ಪಿ. ವೃತ್ತದ ಸಮೀಪ ಮಂಗಳವಾರ ಬೆಳಿಗ್ಗೆ ಹೆದ್ದಾರಿಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದ ಬಿಡಾಡಿ ದನ ರಸ್ತೆಯಲ್ಲಿ ಸಾಗುವ ವಾಹನಕ್ಕೆ ಸಿಕ್ಕಿಹಾಕಿಕೊಂಡ ಪರಿಣಾಮ ತನ್ನ ಕಾಲು ಕಳೆದುಕೊಂಡು ನರಳಾಡುತ್ತಿದ್ದ ದೃಶ್ಯ ಕಂಡವರು ಪಶ್ಚಾತ್ತಾಪದಿಂದ ಮರುಗಿದರು.

ಬಿಡಾಡಿ ದನ ಹಾಗೂ ವಾಹನ ಸವಾರ ನಡುವೆ ನಿತ್ಯ ನಡೆಯುತ್ತಿರುವ ಕಾದಾಟಕ್ಕೆ ಪರಿಹಾರ ಕಂಡುಕೊಳ್ಳಲು ನಗರಸಭೆ ಕ್ರಮ ಕೈಗೊಳ್ಳದೇ ಇರುವುದು ಸಹಜವಾಗಿಯೇ ಜನತೆಯ ಅಸಮಾಧಾನಕ್ಕೆ ಕಾರಣವಾಗಿರುವುದಲ್ಲದೆ ಅಡ್ಡದಿಡ್ಡಿ ರಸ್ತೆಯಲ್ಲಿ ಕಾಣಿಸಿಕೊಳ್ಳುವ ಬಿಡಾಡಿ ದನಗಳು ಅಪಘಾತಕ್ಕೆ ಕಾರಣವಾಗುತ್ತಿದ್ದು ವಾಹನ ಸವಾರರು ಅಷ್ಟೇ ಅಲ್ಲ ತಮ್ಮ ಸಾವು ನೋವಿಗೂ ಮೂಕ ಪ್ರಾಣಿಗಳು ತುತ್ತಾಗುತ್ತಿರುವುದು ವಿಷಾದನೀಯ ಸಂಗತಿಯಾಗಿದೆ.

ನಗರದಲ್ಲಿ ನೂರಾರು ದನಗಳು ಮನಸೋ ಇಚ್ಛೆ ಓಡಾಡಿಕೊಂಡಿವೆ. ಇವು ಬಿಡಾಡಿ ದನಗಳಲ್ಲ ಬಹುತೇಕ ಧನಗಳಿಗೆ ಮಾಲೀಕರಿದ್ದಾರೆ, ಸಣ್ಣ ಕರುಗಳನ್ನು ತಂದು ರಸ್ತೆಯಲ್ಲಿ ಬಿಟ್ಟು ಬೆಳೆಸಿ ಅವು ದೊಡ್ಡದಾಗಿ ಬೆಳೆದ ಬಳಿಕ ವ್ಯವಸ್ಥಿತವಾಗಿ ಕಸಾಯಿಖಾನೆ ಪಾಲಾಗುತ್ತಿವೆ. ಅದನ್ನು ಕಂಡು ಕಾಣದಂತೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನಡೆದುಕೊಳ್ಳುತ್ತಿರುವುದರಿಂದ ಈ ರೀತಿ ಬಿಡಾಡಿ ದನಗಳು ಹೆಚ್ಚಾಗಲು ಕಾರಣವಾಗಿದೆಯಲ್ಲದೆ ರಸ್ತೆಯಲ್ಲಿ ಅಪಘಾತಗಳು ಸಂಭವಿಸಿ ಮನುಷ್ಯ ಹಾಗೂ ಮೂಕ ಪ್ರಾಣಿಗಳ ಸಾವು ನೋವಿಗೆ ಕಾರಣವಾಗುತ್ತಿರುವುದು ನೋವಿನ ಸಂಗತಿ ಎನ್ನುತ್ತಾರೆ ಹಿರಿಯ ವಕೀಲ ಹಿರಣ್ಣಯ್ಯ.



> ನಗರ ವ್ಯಾಪ್ತಿಯಲ್ಲಿ ಹಾದು ಹೋಗಿರುವ ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಯಲ್ಲಿ ಬಿಡಾಡಿ ದನಗಳು ಹಾಗೂ ಬೀದಿ ನಾಯಿಗಳು ಅಡ್ಡ ದಿಂಡಿಯಾಗಿ ಓಡಾಡುವುದನ್ನು ತಡೆಯಲು ಒಂದು ಕೋಟಿಗೂ ಅಧಿಕ ವೆಚ್ಚದಲ್ಲಿ ರಸ್ತೆ ವಿಭಜಕದ ಮಧ್ಯೆ ಬ್ಯಾರಿಕೆಟ್‌ಗಳನ್ನು ನಗರಸಭೆ ಅಳವಡಿಸಲು ಮುಂದಾ ಗಿದ್ದು, ಈಗಾಗಲೇ ಕಾಮಗಾರಿ ಪ್ರಗತಿಯಲ್ಲಿದೆ. ಅಂದುಕೊಂಡಂತೆ ಎಲ್ಲವೂ ಆದರೆ ಬೀದಿ ದನಗಳು ಹಾಗೂ ಬೀದಿ ನಾಯಿಗಳಿಂದ ರಸ್ತೆಯಲ್ಲಿ ಆಗುತ್ತಿರುವ ಅಪಘಾತಗಳನ್ನು ತಪ್ಪಿಸಲು ಸಾಧ್ಯವಾಗಬಹುದೆಂಬ ವಿಶ್ವಾಸ ಇದೆ.
> - ಎಂ.ಸಮೀವುಲ್ಲಾ, ನಗರಸಭೆ ಅಧ್ಯಕ್ಷ

## 45 ಸಾವಿರ ಎಕರೆಯಲ್ಲಿ ಭತ್ತದ ಕೃಷಿ ಚುರುಕು | ಇಳುವರಿ ಕುಂಠಿತ

# ಉತ್ತಮ ಮುಂಗಾರು, ನಾಲೆ-ಕೆರೆಕಟ್ಟೆಗಳಲ್ಲಿ ನೀರು

• ಪ್ರಜೋದಯ ವರದಿ


**ಅರಕಲಗೂಡು:** ಉತ್ತಮ ಮುಂಗಾರು ಮಳೆ ಬೀಳುತ್ತಿರುವ ಪರಿಣಾಮ ತಾಲ್ಲೂಕಿನಲ್ಲಿ ಹಾದು ಹೋಗಿರುವ ಜೀವನದಿ ಕಾವೇರಿ ಹಾಗೂ ಹೇಮಾವತಿ ನದಿ ಪಾತ್ರದ ನಾಲಾ ಮತ್ತು ಕೆರೆಗಳ ಅಚ್ಚುಕಟ್ಟಿನಲ್ಲಿ ರೈತರು ಭತ್ತದ ನಾಟಿ ಕಾರ್ಯ ಚುರುಕುಗೊಳಿಸಿದ್ದು ಗದ್ದೆಗಳಲ್ಲಿ ಎತ್ತ ನೋಡಿದರೂ ಕೃಷಿ ಚಟುವಟಿಕೆ ಕಳೆಗಟ್ಟಿದೆ.

ಕಾವೇರಿ ಹಾಗೂ ಹೇಮಾವತಿ ಜಲಾನಯನ ಪ್ರದೇಶದಲ್ಲಿ ಈ ಬಾರಿ ವಾಡಿಕೆಗೂ ಅಧಿಕವಾಗಿ ಧಾರಾಕಾರ ಮಳೆ ಸುರಿದಿದೆ. ಹೀಗಾಗಿ ವಾಡಿಕೆಗಿಂತ ಮೊದಲೇ ಗೊರೂರು ಜಲಾಶಯ, ಹಾರಂಗಿ ಮತ್ತು ಕಟ್ಟೇಪುರ ಕೃಷ್ಣರಾಜ ಅಣೆಕಟ್ಟೆಗಳು ತುಂಬಿದ್ದು ಈಗಾಗಲೇ ಎಲ್ಲಾ ನಾಲೆಗಳಿಗೆ ನೀರು ಹರಿಸಲಾಗಿದೆ. ನಾಲಾ ವ್ಯಾಪ್ತಿಯ ಕೆರೆಗಳು ಸೇರಿ ಮಳೆ ಆಶ್ರಯದ ಕೆರೆಗಳಿಗೂ ನೀರು ಸಂಗ್ರಹವಾ ಗಿದೆ. ಅದರಿಂದ ಸಾವಿರಾರು ಎಕರೆ ಜಮೀನಿನಲ್ಲಿ ಭತ್ತ ಕೃಷಿ ಚಟುವಟಿಕೆ ಗರಿ ಗೆದರಿದ್ದು ಭತ್ತದ ಒಗ್ಗು ಹಾಕಿರುವ ರೈತರು ಇದೀಗ ನಾಟಿ ಕಾರ್ಯ ಬಿರುಸುಗೊಳಿಸಿದ್ದಾರೆ.

**45 ಸಾವಿರ ಎಕರೆಯಲ್ಲಿ ಭತ್ತದ ಕೃಷಿ**

ಹೇಮಾವತಿ ಬಲಮೇಲ್ದಂಡೆ ನಾಲೆ ವ್ಯಾಪ್ತಿಯಲ್ಲಿ 12,430 ಎಕರೆ, ಬಲದಂಡೆ ವ್ಯಾಪ್ತಿ 3,599 ಎಕರೆ, ಅಡಿಕೆ ಬೊಮ್ಮನಹಳ್ಳಿ ಏತ ನೀರಾವರಿ ವ್ಯಾಪ್ತಿಯಲ್ಲಿ 6,987 ಎಕರೆ, ಕಟ್ಟೇಪುರ ಕೃಷ್ಣರಾಜ ಅಣೆಕಟ್ಟೆಯ ನಾಲಾ ವ್ಯಾಪ್ತಿ ಹಾಗೂ ಹಾರಂಗಿ ಎಡದಂಡೆ ನಾಲಾ ವ್ಯಾಪ್ತಿ ಸೇರಿ 22 ಸಾವಿರ ಎಕರೆ ಮತ್ತು ಕೆರೆ ಅಚ್ಚುಕಟ್ಟುವಿನಲ್ಲಿ 2 ಸಾವಿರ ಸೇರಿ ಒಟ್ಟು 45 ಸಾವಿರ ಅಚ್ಚುಕಟ್ಟಿನಲ್ಲಿ ಭತ್ತದ ಕೃಷಿಯನ್ನು ಕೈಗೊಳ್ಳಲಾಗುತ್ತಿದೆ.





**ಕಟ್ಟೇಪುರ ನಾಲಾ ವ್ಯಾಪ್ತಿಯಲ್ಲಿ ರಾಜಮುಡಿ ಭತ್ತ ಕೃಷಿ :** ಮೈಸೂರು ಅರಸರ ಕಾಲದಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಮೊದಲ ಬಾರಿಗೆ ಕಟ್ಟಿದ ಅಣೆಕಟ್ಟೆ ಎಂಬ ಹೆಗ್ಗಳಿಕೆ ಹೊಂದಿರುವ ಕಟ್ಟೇಪುರ ಕೃಷ್ಣರಾಜ ಅಣೆಕಟ್ಟೆ ಭತ್ತದ ಬೆಳೆ ಬೆಳೆಯಲು ಈ ಭಾಗದ ರೈತರ ಜೀವನಾಡಿಯಾಗಿದೆ. ನದಿ ಪಾತ್ರದಲ್ಲಿ ಹಾದು ಹೋಗಿರುವ ಎಡ ಮತ್ತು ಬಲದಂಡೆ ನಾಲಾ ವ್ಯಾಪ್ತಿಯಲ್ಲಿ 9 ಸಾವಿರ ಹೆಕ್ಟೇರ್ ಪ್ರದೇಶಕ್ಕೆ ನೀರುಣಿಸುತ್ತಿದೆ. ಅರಕಲಗೂಡು ತಾಲ್ಲೂಕು ಮಾತ್ರವಲ್ಲದೇ ಎಡದಂಡೆ ನಾಲೆ ಕೆ.ಆರ್.ನಗರ ತಾಲ್ಲೂಕಿನ ಪಶುಪತಿ ಹಾಗೂ ಬಲದಂಡೆ ನಾಲೆ ಚುಂಚನಕಟ್ಟೆಯ ಕೆಸ್ತೂರು ಗೇಟ್ ವರೆಗೆ ಹಾದು ಹೋಗಿದೆ. ಇವೆರಡು ನಾಲೆ ಗಳಿಗೆ ನೀರು ಹರಿಸಲಾಗಿದ್ದು ರೈತರು ಭತ್ತದ ಸಸಿ ಮಡಿ ಬೆಳೆಸಿ ನಾಟಿ ಕಾರ್ಯ ನಡೆಸಿದ್ದಾರೆ. ಈ ಭಾಗದಲ್ಲಿ ಪ್ರಮುಖವಾಗಿ ರೈತರು ರಾಜಮುಡಿ, ರಾಜಭೋಗ ಭತ್ತವನ್ನು ಬೆಳೆಯುತ್ತಾರೆ.

**ಕಟಾವು ಪೂರ್ಣ :** ವಿಸ್ತಾರವಾದ ನೀರಾವರಿ ಪ್ರದೇಶ ಹೊಂದಿರುವ ಕಟ್ಟೇಪುರ ನಾಲಾ ಅಚ್ಚುಕಟ್ಟಿನಲ್ಲಿ ರೈತರು ಮುಂಗಾರು ಪೂರ್ವ ಮಳೆಗೂ ಮುನ್ನ ಹೆಚ್ಚಿನ ದಾಗಿ ಹೊಗೆಸೊಪ್ಪು ನಾಟಿ ಕಾರ್ಯ ನಡೆ ಸುತ್ತಾರೆ. ಇದೀಗ ಬಹುತೇಕ ಕಡೆ ತಂಬಾಕು ಕಟಾವು ಕಾರ್ಯ ಪೂರ್ಣಗೊಂಡಿದೆ. ಈ ಬಾರಿ ಮುಂಗಾರು ಪೂರ್ವ ಮಳೆ ಬಿಡುವಿಲ್ಲದೆ ಸುರಿದ ಪರಿಣಾಮ ಕಾವೇರಿ ನದಿ ಪಾತ್ರದ ತಗ್ಗು ಪ್ರದೇಶ ದಲ್ಲಿ ಬೆಳೆದ ತಂಬಾಕು ಬೆಳೆ ನೀರಿನಲ್ಲಿ ಮುಳು ಗಡೆಯಾಗಿತ್ತು. ಕೆಲವು ರೈತರು ನೆಲಗಡಲೆ, ಆಲ ಸಂದೆ, ಉದ್ದು, ಹೆಸರು, ಎಳ್ಳು ಸೇರಿ ದ್ವಿದಳ ಧಾನ್ಯ ಬೆಳೆಗಳನ್ನು ಬೆಳೆದಿದ್ದರು. ಇನ್ನೇನು ಫಸಲು ತೆಗೆದು ಕೊಳ್ಳಬೇಕು ಎನ್ನುವಷ್ಟರಲ್ಲಿ ನದಿ ಉಕ್ಕೇರಿ ಅನೇಕ ಕಡೆ ಪ್ರವಾಹದ ನೀರಿನಲ್ಲಿ ಸಿಲುಕಿ ಸಾಕಷ್ಟು ಬೆಳೆ ನಾಶವಾಗಿ ಅನ್ನದಾತರಿಗೆ ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಯಿತು. ಅಲ್ಪಸ್ವಲ್ಪ ಉಳಿದ ತಂಬಾಕು ಗಿಡಗಳಲ್ಲೇ ಎಲೆಗಳ ಕಟಾವು ಮುಗಿಸಿ ರೈತರು ಭತ್ತದ ನಾಟಿಗಾಗಿ ಕೃಷಿ ಚಟುವಟಿಕೆ ಬಿರುಸುಗೊಳಿಸಿರುವುದು ಕಂಡುಬಂದಿದೆ.

**ಇಳುವರಿ ಕುಂಠಿತ :** ವಾಡಿಕೆಯಂತೆ ಆಗಸ್ಟ್ ತಿಂಗಳಲ್ಲಿ ಭತ್ತದ ಕೃಷಿ ಪೂರ್ಣಗೊಳಿಸಿದರೇ ಇಳುವರಿ ಅಧಿಕವಾಗಿರುತ್ತದೆ. ಅಚ್ಚುಕಟ್ಟಿನಲ್ಲಿ ಹೆಚ್ಚು ತಂಬಾಕು, ದ್ವಿದಳ ಬೆಳೆಗಳನ್ನು ಕೈಗೊಳ್ಳುತ್ತಿರುವ ಪರಿಣಾಮ ಭತ್ತದ ಇಳುವರಿ ಮೇಲೆ ಹೊಡೆತ ಬೀಳುತ್ತಿದೆ. ಸೆಪ್ಟಂಬರ್ ತಿಂಗಳಿನಲ್ಲಿ ಭತ್ತದ ಪೈರು ನಾಟಿ ಮಾಡುವುದರಿಂದ ಗರ್ಭಧರಿಸುವ ಬೆಳೆ ನವೆಂಬರ್ ಹಾಗೂ ಡಿಸೆಂ ಬರ್ ತಿಂಗಳಿನಲ್ಲಿ ಚಳಿಗಾಲದ ಕೊರೆಗೆ ಸಿಲುಕು ತ್ತಿದೆ. ಹಾಲುಗಟ್ಟುವ ಭತ್ತದ ಕಾಳು ಕೊರೆ ನೀರಿಗೆ ಕರಗಿ ಜೊಳ್ಳಾಗಿ ಇಳುವರಿ ಕೂಡ ಕುಂಠಿತ ಗೊಳ್ಳುತ್ತಿದೆ. ಮುಖ್ಯವಾಗಿ ರೈತಾಪಿ ವರ್ಗದ ಜನರು ಹೆಚ್ಚಿನದಾಗಿ ಆದಾಯ ತರುವ ತಂಬಾಕು ಬೆಳೆಗೆ ಮಾರು ಹೋಗಿರುವುದರಿಂದ ರಾಸಾಯನಿಕ ರಸ ಗೊಬ್ಬರಗಳ ಅತಿಯಾದ ಬಳಕೆಯಿಂದ ಭೂಮಿ ಮೂಲ ಫಲವತ್ತತೆ ಕಳೆದುಕೊಂಡಿದ್ದು ಪ್ರಮುಖ ಆಹಾರದ ಭತ್ತದ ಬೆಳೆಯಲ್ಲಿ ಇಳುವರಿ ಕಳೆದು ಕೊಳ್ಳುವ ಸ್ಥಿತಿ ಎದುರಾಗಿದೆ.

> ಈ ಬಾರಿ ಉತ್ತಮ ಮಳೆಯಾಗಿದ್ದು ಹಾರಂಗಿ, ಹೇಮಾವತಿ, ಕಾವೇರಿ ನದಿ ಪಾತ್ರದ ನಾಲೆ ಗಳಲ್ಲಿ ನೀರಿನ ಕೊರತೆ ಇಲ್ಲ. ಹೀಗಾಗಿ ಭತ್ತದ ನಾಟಿ ಕಾರ್ಯ ಕೈಗೊಳ್ಳಲಾಗಿದೆ.
> -ರೈತ ರಾಜೇಗೌಡ, ರಾಮನಾಥಪುರ

> ಅರಕಲಗೂಡು ತಾಲ್ಲೂಕಿನ ಮಲ್ಲಿಪಟ್ಟಣ ಭಾಗದಲ್ಲಿ ರೈತರು ಈಗಾಗಲೇ ಭತ್ತದ ನಾಟಿ ಕಾರ್ಯ ಮುಗಿಸಿದ್ದಾರೆ. ಹೇಮಾವತಿ ಹಾಗೂ ಕಾವೇರಿ ನದಿ ಪಾತ್ರದ ನಾಲೆಗಳಲ್ಲಿ ಭತ್ತದ ನಾಟಿ ಕಾರ್ಯ ಪ್ರಗತಿ ಹಂತದಲ್ಲಿದ್ದು ರೈತರಿಗೆ ಅಗತ್ಯವಾದ ಬಿತ್ತನೆ ಬೀಜ, ರಸಗೊಬ್ಬರ ವಿತರಿಸಲಾಗಿದೆ.
> -ಕವಿತಾ, ಸಹಾಯಕ ಕೃಷಿ ನಿರ್ದೇಶಕಿ, ಅರಕಲಗೂಡು

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019